ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ   Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 74 ಸಂಚಿಕೆ- 74 | PAGE- 8 ಪುಟ-8 | ಶನಿವಾರ 26.04.2025 | RS.2/- ಬೆಲೆ 2/-

# ಉಗ್ರರ ವಿರುದ್ಧ ಪ್ರತಿಕಾರ ಆರಂಭ

# ಗಡಿಯಲ್ಲಿ ಉದ್ವಿಗ್ನ ವಾತಾವರಣ

ಮಲ್ಲಮ್ಮನುಡಿ ವಾರ್ತೆ ಶ್ರೀನಗರ: ಏ.25:ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ದಲ್ಲಿ ಭಯೋತ್ಪಾದಕರ ದಾಳಿಗೆ 26 ಅಮಾಯಕ ಹಿಂದೂಗಳು ಜೀವ ತೆತ್ತಿದ್ದರು. ಇದಕ್ಕೆ ಪ್ರತಿಯಾಗಿ ಭಾರತೀಯ ಸೇನೆ ಪ್ರತೀಕಾರ ಪ್ರಾರಂಭಿಸಿದೆ. ಉಗ್ರರ ಸದೆಬಡಿಯುವ ಶಪಥಗೈಯ್ದಿರುವ ಭಾರತೀಯ ಸೇನೆ ಮೊದಲ ದಿಟ್ಟ ಹೆಜ್ಜೆ ಇರಿಸಿದೆ. ಪಹಲ್ಗಾಮ್‌ನ ದಾಳಿಯಲ್ಲಿ ಭಾಗಿ ಆಗಿದ್ದಾನೆ ಎನ್ನಲಾದ ಲಷ್ಕರ್-ಇ-ತೈಬಾ ಉಗ್ರ ಆಸೀಫ್ ಶೇಖ್ ಮತ್ತು ಆದಿಲ್ ಮನೆಗಳನ್ನು ಸೇನೆ ಉಡಾಯಿಸಿದೆ.

ಬಿಹಾರದಲ್ಲಿ ಪ್ರಧಾನಿ ನರೇಂದ್ರ ಮೋದಿ , ಅಮಾಯಕರ ಹತ್ಯೆಗೆ ಪ್ರತೀಕಾರ ತೀರಿಸಿಕೊಳ್ಳೋದಾಗಿ ಹೇಳಿದ್ದರು. ಇದರ ಬೆನ್ನಲ್ಲೇ ಇವತ್ತು ಸೇನೆ ಅಖಾಡಕ್ಕೆ ಇಳಿದಿದೆ. ಕಾಶ್ಮೀರದ ಟ್ರಾಲ್‌ನಲ್ಲಿರುವ ಎಲ್‌ಇಟಿ ಭಯೋತ್ಪಾದಕ ಆಸಿಫ್ ಶೇಖ್‌ನ ಮನೆ, ಅನಂತ್‌ನಾಗ್ ಜಿಲ್ಲೆಯಲ್ಲಿರುವ ಆದಿಲ್ ಮನೆಯನ್ನು ಸ್ಫೋಟಿಸಲಾಗಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ಶೇಖ್ ಭಾಗಿಯಾಗಿದ್ದಾನೆಂದು ಭಯೋತ್ಪಾದನಾ ನಿಗ್ರಹ ಕಾರ್ಯಾಚರಣೆಯ ಭಾಗವಾಗಿ ಅಧಿಕಾರಿಗಳು ಶೇಖ್ ಮನೆ-





ಆಸ್ತಿಯನ್ನು ನಾಶಪಡಿಸಿದ್ದಾರೆ. ಟ್ರಾಲ್ ಮತ್ತು ಅನಂತ್‌ನಾಗ್ ಜಿಲ್ಲೆಯಲ್ಲಿ ಇಬ್ಬರು ಉಗ್ರರ ಮನೆಗಳನ್ನು ಧ್ವಂಸಗೊಳಿಸಲಾಗಿದೆ.

ಪಹಲ್ಗಾಮ್‌ನಲ್ಲಿ ಗುಂಡಿನ ಸುರಿಮಳೆ ಸುರಿಸಿ ಹಿಂದೂಗಳ ಹತ್ಯೆಗೈಯ್ದ ಉಗ್ರರಿಗೆ ಪಾಕಿಸ್ತಾನದಲ್ಲಿ ತರಬೇತಿ ನೀಡಲಾಗಿದೆ ಎಂಬ ಮಾಹಿತಿ ಪ್ರಾಥಮಿಕ ತನಿಖೆಯಲ್ಲಿ ಹೊರಬಿದ್ದಿದೆ. 5 ರಿಂದ 7 ಭಯೋತ್ಪಾದಕರು ಕೃತ್ಯ ಎಸಗಿರುವ ಬಗ್ಗೆ ಮಾಹಿತಿ ಸಿಕ್ಕಿದೆ. ಈ ಪೈಕಿ ಇಬ್ಬರು ಸ್ಥಳೀಯ ಉಗ್ರರೇ ಆಗಿದ್ದಾರೆ ಎಂಬ ಸುಳಿವು ಸಿಕ್ಕಿದೆ. ಈಗಾಗಲೇ ಇಬ್ಬರು ಉಗ್ರರ ಮನೆಗಳನ್ನು ಧ್ವಂಸ ಮಾಡಿರುವ ಸೇನೆ ಭಯೋತ್ಪಾದಕರ ಜಾಲ ಭೇದಿಸಲು ಕಾರ್ಯಾಚರಣೆ ಶುರು ಮಾಡಿದೆ.

ಅಮಾಯಕ 26 ಮಂದಿ ಹಿಂದೂಗಳ ಕಗ್ಗೊಲೆ ಮಾಡಿದ ಕಡುಪಾಪಿಗಳ ಹುಟ್ಟಡಗಿಸಲು ಭಾರತೀಯ ಸೇನೆ ಶಪಥ ಮಾಡಿದ್ದು, ಜಮ್ಮು ಮತ್ತು ಕಾಶ್ಮೀರದ ಬಂಡಿಪೋರಾ ಜಿಲ್ಲೆಯಲ್ಲಿ ಎನ್‌ಕೌಂಟರ್ ಆರಂಭಿಸಲಾಗಿದೆ. ಅಡಗಿ ಕುಳಿತಿರುವ ಉಗ್ರರು ಹಾಗೂ ಭಾರತೀಯ ಸೇನಾಪಡೆಗಳ ನಡುವೆ ಭಾರೀ ಗುಂಡಿನ ಚಕಮಕಿ ನಡೆದಿದೆ. ಈ ಕಾರ್ಯಾಚರಣೆ ವೇಳೆ ಲಷ್ಕರ್-ಎ ತೊಯ್ಬಾ ಸಂಘಟನೆಯ ಕಮಾಂಡರ್ ಅಲ್ತಾಫ್ ಲಲ್ಲಿಯನ್ನು ಫಿನಿಶ್ ಮಾಡಲಾಗಿದೆ.

ಬಂಡಿಪೋರಾ ಜಿಲ್ಲೆಯ ಬಾಜಿಪೋರಾ ಪ್ರದೇಶದಲ್ಲಿ ಉಗ್ರರು ಅಡಗಿರುವ ಬಗ್ಗೆ ಖಚಿತ ಮಾಹಿತಿ ಹಿನ್ನೆಲೆ ಭದ್ರತಾ ಪಡೆಗಳು ಕೂಂಬಿಂಗ್ ಕಾರ್ಯಾಚರಣೆ ಆರಂಭಿಸಿದೆ. ಈ ವೇಳೆ ಅಡಗಿ ಕುಳಿತಿದ್ದ ಉಗ್ರರು ಏಕಾಏಕಿ ಸೇನಾಪಡೆ ಮೇಲೆ ಗುಂಡಿನ ದಾಳಿ ನಡೆಸಲು ಆರಂಭಿಸಿದ್ದಾರೆ. ಪರಿಣಾಮ ಇಬ್ಬರು ಭದ್ರತಾಪಡೆ ಸಿಬ್ಬಂದಿಗೆ ಗಾಯಗಳಾಗಿವೆ. ಉಗ್ರರು

(2ನೇ ಪುಟ ನೋಡಿ)

## ಏ. ೩೦ ರಂದು ದೆಹಲಿಯ ಸಂಸತ್ ಭವನದಲ್ಲಿ ಬಸವ ಜಯಂತಿ ಆಚರಣೆ

ಬೆಂಗಳೂರು, ಏ. 25:ದೆಹಲಿಯ ಸಂಸತ್ ಭವನದ ಆವರಣದಲ್ಲಿ ಬಸವ ಜಯಂತಿಯನ್ನು ಏಪ್ರಿಲ್ 30 ರಂದು ಬೆಳಿಗ್ಗೆ 8 ಗಂಟೆಗೆ ಆಚರಿಸಲಾಗುವುದು ಎಂದು ಕೇಂದ್ರ ರೈಲ್ವೆ ಹಾಗೂ ಜಲಶಕ್ತಿ ರಾಜ್ಯ ಖಾತೆ ಸಚಿವ ವಿ ಸೋಮಣ್ಣ ಅವರು ತಿಳಿಸಿದರು.

ಇಂದು ಕಬ್ಬನ್ ಪಾರ್ಕ್ ಪ್ರೆಸ್‌ಕ್ಲಬ್‌ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಕಾರ್ಯಕ್ರಮದಲ್ಲಿ ಲೋಕಸಭಾ ಸ್ಪೀಕರ್ ಓಂ ಪ್ರಕಾಶ್ ಬಿರ್ಲಾ, ಕೇಂದ್ರ ಸಚಿವರುಗಳಾದ ಪ್ರಹ್ಲಾದ್ ಜೋಶಿ,




ಕುಮಾರಸ್ವಾಮಿ, ಸಿ.ಆರ್.ಪಾಟೀಲ್, ಶ್ರೀಮತಿ ನಿರ್ಮಲಾ ಸೀತಾರಾಮನ್, ಕುಮಾರಿ ಶೋಭಾ ಕರಂದ್ಲಾಜೆ, ಅಶ್ವಿನಿ ವೈಷ್ಣವ್, ಸೇರಿದಂತೆ ಹಿರಿಯ ಗಣ್ಯರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಬಸವಣ್ಣ ಇಡೀ ಸಮುದಾಯದ ನಾಯಕರು. ಜಗತ್ತಿನ ಮೇರು ವ್ಯಕ್ತಿತ್ವದ ಧಾರ್ಮಿಕ, ಸಾಂಸ್ಕೃತಿಕ ನಾಯಕ. ಅವರ ಸಾಮಾಜಿಕ ಸುಧಾರಣೆಗಳು, ಸಾಹಿತ್ಯ ಕೊಡುಗೆಗಳು ಅಪಾರ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಹೊಸ ಸಂಸತ್ ಭವನದ ಮೇಲೆ ಪ್ರಧಾನ ಮಂತ್ರಿ ನರೇಂದ್ರ ಮೋದಿ ಬಸವಣ್ಣವನರ ವಚನ ಬರೆಸಿದ್ದಾರೆ. ಅವರ "ಸಬ್ ಕಾ ಸಾಥ್ ಸಬ್ ಕಾ ವಿಕಾಸ್" ತತ್ವ

(2ನೇ ಪುಟ ನೋಡಿ)

## ರಾಜ್ಯಗಳಲ್ಲಿನ ಪಾಕಿಸ್ತಾನಿ ಪ್ರಜೆಗಳನ್ನು ಗುರುತಿಸಲು ಎಲ್ಲ ಮುಖ್ಯಮಂತ್ರಿಗಳಿಗೆ ಶಾ ಸೂಚನೆ

ಮಲ್ಲಮ್ಮನುಡಿವಾರ್ತೆ ನವದೆಹಲಿ:ಏ.25: ಪಹಲ್ಗಾಮ್ ಭಯೋತ್ಪಾದಕ ದಾಳಿ ಹಿನ್ನೆಲೆಯಲ್ಲಿ ಪಾಕಿಸ್ತಾನಕ್ಕೆ ತಕ್ಕ ಶಿಕ್ಷೆ ನೀಡಲು ಮುಂದಾಗಿರುವ ಕೇಂದ್ರ ಸರ್ಕಾರ ಈ ವಿಷಯದಲ್ಲಿ ರಾಜ್ಯಗಳು ಸಮನ್ವಯ ಸಾಧಿಸಲು ಕೇಳಿಕೊಂಡಿದ್ದಾರೆ.ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಮಾತನಾಡಿದ್ದು, ಆಯಾ ರಾಜ್ಯಗಳಲ್ಲಿರುವ ಎಲ್ಲಾ ಪಾಕಿಸ್ತಾನಿ ಪ್ರಜೆಗಳನ್ನು ಗುರುತಿಸಿ ಅವರು ಪಾಕಿಸ್ತಾನಕ್ಕೆ ಶೀಘ್ರ ಮರಳುವಂತೆ ಸೂಚಿಸಲು ಕೇಳಿಕೊಳ್ಳುತ್ತಿದ್ದಾರೆ. ಬಹುತೇಕ ಪ್ರವಾಸಿಗರು ಸೇರಿದಂತೆ 26 ಮಂದಿಯನ್ನು ಬಲಿ ತೆಗೆದುಕೊಂಡ ಪಹಲ್ಗಾಮ್ ಭಯೋತ್ಪಾದಕ ದಾಳಿಯಿಂದ ಉಭಯ ದೇಶಗಳ ನಡುವಿನ ಉದ್ವಿಗ್ನತೆ ಹೆಚ್ಚಾದ ಕಾರಣ, ಇದೇ ಏಪ್ರಿಲ್ 27 ರಿಂದ ಪಾಕಿಸ್ತಾನಿ ಪ್ರಜೆಗಳಿಗೆ



ನೀಡಲಾದ ಎಲ್ಲಾ ವೀಸಾಗಳನ್ನು ರದ್ದುಗೊಳಿಸುವುದಾಗಿ ಭಾರತ ಘೋಷಿಸಿತ್ತು. ಅದರ ಜೊತೆಗೆ ಪಾಕಿಸ್ತಾನದಲ್ಲಿ ವಾಸಿಸುವ ಭಾರತೀಯ ಪ್ರಜೆಗಳು ಆದಷ್ಟು ಬೇಗನೆ ತವರು ದೇಶಕ್ಕೆ ಮರಳುವಂತೆ ಸಲಹೆ ನೀಡಲಾಗಿದೆ. ರಾಜ್ಯದಲ್ಲಿರುವ ಪಾಕಿಸ್ತಾನಿ ಪ್ರಜೆಗಳ ಬಗ್ಗೆ ಛತ್ತೀಸ್‌ಗಢ ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ, ಪಹಲ್ಗಾಮ್‌ನಲ್ಲಿ ಹೆಚ್ಚಾಗಿ ಪ್ರವಾಸಿಗರ ಮೇಲೆ ಭಯೋತ್ಪಾದಕರು ನಿರಾಯುಧ ಅಮಾಯಕ ನಾಗರಿಕರ ಮೇಲೆ ದಾಳಿ ಮಾಡಿದ್ದಾರೆ. ಭಾರತ ಸರ್ಕಾರ ಈ ಬಗ್ಗೆ ಪಾಕಿಸ್ತಾನದ ವಿರುದ್ಧ ಕಠಿಣ ಕ್ರಮ ಕೈಗೊಳ್ಳುತ್ತಿದೆ. ಅಲ್ಪಾವಧಿಯ ವೀಸಾ ಹೊಂದಿರುವವರ ವೀಸಾಗಳನ್ನು ರದ್ದುಗೊಳಿಸಬೇಕೆಂದು ನಮಗೆ ಕೇಂದ್ರ ಗೃಹ ಇಲಾಖೆ ನಿರ್ದೇಶನ ನೀಡಿದೆ ಎಂದಿದ್ದಾರೆ.

## ಪಹಲ್ಗಾಮ್‌ಗೆ ರಾಹುಲ್ ಗಾಂಧಿ ಭೇಟಿ : ಗಾಯಗೊಂಡವರ ಆರೋಗ್ಯ ವಿಚಾರಣೆ



ಮಲ್ಲಮ್ಮನುಡಿವಾರ್ತೆ ಶ್ರೀನಗರ:ಏ.25: ಪ್ರವಾಸಿಗರ ಮೇಲೆ ಉಗ್ರರ ದಾಳಿ ನಡೆಸಿದ ಮೂರು ದಿನಗಳ ಬಳಿಕ ಪಹಲ್ಗಾಮ್‌ಗೆ ಕಾಂಗ್ರೆಸ್ ಸಂಸದ ಮತ್ತು ಲೋಕಸಭೆಯ ವಿಪಕ್ಷ ನಾಯಕ ರಾಹುಲ್ ಗಾಂಧಿ ಭೇಟಿ ನೀಡಿದ್ದಾರೆ. ಈ ವೇಳೆ ದಾಳಿಯಲ್ಲಿ ಗಾಯಗೊಂಡವರ ಆರೋಗ್ಯ ವಿಚಾರಿಸಿ, ಜಮ್ಮು ಮತ್ತು ಕಾಶ್ಮೀರ ಸಿಎಂ ಒಮರ್ ಅಬ್ದುಲ್ಲಾ ಅವರನ್ನು ಭೇಟಿ ಮಾಡಿ ದಾಳಿಯ ಕುರಿತ ವಿವರಗಳನ್ನು ಪಡೆದ್ದಾರೆ.

ಗಾಯಾಳುಗಳ ಭೇಟಿಯ ಬಳಿಕ ಮಾತನಾಡಿದ ಅವರು, ಉಗ್ರರ ಈ ದಾಳಿಯ ಹಿಂದಿನ ಉದ್ದೇಶ ಸಮಾಜವನ್ನು ವಿಭಜಿಸುವುದು. ಇದು ಒಂದು ಭಯಾನಕ ದುರಂತ. ದಾಳಿಯಲ್ಲಿ ಗಾಯಗೊಂಡವರ ಆರೋಗ್ಯ ವಿಚಾರಿಸಲು ಹಾಗೂ ದಾಳಿಯ ಕುರಿತ ಮಾಹಿತಿ ಪಡೆಯಲು ಆಗಮಿಸಿದ್ದೇನೆ ಎಂದು ಹೇಳಿದರು.

ಜಮ್ಮು ಮತ್ತು ಕಾಶ್ಮೀರದ ಜನರು ಹಾಗೂ ಇಡೀ ರಾಷ್ಟ್ರವೇ ಈ ಉಗ್ರರ

(2ನೇ ಪುಟ ನೋಡಿ)

## ವಕ್ಫ್ ಮಂಡಳಿಗಳಲ್ಲಿ ಮುಸ್ಲಿಮೇತರರನ್ನು ನೇಮಕ ಮಾಡಿದರೆ ಅದು ಹಸ್ತಕ್ಷೇಪವಲ್ಲ: ಕೇಂದ್ರ




ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಏ.25: 2025ರ ವಕ್ಫ್ ತಿದ್ದುಪಡಿ ಕಾಯ್ದೆಯನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ಕುರಿತು ಕೇಂದ್ರವು ಸುಪ್ರೀಂ ಕೋರ್ಟ್‌ನಲ್ಲಿ ತನ್ನ ಪ್ರತಿಕ್ರಿಯೆಯನ್ನು ಸಲ್ಲಿಸಿದ್ದು, ಕಳೆದ 100 ವರ್ಷಗಳಿಂದ ವಕ್ಫ್ ಅನ್ನು ಬಳಕೆದಾರರ ನೋಂದಣಿ ನಂತರವೇ ಗುರುತಿಸಲಾಗುತ್ತಿದೆಯೇ ಹೊರತು ಮೌಖಿಕವಾಗಿ ಅಲ್ಲ ಎಂದು ಹೇಳಿದೆ. ಆದ್ದರಿಂದ, ತಿದ್ದುಪಡಿ ಅಗತ್ಯವಾಗಿತ್ತು. ವಕ್ಫ್ ಕೌನ್ಸಿಲ್ ಮತ್ತು ವಕ್ಫ್ ಮಂಡಳಿಯಲ್ಲಿರುವ 22 ಸದಸ್ಯರಲ್ಲಿ ಗರಿಷ್ಠ ಇಬ್ಬರು ಮುಸ್ಲಿಮೇತರರಾಗಿರಬೇಕು ಎಂದು ಕೇಂದ್ರ ಸರ್ಕಾರ ಹೇಳಿದೆ. ಇದು ಎಲ್ಲರನ್ನೂ ಒಳಗೊಳ್ಳುವಿಕೆಯನ್ನು ಪ್ರತಿನಿಧಿಸುವ ಮತ್ತು ವಕ್ಫ್ ಆಡಳಿತದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ. ಸರ್ಕಾರಿ ಭೂಮಿಯನ್ನು ಉದ್ದೇಶಪೂರ್ವಕವಾಗಿ ಅಥವಾ ತಪ್ಪಾಗಿ ವಕ್ಫ್ ಆಸ್ತಿ ಎಂದು ಗುರುತಿಸುವುದು ಕಂದಾಯ ದಾಖಲೆಗಳನ್ನು ಸರಿಪಡಿಸುವ ಉದ್ದೇಶವಾಗಿದೆ ಮತ್ತು ಸರ್ಕಾರಿ ಭೂಮಿಯನ್ನು ಯಾವುದೇ ಧಾರ್ಮಿಕ ಸಮುದಾಯಕ್ಕೆ ಸೇರಿದ ಭೂಮಿಯೆಂದು ಪರಿಗಣಿಸಲಾಗುವುದಿಲ್ಲ ಎಂದು ಕೇಂದ್ರ ಹೇಳಿದೆ.

ಕೇಂದ್ರ ಸರ್ಕಾರವು ಸುಪ್ರೀಂ ಕೋರ್ಟ್‌ನಲ್ಲಿ ಸಲ್ಲಿಸಿದ ಉತ್ತರದ

(2ನೇ ಪುಟ ನೋಡಿ)


## 14 ಪ್ರವಾಸಿಗರು ಸುರಕ್ಷಿತ ವಾಪಸ್



ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:ಏ.25: ಕಾಶ್ಮೀರ ಪ್ರವಾಸಕ್ಕೆ ತೆರಳಿದ್ದ ಗಡಿ ಜಿಲ್ಲೆಯ ಬೀದರ್ ಮತ್ತು ಕಲಬುರಗಿ ಜಿಲ್ಲೆಯ ಪ್ರವಾಸಿಗರು ಸುರಕ್ಷಿತವಾಗಿ ತವರಿಗೆ ಮರಳಿದ್ದಾರೆ. ತಾಲೂಕಿನ ಭಾತಂಬ್ರಾ ಗ್ರಾಮದ ನಿವಾಸಿಗಳಾದ ಅಶೋಕ ಬಿರಾದಾರ್,

(2ನೇ ಪುಟ ನೋಡಿ)

## ಹತ್ತಿ ಗೋದಾಮಿಗೆ ಬೆಂಕಿ : ೩೦ ಲಕ್ಷಕ್ಕೂ ಹೆಚ್ಚು ಹಾನಿ



ಮಲ್ಲಮ್ಮ ನುಡಿ ವಾರ್ತೆ ಬೀದರ್:ಏ.25:ನಗರದ ಹಳೆ ತರಕಾರಿ ಮಾರುಕಟ್ಟೆಯಲ್ಲಿರುವ ಗಾದಿ ಮಾಡುವ ಹತ್ತಿ ಗೋದಾಮಿಗೆ ಗುರುವಾರ ರಾತ್ರಿ 9.30ರ ಸುಮಾರಿಗೆ

(2ನೇ ಪುಟ ನೋಡಿ)

## ಬೀದರ ಜಿಲ್ಲೆಯಲ್ಲಿ ನರೇಗಾ ಯೋಜನೆಯಡಿ ಮೇ ತಿಂಗಳಲ್ಲಿ 1ಲಕ್ಷ ಕೂಲಿಕಾರರಿಗೆ ಕೆಲಸ :ಸಿಇಓ ಡಾ. ಗಿರೀಶ ಬದೋಲೆ

ಮಲ್ಲಮ್ಮ ನುಡಿ ವಾರ್ತೆ ಬೀದರ : ಏ.25: ಜಿಲ್ಲೆಯಲ್ಲಿ ಬೇಸಿಗೆ ಕಾಲ ಪ್ರಾರಂಭವಾಗಿದ್ದು, ಏಪ್ರಿಲ್, ಮೇ ಮತ್ತು ಜೂನ್ ತಿಂಗಳು ಕೂಲಿಕಾರರು ಕೆಲಸ ನಿರೀಕ್ಷಿಸುವ ತಿಂಗಳುಗಳಾಗಿದ್ದು, ಮೇ ತಿಂಗಳಿನಲ್ಲಿ ಜಿಲ್ಲೆಯ ಎಂಟು ತಾಲೂಕುಗಳಲ್ಲಿ ಒಂದು ಲಕ್ಷ ಜನ ಕೂಲಿಕಾರರಿಗೆ ಕೆಲಸ ನೀಡಲಾಗುವುದು ಎಂದು ಬೀದರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಡಾ.ಗಿರೀಶ ಬದೋಲೆ ಅವರು ಸೂಚಿಸಿದರು.

ಅವರು ಶುಕ್ರವಾರದಂದು ಜಿಲ್ಲೆಯ ಎಲ್ಲಾ ತಾಲೂಕಾ ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರುಗಳು, ಟಿಸಿಗಳು, ಟಿಐಎಂಎಸ್, ಟಿಐಇಸಿಗಳ ಜೊತೆ ವಿಡಿಯೋ ಸಂವಾದದ ಮೂಲಕ



ಸಭೆ ಜರುಗಿಸಿ ಮಾತನಾಡಿದರು.

ರೈತಾಪಿ ವರ್ಗದ ಅತಿಸಣ್ಣ ರೈತರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳು ಮತ್ತು ಮಹಿಳೆಯರಿಗೆ ಬೇಸಿಗೆ ಕಾಲದಲ್ಲಿ ಬೇರೆಕಡೆ ಕೆಲಸ ಸಿಗುವುದಿಲ್ಲವಾದ್ದರಿಂದ ಅವರು ಮನೆಗಳಲ್ಲಿ ಖಾಲಿ ಕುಳಿತುಕೊಳ್ಳುವಂತೆ ಆಗಬಾರದು. ತಾಲೂಕಾ ಐಇಸಿ ತಂಡದವರು ಮತ್ತು ಗ್ರಾಪಂಗಳ ಸಿಬ್ಬಂದಿಯವರು ಮನೆಮನೆಗೆ ಭೇಟಿ ನೀಡಿ ಕೂಲಿಕಾರರನ್ನು ಕೆಲಸಕ್ಕೆ ಆಹ್ವಾನಿಸಬೇಕು. ಪ್ರತಿ ಗುರುವಾರ ಗ್ರಾಮ ಪಂಚಾಯತಿಗಳಲ್ಲಿ 'ರೋಜಗಾರ ದಿನಾಚರಣೆ' ಆಚರಣೆ ಮಾಡಿ ಕೂಲಿಕಾರರಿಗೆ ಅವರವರ ಗ್ರಾಮಗಳಲ್ಲಿಯೇ ಕೆಲಸ ನೀಡುವ ಮಾಹಿತಿ ನೀಡಬೇಕು. ಹೊಸ ಉದ್ಯೋಗ ಚೀಟಿಗಳನ್ನು ನೀಡಬೇಕು. ಕೂಲಿ ಕೆಲಸಕ್ಕೆ ಅರ್ಹರಿರುವ ಎಲ್ಲಾ ಗ್ರಾಮೀಣ ಕೂಲಿಕಾರರಿಗೆ ಕೆಲಸ ನೀಡಬೇಕು. ಮೇ ತಿಂಗಳಲ್ಲಿ ಪ್ರತಿ ಗ್ರಾಪಂಯಲ್ಲಿ 1000 ಕೂಲಿಕಾರರಿಗೆ ಕೆಲಸ ನೀಡಬೇಕು' ಎಂದರು.

ಏಪ್ರಿಲ್ ತಿಂಗಳಲ್ಲಿ ಜಿಲ್ಲೆಯಲ್ಲಿ 50,000 ಜನರಿಗೆ ಕೂಲಿಕೊಡಲು ಈ ಹಿಂದಿನ ವಿ.ಸಿಯಲ್ಲಿ ಸೂಚಿಸಿದ್ದರು. ಏಪ್ರಿಲ್ 25 ರಂದು ಇದ್ದಂತೆ ಜಿಲ್ಲೆಯಲ್ಲಿ 37000 ಜನ ಕೂಲಿಕಾರರಿಗೆ ಕೆಲಸ ನೀಡಿದ್ದು ಈ ತಿಂಗಳ ಮುಗಿಯುವುದರೊಳಗಾಗಿ ನೀಡಿದ ಗುರಿಯಂತೆ 50,000 ಜನ ಕೂಲಿಕಾರರಿಗೆ ಕೆಲಸ ನೀಡಬೇಕು ಎಂದು ಡಾ.ಗಿರೀಶ ಬದೋಲೆಯವರು ಎಲ್ಲಾ ತಾಲೂಕಾ ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚಿಸಿದರು.

ಈ ಸಭೆಯಲ್ಲಿ ಜಿಪಂ ಉಪಕಾರ್ಯದರ್ಶಿ ಮುಕ್ಕಣ್ಣ ಕರಿಗಾರ, ಸಹಾಯಕ ಕಾರ್ಯದರ್ಶಿ ಬೀರೇಂದ್ರಸಿಂಗ್, ಸಹಾಯಕ ನಿರ್ದೇಶಕ ಜಯಪ್ರಕಾಶ ಚೌಹಾಣ, ಗ್ರಾಮೀಣ ಕುಡಿಯುವ ನೀರು ಮತ್ತು ಪಂಚಾಯತ್ ರಾಜ್ ಇಂಜನಿಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರರುಗಳಾದ ರಾಮಲಿಂಗ ಬಿರಾದರ, ಶಿವಾಜಿ ಡೋಣೆ, ಎಡಿಪಿಸಿ ದೀಪಕ್, ಹಣುಮಂತ ಚಿದ್ರಿ, ಡಿಐಎಂಎಸ್ ಕೋಮಲಾ, ಡಿಐಇಸಿ ರಜನಿಕಾಂತ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ವೀರ ಸಾವರ್ಕರ್ ಬಗ್ಗೆ ಹಗುರ ಹೇಳಿಕೆ: ರಾಹುಲ್ ಗಾಂಧಿಗೆ ಸುಪ್ರೀಂ ಛೀಮಾರಿ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ,ಏ.25: ಸ್ವಾತಂತ್ರ್ಯ ಹೋರಾಟಗಾರ ವೀರ ಸಾವರ್ಕರ್ ಅವರ ಬಗ್ಗೆ ಅಪೇಕ್ಷಾರ್ಹ ಪದ ಬಳಸಿದ್ದ ಲೋಕಸಭೆಯ ವಿರೋಧ ಪಕ್ಷದ ನಾಯಕ ಹಾಗೂ ಕಾಂಗ್ರೆಸ್ ಮುಖಂಡ ರಾಹುಲ್ ಗಾಂಧಿಗೆ ಸುಪ್ರೀಂಕೋರ್ಟ್ ಛೀಮಾರಿ ಹಾಕಿದೆ.

ಯಾವುದೇ ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಲಘುವಾಗಿ ಮಾತನಾಡುವುದು ಇಲ್ಲವೇ ಆಕ್ಷೇಪಾರ್ಹ ಪದ ಬಳಕೆ ಮಾಡುವುದನ್ನು ನ್ಯಾಯಾಲಯ ಒಪ್ಪುವುದಿಲ್ಲ, ಇಂಥ ಹೇಳಿಕೆಗಳನ್ನು ನ್ಯಾಯಾಲಯ ಅನುಮತಿಸುವುದಿಲ್ಲ. ನಿಮ್ಮ ತಪ್ಪುಗಳನ್ನು ತಿದ್ದಿಕೊಳ್ಳಬೇಕು. ಒಂದು ವೇಳೆ ಇದು ಪುನರಾವರ್ತನೆಯಾದರೆ ಸ್ವಯಂಪ್ರೇರಿತ ದೂರು ದಾಖಲಿಸಿಕೊಂಡು ಕಾನೂನು ಕ್ರಮ ಜರುಗಿಸಬೇಕಾಗುತ್ತದೆ ಎಂದು ಎಚ್ಚರಿಕೆ ಕೊಟ್ಟಿದೆ.




ಮಹಾರಾಷ್ಟ್ರದ ಆಕೋಲ ಜಿಲ್ಲೆಯಲ್ಲಿ ಭಾರತ್ ಜೋಡೊ ಕಾರ್ಯಕ್ರಮದ ವೇಳೆ ರಾಹುಲ್ ಗಾಂಧಿ ಅವರು ವೀರ ಸಾವರ್ಕರ್ ಕುರಿತು ಬ್ರಿಟಿಷ್ ಸರ್ಕಾರದಿಂದ ಪಿಂಚಣಿ ಪಡೆದ ಆಂಗ್ಲರ ಸೇವಕ ಎಂದು ಟೀಕೆ ಮಾಡಿದ್ದರು. ಹೀಗಾಗಿ ರಾಹುಲ್ ಗಾಂಧಿ ವಿರುದ್ಧ ಮಾನನಷ್ಟ ಮೊಕದ್ದಮೆ ಹೂಡಲಾಗಿತ್ತು. ವಿಚಾರಣೆ ನಡೆಸಿದ್ದ ಅಲಹಾಬಾದ್ ಹೈಕೋರ್ಟ್ ಸಮನ್ಸ್ ರದ್ದುಗೊಳಿಸಲು ನಿರಾಕರಿಸಿತ್ತು. ಇದನ್ನು ಪ್ರಶ್ನಿಸಿ ಸುಪ್ರೀಂಕೋರ್ಟ್‌ಗೆ ರಾಹುಲ್ ಮೇಲ್ಮನವಿ ಅರ್ಜಿ ಸಲ್ಲಿಸಿದ್ದರು. ಅರ್ಜಿ ವಿಚಾರಣೆ ಕೈಗೆತ್ತಿಕೊಂಡ ನ್ಯಾಯಮೂರ್ತಿಗಳಾದ ದೀಪಂಕರ್ ದತ್ತ ಮತ್ತು ಮನಮೋಹನ್ ಅವರಿದ್ದ

(2ನೇ ಪುಟ ನೋಡಿ)

ಒಂದನೇ ಪುಟದಿಂದ

## ಭವನದಲ್ಲಿ ಬಸವ ಜಯಂತಿ ಆಚರಣೆ

ಬೇರೆ ಅಲ್ಲ, ಬಸವಣ್ಣನವರ "ಇವ ನಾರವ ಇವ ನಾರವ ಇವ ನಮ್ಮವ" ಎಂಬ ವಚನವನ್ನು ಹೋಲುತ್ತದೆ ಎಂದು ತಿಳಿಸಿದರು.ರಾಜ್ಯದ ಇತಿಹಾಸವನ್ನು ದೇಶಕ್ಕೆ ಮತ್ತು ಜಗತ್ತಿಗೆ ಪರಿಚಯಿಸಬೇಕಾಗಿದೆ. ಸಂಸತ್ ಭವನದಲ್ಲಿ ಬಸವ ಜಯಂತಿ ಆಚರಣೆಯು ಒಂದು ಸಣ್ಣ ಪ್ರಯತ್ನವಷ್ಟೇ. ಬೇರೆ ರಾಜ್ಯಗಳಲ್ಲಿ ಆಯಾಯ ನಾಯಕರುಗಳ ಹೆಸರಿನ ವಿಶ್ವವಿದ್ಯಾಲಯಗಳಿವೆ. ಆದರೆ ಕರ್ನಾಟಕದಲ್ಲಿ ಬಸವಣ್ಣನವರ ಹೆಸರಿನ ಒಂದು ವಿಶ್ವವಿದ್ಯಾಲಯ ಇರಬೇಕು. ಕಲ್ಬುರ್ಗಿ ವಿಶ್ವವಿದ್ಯಾಲಯಕ್ಕೆ ಬಸವಣ್ಣನವರ ಹೆಸರಿಟ್ಟರೆ ಸೂಕ್ತ ಎಂದು ತಮ್ಮ ಅಭಿಪ್ರಯವನ್ನು ವ್ಯಕ್ತಪಡಿಸಿದರು.ಬಸವಣ್ಣ ಹಾಗೂ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆದರ್ಶಗಳು ಸೂರ್ಯ ಚಂದ್ರ ಇರುವವರೆಗೂ ಇರುತ್ತದೆ. ಅವರ ಆದರ್ಶಗಳನ್ನು ನಾವು ಪಾಲಿಸಬೇಕು ಎಂದು ತಿಳಿಸಿದರು.ಸರ್ಕಾರ ನಿಂತ ನೀರಲ್ಲ ಹರಿಯುವ ನೀರು. ಎಲ್ಲಾ ರಾಜ್ಯದ ಅಭಿವೃದ್ಧಿಯಾಗಬೇಕು ಸಾಮಾನ್ಯ ಜನರನ್ನು ಮೇಲ್ಪಂಕ್ತಿಗೆ ತರಬೇಕು ಎಂಬುದು ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ಆಶಯವಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಅಧ್ಯಕ್ಷ ಶಿವಾನಂದ ತಗಡೂರು, ಬೆಂಗಳೂರು ಪ್ರೆಸ್‌ಕ್ಲಬ್ ಕಾರ್ಯದರ್ಶಿಗಳಾದ ಶಿವಕುಮಾರ್ ಬೆಳ್ಳಿತಟ್ಟೆ, ಉಪಸ್ಥಿತರಿದ್ದರು.

## ನೇಮಕ ಮಾಡಿದರೆ ಅದು ಹಸ್ತಕ್ಷೇಪವಲ್ಲ: ಕೇಂದ್ರ

ಮೂಲಕ, ಕಾನೂನನ್ನು ಪ್ರಶ್ನಿಸುವ ಅರ್ಜಿಗಳನ್ನು ವಜಾಗೊಳಿಸಬೇಕೆಂದು ಒತ್ತಾಯಿಸಿದೆ. ಯಾವುದೇ ಕಾನೂನಿನ ನಿಬಂಧನೆಗೆ ಸುಪ್ರೀಂ ಕೋರ್ಟ್ ಭಾಗಶಃ ಮಧ್ಯಂತರ ತಡೆಯಾಜ್ಞೆ ವಿಧಿಸಲು ಸಾಧ್ಯವಿಲ್ಲ ಎಂದು ಕೇಂದ್ರ ಸರ್ಕಾರ ತನ್ನ ಉತ್ತರದಲ್ಲಿ ತಿಳಿಸಿದೆ. ನ್ಯಾಯಾಂಗ ಪರಿಶೀಲನೆಯ ಮೂಲಕ ಇಡೀ ಕಾನೂನನ್ನು ನಿಲ್ಲಿಸಬೇಕು. ಇದಲ್ಲದೆ, ಜಂಟಿ ಸಂಸದೀಯ ಸಮಿತಿಯ ಸಲಹೆಗಳ ಮೇರೆಗೆ ಸಂಸತ್ತು ಮಾಡಿದ ಕಾನೂನನ್ನು ಎಚ್ಚರಿಕೆಯಿಂದ ಪರಿಗಣಿಸಿದ ನಂತರವೇ ಮಾಡಿರಬೇಕು ಎಂದು ನಂಬಲಾಗಿದೆ. ವಕ್ಫ್ ಮುಸ್ಲಿಮರ ಧಾರ್ಮಿಕ ಸಂಸ್ಥೆಯಲ್ಲ, ಬದಲಾಗಿ ಶಾಸನಬದ್ಧ ಸಂಸ್ಥೆಯಾಗಿದೆ

ವಕ್ಫ್ ತಿದ್ದುಪಡಿ ಕಾಯ್ದೆಯ ಪ್ರಕಾರ, ಈ ಕಾನೂನು ಚುನಾಯಿತ ಸಾರ್ವಜನಿಕ ಪ್ರತಿನಿಧಿಗಳ ಭಾವನೆಗಳನ್ನು ಪ್ರತಿಬಿಂಬಿಸುತ್ತದೆ. ಅವರು ಅದನ್ನು ಬಹುಮತದಿಂದ ಅಂಗೀಕರಿಸಿದವರು. ಈ ಮಸೂದೆಯನ್ನು ಅಂಗೀಕರಿಸುವ ಮೊದಲು, ಜಂಟಿ ಸಂಸದೀಯ ಸಮಿತಿಯ 36 ಸಭೆಗಳು ನಡೆದವು ಮತ್ತು 97 ಲಕ್ಷಕ್ಕೂ ಹೆಚ್ಚು ಪಾಲುದಾರರು ಸಲಹೆಗಳು ಮತ್ತು ಜ್ಞಾಪಕ ಪತ್ರಗಳನ್ನು ನೀಡಿದರು. ಸಮಿತಿಯು ದೇಶದ ಹತ್ತು ದೊಡ್ಡ ನಗರಗಳಿಗೆ ಭೇಟಿ ನೀಡಿ ಸಾರ್ವಜನಿಕರ ನಡುವೆ ಹೋಗಿ ಅವರ ಅಭಿಪ್ರಾಯಗಳನ್ನು ತಿಳಿದುಕೊಂಡಿತು ಎಂದು ಕೇಂದ್ರ ಹೇಳಿದೆ.

## ಗಾಯಗೊಂಡವರ ಆರೋಗ್ಯ ವಿಚಾರಣೆ

ದಾಳಿಯನ್ನು ತೀವ್ರವಾಗಿ ಖಂಡಿಸಿದ್ದಾರೆ. ಮತ್ತು ಈ ಸಮಯದಲ್ಲಿ ರಾಷ್ಟ್ರವನ್ನು ಸಂಪೂರ್ಣವಾಗಿ ಬೆಂಬಲಿಸಿದೆ. ಗಾಯಗೊಂಡವರ ಆರೋಗ್ಯವನ್ನು ವಿಚಾರಿಸಿದ್ದೇನೆ. ಕುಟುಂಬ ಸದಸ್ಯರನ್ನು ಕಳೆದುಕೊಂಡ ಎಲ್ಲರಿಗೂ ನನ್ನ ಪ್ರೀತಿ, ವಾತ್ಸಲ್ಯವಿದೆ. ಇಡೀ ರಾಷ್ಟ್ರವು ಒಗ್ಗಟ್ಟಿನಿಂದ ನಿಂತಿದೆ. ನಾವು ಗುರುವಾರ ಸರ್ಕಾರದೊಂದಿಗೆ ಸಭೆ ನಡೆಸಿದ್ದೇವೆ. ಕಾಂಗ್ರೆಸ್ ಪಕ್ಷವು ಈ ದಾಳಿಯನ್ನು ಖಂಡಿಸಿದೆ ಎಂದರು. ಉಗ್ರರ ವಿರುದ್ಧ ಸರ್ಕಾರ ಕೈಗೊಳ್ಳುವ ಎಲ್ಲಾ ನಿರ್ಧಾರಗಳಿಗೆ ನಮ್ಮ ಬೆಂಬಲವಿದೆ. ಸಮಾಜವನ್ನು ವಿಭಜಿಸುವುದೇ ಉಗ್ರರ ಈ ದಾಳಿಯ ಹಿಂದಿನ ಉದ್ದೇಶ. ಉಗ್ರರ ಈ ಪ್ಲಾನ್ ವಿಫಲಗೊಳಿಸಲು ಪ್ರತಿಯೊಬ್ಬ ಭಾರತೀಯನೂ ಒಗ್ಗಟ್ಟಿನಿಂದಿರುವುದು ಬಹಳ ಮುಖ್ಯ ಎಂದು ಹೇಳಿದರು. ಕೆಲವರು ಕಾಶ್ಮೀರ ಮತ್ತು ದೇಶದ ಉಳಿದ ಭಾಗಗಳಲ್ಲಿ ನನ್ನ ಸಹೋದರ ಹಾಗೂ ಸಹೋದರಿಯರ ಮೇಲೆ ದಾಳಿ ಮಾಡುವುದನ್ನು ನೋಡಿದರೆ ದುಃಖವಾಗುತ್ತದೆ. ನಾವೆಲ್ಲರೂ ಒಟ್ಟಾಗಿ ನಿಂತು ಇಂತಹ ದುಷ್ಟರ ವಿರುದ್ಧ ಹೋರಾಡಬೇಕು. ಅಲ್ಲದೇ ಭಯೋತ್ಪಾದನೆಯನ್ನು ಶಾಶ್ವತವಾಗಿ ತೊಲಗಿಸುವುದು ಬಹಳ ಮುಖ್ಯ ಎಂದು ನಾನು ಭಾವಿಸುತ್ತೇನೆ. ನಾನು ಮುಖ್ಯಮಂತ್ರಿ ಮತ್ತು ಲೆಫ್ಟಿನೆಂಟ್ ಗವರ್ನರ್ ಅವರನ್ನು ಸಹ ಭೇಟಿಯಾದೆ. ದಾಳಿಯ ಮಾಹಿತಿ ಪಡೆದು, ನಾನು ಮತ್ತು ನನ್ನ ಪಕ್ಷ ಸದಾ ನಿಮ್ಮೊಂದಿಗಿರುತ್ತದೆ ಎಂದು ಭರವಸೆ ನೀಡಿದ್ದೇನೆ ಎಂದರು.

## 14 ಪ್ರವಾಸಿಗರು ಸುರಕ್ಷಿತ ವಾಪಸ್

ಸಾಧನಾ ಅಶೋಕ ಬಿರಾದಾರ್ ಸೇರಿದಂತೆ ಬೀದರ್ ನ ನಾಲ್ವರು ಮತ್ತು ಕಲಬುರಗಿ ಜಿಲ್ಲೆಯ 10 ಜನರು ಸೇರಿ ಏ.21 ರಂದು ಕಾಶ್ಮೀರ ಪ್ರವಾಸ ಕೈಗೊಂಡಿದ್ದರು.ಏ.22ರಂದು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ಪ್ರವಾಸಿಗರ ಮೇಲೆ ದಾಳಿ ನಡೆಸಿದ್ದರು.ಘಟನೆ ಸಂದರ್ಭದಲ್ಲಿ ಶ್ರೀನಗರದಲ್ಲಿದ್ದ ಈ ಎಲ್ಲ ಪ್ರವಾಸಿಗರು ಆತಂಕಕ್ಕೊಳಗಾಗಿದರು. ತಕ್ಷಣಕ್ಕೆ ತಮ್ಮ ಪ್ರವಾಸ ಸ್ಥಗಿತಗೊಳಿಸಿ ತವರಿಗೆ ಮರಳುವ ನಿರ್ಧಾರ ಕೈಗೊಂಡಿದ್ದರು.ಪ್ರವಾಸದಲ್ಲಿದ್ದ ತಾಲೂಕಿನ ಅಶೋಕ ಬಿರಾದಾರ್ ಅವರು ತಮ್ಮ ಸ್ನೇಹಿತರ ಜತೆಗೆ ಮಾತನಾಡಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರನ್ನು ಸಂಪರ್ಕಿಸಿ ತಮ್ಮನ್ನು ಸುರಕ್ಷಿತ ವಾಗಿ ತವರಿಗೆ ಕರೆಸಿಕೊಳ್ಳುವಂತೆ ಮನವಿ ಮಾಡಿದ್ದರು.ಸಚಿವ ಈಶ್ವರ ಖಂಡ್ರೆ ಅವರು ರಾಜ್ಯದ ಪ್ರತಿನಿಧಿ ಸಚಿವ ಸಂತೋಷ ಲಾಡ್ ಅವರ ಜತೆಗೆ ನಿರಂತರ ಸಂಪರ್ಕದಲ್ಲಿದ್ದು ವಿಶೇಷ ವಿಮಾನದ ಮೂಲಕ ಎಲ್ಲ ಪ್ರವಾಸಿಗರನ್ನು ರಾಜ್ಯಕ್ಕೆ ಸುರಕ್ಷಿತವಾಗಿ ಕರೆಸಿಕೊಂಡಿದ್ದಾರೆ.ಪ್ರವಾಸಿಗರು ವಿಶೇಷ ವಿಮಾನದ ಮೂಲಕ ಗುರುವಾರ ಬೆಂಗಳೂರಿಗೆ ಸೇಫ್ ಆಗಿ ತಲುಪಿದ್ದಾರೆ.ಸಚಿವ ಖಂಡ್ರೆಗೆ ಕೃತಜ್ಞತೆ :ರಾಜ್ಯಕ್ಕೆ ವಿಶೇಷ ವಿಮಾನದ ಮೂಲಕ ಸುರಕ್ಷಿತವಾಗಿ ಕರೆಸಿಕೊಳ್ಳಲು ಸಹಕರಿಸಿದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರನ್ನು ಪ್ರವಾಸಿಗರು ಕೃತಜ್ಞತೆ ಸಲ್ಲಿಸಿದ್ದಾರೆ. ತಾಲೂಕಿನ ಭಾತಂಬ್ರಾ ಗ್ರಾಮದ ಅಶೋಕ ಬಿರಾದಾರ್, ಸಾಧನಾ ಅಶೋಕ ಬಿರಾದಾರ್, ಬೀದರ್‌ನ ರವೀಂದ್ರಕುಮಾರ, ಮಲ್ಲಿಕಾ ಮತ್ತು ಕಲಬುರಗಿ ಜಿಲ್ಲೆಯ ವಿಜಯಕುಮಾರ, ಗುರಣ್ಣ, ಶರಣಮ್ಮ, ಬಸವರಾಜ, ಅನಂತಮ್ಮ, ಸುರೇಶ್, ಅನುರಾಧಾ, ಸಿದ್ರಾಮ, ಭಾರತಿ ಮತ್ತು ಬಿ.ವಿ.ಕುಲಕರ್ಣಿ ಪ್ರವಾಸಕ್ಕೆ ತೆರಳಿದ್ದರು.ಕಾಶ್ಮೀರಕ್ಕೆ ಸಂಬಂಧಿಕರು, ಸ್ನೇಹಿತರೊಂದಿಗೆ ಪ್ರವಾಸಕ್ಕೆ ತೆರಳಿದ ನಮ್ಮನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಸಂಪರ್ಕಿಸಿ ಸುರಕ್ಷಿತವಾಗಿ ರಾಜ್ಯಕ್ಕೆ ಕರೆಸಿಕೊಂಡಿದ್ದಾರೆ ಅವರನ್ನು ಕೃತಜ್ಞತೆ ಸಲ್ಲಿಸುತ್ತೇವೆ.

– ಅಶೋಕ ಬಿರಾದಾರ್ ಭಾತಂಬ್ರಾ

## ಕೇಬಲ್ ಉತ್ಪಾದನಾ ಘಟಕ ಸ್ಥಾಪನೆ ಹಿನ್ನೆಲೆ: ದಕ್ಷಿಣ ಕೋರಿಯಾ ನಿಯೋಗ ಕಲಬುರಗಿಗೆ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.25: ಕಲಬುರಗಿಯಲ್ಲಿ ಕೇಬಲ್ ಉತ್ಪಾದನಾ ಘಟಕ ಮತ್ತು ಗೋದಾಮು ಸೌಲಭ್ಯವನ್ನು ಸ್ಥಾಪಿಸುವಸಂಬಂಧಗುರುವಾರ ದಕ್ಷಿಣ ಕೋರಿಯಾದ 3ಸಿ ಟೇ ಯಾಂಗ್‌ನ ಸ್ಥಾಪಕ ಮತ್ತು ಸಿ.ಇ.ಓ ಚಾಂಗ್–ಸೂನ್ ಹ್ವಾಂಗ್ ನೇತೃತ್ವದ ನಿಯೋಗವು ಕಲಬುರಗಿಗೆ ಭೇಟಿ ನೀಡಿತು.

ಕಲಬುರಗಿಯ ನಂದೂರ್–ಕೆಸರಟಗಿ ಕೈಗಾರಿಕಾ ಪ್ರದೇಶಕ್ಕೆ ಭೇಟಿ ನೀಡಿದ ನಿಯೋಗ ಇಲ್ಲಿನ ಪರಿಸರ ವ್ಯವಸ್ಥೆ ಮತ್ತು ಭೂಮಿಯನ್ನು ಪರಿಶೀಲಿಸಿ ಲಭ್ಯವಿರುವ ಇತರೆ ಸೌಲಭ್ಯಗಳು ಮತ್ತು ಸರ್ಕಾರದ ನೀತಿ ನಿಯಮಗಳ ಕುರಿತು ಸ್ಥಳೀಯ ಅಧಿಕಾರಿಗಳೊಂದಿಗೆ ಚರ್ಚಿಸಿ ಮಾಹಿತಿ ಪಡೆಯಿತು.

ಕೇಬಲ್ ಉತ್ಪಾದನಾ ಘಟಕ ಸ್ಥಾಪನೆಯಾದರೆ ಜಿಲ್ಲೆಗೆ ವಿದೇಶಿ ನೇರ ಹೂಡಿಕೆ ಬರಲಿದ್ದು, ಸ್ಥಳೀಯವಾಗಿ 100 ಉದ್ಯೋಗಗಳು ಸಹ ಸೃಷ್ಟಿಯಾಗಲಿದೆ.

ಜಿಲ್ಲಾ ಕೈಗಾರಿಕೆ ಕೇಂದ್ರದ ಉಪನಿರ್ದೇಶಕ ಅಬ್ದುಲ್ ಅಜೀಮ್, ಕೆ.ಐ.ಎ.ಡಿ.ಬಿ. ಸಹಾಯಕಕಾರ್ಯನಿರ್ವಾಹಕ ಅಭಿಯಂತ ಪರಮೇಶ್ವರ ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಕರ್ನಾಟಕ ಜಾನಪದ ಅಕಾಡೆಮಿ ಸ್ಥಾಯಿ ಸಮಿತಿ ಸದಸ್ಯರಾಗಿ ಸೋನಾರೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 25 : ಕರ್ನಾಟಕಜಾನಪದಅಕಾಡೆಮಿ ಕೇಂದ್ರಕಛೇರಿಯಲ್ಲಿ ಇತ್ತಿಚೆಗೆ ನಡೆದಸಭೆಯಲ್ಲಿಸರ್ವಸದಸ್ಯರ ನಿರ್ಣಯದಂತೆ 2025–2026ನೇ ಸಾಲಿನ ಸ್ಥಾಯಿ ಸಮಿತಿ ಸದಸ್ಯರಾಗಿ ಆಯ್ಕೆ ಮಾಡಲಾಗಿದೆಎಂದುಕರ್ನಾಟಕ ಜಾನಪದಅಕಾಡೆಮಿರಜಿಸ್ಟರ್ ನಮ್ರತಾ ಅವರು ತಿಳಿಸಿದ್ದಾರೆ.

ಆದರಿಂದ ಕಸಾಪ ಜಿಲ್ಲಾಧ್ಯಕ್ಷ ಸುರೇಶ ಚೆನ್ನಶೆಟ್ಟಿ, ಹಿರಿಯ ಕಲಾವಿದ ಶಂಭುಲಿಂಗ ವಾಲದೊಡ್ಡಿ, ಪ್ರಮುಖರಾದ ಸುನೀಲ ಕಡ್ಡೆ, ದೇವದಾಸ ಚಿಮಕೋಡೆ,ಪತ್ರಕರ್ತ ಸುನೀಲ ಭಾವಿಕಟ್ಟಿ, ರವಿ ಕಾಂಬಳೆ, ಮಾರುತಿ ಮಾಸ್ಟರ್,ಮಾರುತಿ ಏಣಕೂರೆ, ಚಂದ್ರಕಾಂತ ಹಳ್ಳಿಖೇಡ್ಕರ್, ಸಂತೋಷ ಏಣಕೂರೆ, ಅಂಬರೀಷ ಮಲ್ಲೇಶಿ, ಸೇರಿದಂತೆ ಜಿಲ್ಲೆಯ ಕಲಾವಿದರು, ಸಾಹಿತಿಗಳು, ಪ್ರಗತಿಪರ ಚಿಂತಕರು ಸೇರಿದಂತೆ ಅನೇಕರು ಹರ್ಷ ವ್ಯಕ್ತಪಡಿಸಿದ್ದಾರೆ.

## ರಾಹುಲ್ ಗಾಂಧಿಗೆ ಸುಪ್ರೀಂ ಛೀಮಾರಿ

ವಿಭಾಗೀಯ ಪೀಠ ರಾಹುಲ್ ಗಾಂಧಿ ಹೇಳಿಕೆಗೆ ಛೀಮಾರಿ ಹಾಕಿತು.

ವಸಾಹತುಶಾಹಿ ಸರ್ಕಾರದಿಂದ ಪಿಂಚಣಿ ಪಡೆದ ಬ್ರಿಟಿಷ್ ಸೇವಕ ಎಂದು ಹೇಳಿದ್ದೀರಿ. ಸ್ವಾತಂತ್ರ್ಯ ಹೋರಾಟಗಾರರನ್ನು ಹೀಗೆ ಅವಮಾನಿಸುವುದು ಎಷ್ಟರಮಟ್ಟಿಗೆ ಸರಿ ಎಂದು ಪ್ರಶ್ನಿಸಿತು. ನೀವು ಸಂಸದರು ಮೇಲಾಗಿ ಲೋಕಸಭೆಯ ಪ್ರತಿಪಕ್ಷದ ನಾಯಕರು. ರಾಜಕೀಯ ನಾಯಕರಾಗಿ ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಈ ರೀತಿ ವಿವಾದಾತ್ಮಕ ಪದಗಳನ್ನು ಏಕೆ ಬಳಸುತ್ತೀರಿ. ಪ್ರಚೋದಿಸುವ ಉದ್ದೇಶ ಇಲ್ಲದಿದ್ದರೆ ಅಂಥ ಹೇಳಿಕೆಗಳನ್ನು ಏಕೆ ನೀಡುತ್ತಿದ್ದೀರಿ ಎಂದು ನ್ಯಾಯಮೂರ್ತಿಗಳು ಪ್ರಶ್ನೆಗಳ ಸುರಿಮಳೆಗೈದರು.

ಮಹಾತ್ಮ ಗಾಂಧಿ ಅವರೇ ವೀರಸಾವರ್ಕರ್ ಅವರನ್ನು ನಿಷ್ಠಾವಂತ ಸೇವಕ ಎಂದು ಬಳಸಿರುವುದು ನಿಮ್ಮ ಕಕ್ಷಿದಾರರಿಗೆ ಗೊತ್ತಿದೆಯೇ? ನಿಮ್ಮ ಅಜ್ಜಿ ಕೂಡ ಇವರಿಗೆ ಪತ್ರವನ್ನು ಬರೆದಿದ್ದರು ಎಂಬುದನ್ನು ಮರೆತುಬಿಟ್ಟಿದ್ದೀರಿ? ಮುಂದೆ ಇಂಥ ಹೇಳಿಕೆಗಳನ್ನು ಕೊಡಬೇಡಿ ಎಂದು ನಿಮ್ಮ ಕಕ್ಷಿದಾರರಿಗೆ ಹೇಳಬೇಕು ಎಂದು ರಾಹುಲ್ ಪರ ವಕೀಲರಿಗೆ ನ್ಯಾಯಾಲಯ ಸೂಚಿಸಿತು.

ಸದ್ಯ ವಿಚಾರಣೆಗೆ ತಡೆಯಾಜ್ಞೆ ನೀಡಲು ಸುಪ್ರೀಂಕೋರ್ಟ್ ಒಪ್ಪಿಗೆ ಸೂಚಿಸಿದೆ. ನೀವು ಪದೇ ಪದೇ ಇದೇ ರೀತಿ ಹೇಳಿಕೆಗಳನ್ನು ಕೊಡುವುದಾದರೆ ಸ್ವಯಂಪ್ರೇರಿತ ದೂರು ದಾಖಲು ಮಾಡುತ್ತೇವೆ. ನಮ್ಮ ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಟೀಕೆ ಮಾಡಲು ನಾವು ಯಾರಿಗೂ ಅವಕಾಶ ಕೊಡುವುದಿಲ್ಲ. ಎಚ್ಚರ ಇಟ್ಟುಕೊಂಡು ಮಾತನಾಡಿ ಎಂದು ರಾಹುಲ್ ಗಾಂಧಿ ಅವರಿಗೆ ಸೂಚಿಸಿದೆ.ಇತಿಹಾಸ ಗೊತ್ತಿಲ್ಲದವರು ತಿಳಿದುಕೊಂಡು ಮಾತನಾಡಬೇಕು. ನಮಗೆ ವಾಕ್ ಸ್ವಾತಂತ್ರವಿದೆ ಎಂದು ಬಾಯಿಗೆ ಬಂದಂತೆ ಮಾತನಾಡಬಾರದು, ಜವಾಬ್ದಾರಿಯುತ ಸ್ಥಾನದಲ್ಲಿರುವ ನೀವು ಜವಾಬ್ದಾರಿ ಅರಿತು ಮಾತನಾಡಿದರೆ ನಿಮ್ಮ ಸ್ಥಾನಕ್ಕೂ ಗೌರವ ಇರುತ್ತದೆ ಎಂದು ನ್ಯಾಯಾಲಯ ಛಾಟಿ ಬೀಸಿತು.ನೀವು ಒಂದು ಬಾರಿ ವೀರ ಸಾವರ್ಕರ್ ಬ್ರಿಟಿಷರ ಪಿಂಚಣಿ ಸೇವಕ ಎಂದು ಹೇಳುತ್ತೀರಿ. ಮುಂದಿನ ಬಾರಿ ಮಹಾತ್ಮಾ ಗಾಂಧಿಯನ್ನು ಬ್ರಿಟಿಷರ ಸೇವಕ ಎಂದು ಹೇಳಿದರೆ ನಾವು ಒಪ್ಪಬೇಕೇ? ಒಬ್ಬರ ಬಗ್ಗೆ ಮಾತನಾಡುವಾಗ ನಾಲಿಗೆ ಹಿಡಿತ ಇಟ್ಟುಕೊಂಡು ಮಾತನಾಡಿ, ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಗೊತ್ತಿಲ್ಲ ಎಂದರೆ ಸುಮ್ಮನಿದ್ದು ಬಿಡಿ. ಸುಖಾಸುಮ್ಮನೆ ವಿವಾದವನ್ನು ಮೈಮೇಲೆ ಎಳೆದುಕೊಳ್ಳಬೇಡಿ.ಇತಿಹಾಸ ಮತ್ತು ಭೂಗೋಳವನ್ನು ತಿಳಿಯದೆ ಮಾತನಾಡಿದರೆ ಅದು ಅಭಾಸವಾಗುತ್ತದೆ. ರಾಜಕೀಯಕ್ಕಾಗಿ ನೀವು ಸ್ವಾತಂತ್ರ್ಯ ಹೋರಾಟಗಾರರ ಬಗ್ಗೆ ಈ ರೀತಿ ಮಾತನಾಡುತ್ತಿದ್ದೀರಿ ಎಂದರೆ ನ್ಯಾಯಾಲಯ ಸುಮ್ಮನಿರಬೇಕೆ? ಎಂದು ನ್ಯಾಯಾಲಯ ಪ್ರಶ್ನೆ ಮಾಡಿದೆ. ನಿಮ್ಮ ಕಕ್ಷಿದಾರರ ಹೇಳಿಕೆ ಅತ್ಯಂತ ಬೇಜವಾಬ್ದಾರಿಯಿಂದ ಕೂಡಿದೆ. ವೀರ್ ಸಾವರ್ಕರ್ ಅವರನ್ನು ಹೊಗಳಿ ಅವರ ಅಜ್ಜಿಯೇ ಪ್ರಶಂಸನಾ ಪತ್ರ ಬರೆದಿದ್ದಾರೆ.ಅವರ ದೃಷ್ಟಿಯಲ್ಲಿ ಒಳ್ಳೆಯವರಾದ ಸಾರ್ವಕರ್ ಇವರಿಗೆ ಹೇಗೆ ಬ್ರಿಟಿಷ್‌ರ ಸೇವಕರಾಗಿದ್ದರು? ಮಹಾರಾಷ್ಟ್ರದಲ್ಲಿ ಈಗಲೂ ಅವರನ್ನು ಪೂಜಿಸುತ್ತಾರೆ. ಇದು ಅವರವರ ನಂಬಿಕೆ. ಮುಂದೆ ಈ ರೀತಿ ಹೇಳಿಕೆಗಳನ್ನು ಕೊಡಬೇಡಿ ಎಂದು ರಾಹುಲ್ ಗಾಂಧಿ ಪರ ವಕೀಲರಾದ ಅಭಿಷೇಕ್ ಮನುಸಿಂಗ್ವಿಗೆ ನ್ಯಾಯಾಧೀಶರು ಸೂಚನೆ ಕೊಟ್ಟರು.

## ಬೆಂಕಿ : ೩೦ ಲಕ್ಷಕ್ಕೂ ಹೆಚ್ಚು ಹಾನಿ

ಬೆಂಕಿ ತಗುಲಿ ಸುಮಾರು 30 ಲಕ್ಷಕ್ಕೂ ಹೆಚ್ಚಿನ ಹಾನಿಯಾಗಿದೆ.

ಮಾರುಕಟ್ಟೆಯಲ್ಲಿ ಎಂ ಡಿ. ಇಸ್ಮಾಯಿಲ್ ಎಂಬುವವರಿಗೆ ಸೇರಿದ ಗಾದಿ ಅಂಗಡಿ ಇದ್ದು ಲಗ್ನ ಸಿಜನ್ ಇದ್ದ ಕಾರಣ ಅಂಗಡಿಯ ಎದುರಿಗೆ ಇರುವ ಗೋದಾಮಿನಲ್ಲಿ ಹತ್ತಿ ತಂದಿಟ್ಟಿದ್ದರು. ಎಂದಿನಂತೆ ಕೆಲಸ ಮಾಡಿ ಎಲ್ಲವು ಬಂದ ಮಾಡಿ ಮನೆಗೆ ಹೋಗಿದ್ದ ಅರ್ಧ ಗಂಟೆಯಲ್ಲಿಯೆ ಗೋದಾಮಿಗೆ ಬೆಂಕಿ ಹತ್ತಿ ಧಗಧಗನೆ ಉರಿಯಲು ಆರಂಭಿಸಿತ್ತು.ಕೂಡಲೇ ಅಗ್ನಿ ಶಾಮಕ ಠಾಣೆಗೆ ಮಾಹಿತಿ ನೀಡಿದ್ದರು ಸಮಯಕ್ಕೆ ಅಗ್ನಿ ಶಾಮಕ ವಾಹನ ಬಂದಿಲ್ಲ ಸುತ್ತಲಿನ ಅಂಗಡಿ ಮಾಲಿಕರು, ಮನೆಯರು ಅಕ್ಕ–ಪಕ್ಕದ ಬಾವಿಯ ನೀರಿನ ಪೈಪ್ ನಿಂದ ಬೆಂಕಿ ಆರಿಸಲು ಪ್ರಯತ್ನಿಸಿದ್ದರೂ ಕೂಡ ಆರಿಲ್ಲ.ಮೊದಲಿಗೆ ಅಗ್ನಿ ಶಾಮಕ ಸಿಬ್ಬಂದಿಗಳು ವಾಹನ ಇಲ್ಲದಕ್ಕೆ ಬೆಂಕಿ ಆರಿಸುವ ಗ್ಯಾಸ್ ಸಿಲೆಂಡರ್ ತೆಗೆದುಕೊಂಡು ಬಂದರು ಬೆಂಕಿ ಹತೋಟಿಗೆ ಬಂದಿಲ್ಲ.ನಂತರ ರಾತ್ರಿ ಸುಮಾರು 11ರ ಸಮಯಕ್ಕೆ ಅಗ್ನಿ ಶಾಮಕ ವಾಹನವು ಬಂದು ಬೆಂಕಿ ಆರಿಸಲು ಸುಮಾರು 1 ಗಂಟೆಯ ಕಾಲ ಹಿಡಿಯಿತು. ಈ ಘಟನೆಯಲ್ಲಿ ಗಾದಿ ಮಾಡಲು ತಂದಿಟ್ಟ ಹತ್ತಿ, ಲಗ್ನದ ಆರ್ಡರನಲ್ಲಿ ತಯ್ಯಾರು ಮಾಡಿಟ್ಟ ಗಾದಿಗಳು, ಹತ್ತಿ ಕ್ಲಿನ್ ಮಾಡುವ 2 ಯಂತ್ರ, 1 ಬೈಕ್ ಸೇರಿದಂತೆ ಇನ್ನಿತರ ವಸ್ತುಗಳು ಸುಟ್ಟು ಕರಕಲಾಗಿವೆ. ಹೀಗೆ ಒಟ್ಟು 30 ಲಕ್ಷದ ಹಾನಿ ಎಂದು ಅಂದಾಜಿಸಲಾಗಿದೆ.

ಇದಕ್ಕೂ ಮುನ್ನ ಇದೆ ಸ್ಥಳದಲ್ಲಿರುವ ಲಕ್ಷಾಂತರ ಹತ್ತಿ ಸುಟ್ಟು ಕರಕಲಾಗಿತ್ತು. ಜನಪ್ರತಿನಿಧಿಗಳಾಗಲಿ ಅಥವಾ ಸರ್ಕಾರವಾಗಲಿ ಹಾನಿಯಾದ ಅಂಗಡಿ ಮಾಲಿಕರಿಗೆ ಸಹಾಯಕ್ಕೆ ಮುಂದಾಗಲಿ ಎಂದು ಜನರ ಅನಿಸಿಕೆಯಾಗಿದೆ

## ಗಡಿಯಲ್ಲಿ ಉದ್ವಿಗ್ನ ವಾತಾವರಣ

ಅಡಗಿರುವ ಸ್ಥಳವನ್ನು ಸುತ್ತುವರೆದಿರುವ ಸೇನಾಪಡೆ ಕಾರ್ಯಾಚರಣೆಯನ್ನು ಎನ್‌ಕೌಂಟರ್ ಆಗಿ ಬದಲಿಸಿದ್ದು, ಪಾಕ್ ದಾಳಿಗೆ ತಕ್ಕ ಪ್ರತ್ಯುತ್ತರ ನೀಡುತ್ತಿದೆ.

ಒಟ್ಟಿನಲ್ಲಿ ಭಾರತ ಪಾಕಿಸ್ತಾನದ ಮಧ್ಯೆ ಆತಂಕದ ವಾತಾವರಣವಿದ್ದು, ಇದು ಯಾವ ಹಂತ ತಲುಪುತ್ತದೆ ಎಂದು ಕಾದು ನೋಡಬೇಕಿದೆ

## ಅನುಭವ ಮಂಟಪ ರಥಕ್ಕೆ ಭವ್ಯ ಸ್ವಾಗತ



ಕಲಬುರಗಿ,ಏ.25:ಬಾಗಲಕೋಟೆಯ ಕೂಡಲಸಂಗಮದಲ್ಲಿ ಇದೇ ಏಪ್ರಿಲ್ 29 ಮತ್ತು 30 ರಂದು ಎರಡು ದಿನಗಳ ಕಾಲ "ಅನುಭವ ಮಂಟಪ–ಬಸವಾದಿ ಶರರ ವೈಭವ" ಕಾರ್ಯಕ್ರಮಆಯೋಜಿಸಿದ ಪ್ರಯುಕ್ತಈಬಗ್ಗೆನಾಡಿನಾದ್ಯಂತ ವ್ಯಾಪಕ ಪ್ರಚೂರಪಡಿಸಲು ಹೊರಟಿರುವರಥಯಾತ್ರೆಯು ಗುರುವಾರ ಸಂಜೆ ಬೀದರ ದಿಂದ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ಇಲ್ಲಿನ ಜಗತ್ ವೃತ್ತದಲ್ಲಿ ಜಿಲ್ಲಾಡಳಿತದಿಂದ ಭವ್ಯಸ್ವಾಗತ ನೀಡಲಾಯಿತು.

ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಸೇರಿದಂತೆ ಅನೇಕ ಗಣ್ಯರು ರಥಕ್ಕೆ ಪೂಜೆ ಸಲ್ಲಿಸಿದಲ್ಲದೆ ಬಸವಣ್ಣ ಸೇರಿದಂತೆ ರಥದಲ್ಲಿರುವ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್, ಯೇಸು ಕ್ರಿಸ್ತ, ನಾರಾಯಣ ಗುರು, ಶಿವಶರಣೆ ಅಕ್ಕ ಮಹಾದೇವಿ, ಬುದ್ಧ, ಸಂತ ಶಿಸುನಾಳ ಶರೀಫ್, ಗುರುನಾನಕ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಡೊಳ್ಳು,ಲಂಬಾಣಿನೃತ್ಯಮೂಲಕ ವರ್ಣರಂಜಿತವಾಗಿ ರಥವನ್ನು ಬರಮಾಡಿಕೊಳ್ಳಲಾಯಿತು.

ವಿಧಾನ ಪರಿಷತ್ ಮಾಜಿ ಶಾಸಕ ಅಮರನಾಥ ಪಾಟೀಲ, ಕಲಬುರಗಿ ತಹಶೀಲ್ದಾರ ಕೆ.ಆನಂದಶೀಲ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರ, ರಾಷ್ಟ್ರೀಯ ಬಸವದಳ ಘಟಕದ ಜಿಲ್ಲಾಧ್ಯಕ್ಷ ಆರ್.ಜಿ.ಶೆಟಗಾರ, ಪ್ರಮುಖರಾದ ಡಾ.ಸುಧಾ ಹಾಲಕಾಯಿ, ರಾಜಶೇರಖ್ ಯಂಕಂಚಿ, ಶಾಂತಪ್ಪಪಾಟೀಲ, ರವೀಂದ್ರಶಾಬಾದಿ, ಅಶೋಕ ಗೂಳಿ, ಮನೋಹರ ಜೀವಣಗಿ, ಪ್ರಭುಲಿಂಗ ಮಹಾಗಾಂವಕರ್, ಎಸ್.ಸಿ–ಎಸ್.ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಮಹೇಶ ಹುಬ್ಬಿ ಸೇರಿದಂತೆ ಬಸವಾದಿ ಶರಣರ ಅನುಯಾಯಿಗಳು ಇದ್ದರು.ನಂತರರಥವುಜೇವರ್ಗಿ ಮಾರ್ಗವಾಗಿ ವಿಜಯಪುರ ಜಿಲ್ಲೆಗೆ ತನ್ನ ಮುಂದಿನ ಪಯಣ ಆರಂಭಿಸಿತ್ತು.

## ನೀರಿನ ಸಮಸ್ಯೆಗೆ ತಕ್ಷಣ ಸ್ಪಂದಿಸಿ: ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 25 : 'ಕುಡಿಯುವ ನೀರಿನ ಸಮಸ್ಯೆಗೆ ತಕ್ಷಣ ಸ್ಪಂದಿಸಬೇಕು. ದೂರು ಬಂದ ಕಡೆಗಳಲ್ಲಿ ಪರಿಹಾರಕ್ಕೆ ಕ್ರಮ ಕೈಗೊಳ್ಳಬೇಕು' ಎಂದು ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಸೂಚಿಸಿದರು. ಬೀದರ್‌ನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ನಡೆದ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಕುಡಿಯುವ ನೀರಿನ ಸಮಸ್ಯೆ ಕುರಿತ ಸಭೆಯಲ್ಲಿ ಅವರು ಮಾತನಾಡಿದರು. ಬೀದರ್ ದಕ್ಷಿಣ ಕ್ಷೇತ್ರ ವ್ಯಾಪ್ತಿಯ ಗ್ರಾಮಗಳಲ್ಲಿ ಜನ, ಜಾನುವಾರಿಗೆ ಕುಡಿಯುವ ನೀರಿಗೆ ತೊಂದರೆ–ಯಾಗದಂತೆ ಯೋಜನೆ ರೂಪಿಸಿ, ಕಾರ್ಯಗತಗೊಳಿಸಬೇಕು. ಗ್ರಾಮಗಳ ಜಲ ಮೂಲಗಳ ಮಾಹಿತಿ ಪಡೆಯಬೇಕು. ಸಣ್ಣ ಪುಟ್ಟ ದುರಸ್ತಿ ಕಾರ್ಯಗಳನ್ನು ವಾರದೊಳಗೆ ಕೈಗೊಳ್ಳಬೇಕು. ಕೊಳವೆಬಾವಿಗಳ ಸಮರ್ಪಕ ಕಾರ್ಯ ನಿರ್ವಹಣೆ ಬಗ್ಗೆ ಗಮನ ಹರಿಸಬೇಕು. ಚೆಕ್ ಡ್ಯಾಂಗಳ ನಿರ್ಮಾಣದ ಮೂಲಕ ಅಂತರ್ಜಲ ಹೆಚ್ಚಿಸಬೇಕು ಎಂದು ಹೇಳಿದರು. ಸಮಸ್ಯಾತ್ಮಕ ಗ್ರಾಮಗಳು ಹಾಗೂ ವಸತಿ ನಿಲಯಗಳಿಗೆ ಕೂಡಲೇ ನೀರು ಪೂರೈಸಬೇಕು. ಗೋಶಾಲೆಗಳಿಗೆ ಮೇವು ಒದಗಿಸಬೇಕು. ಗ್ರಾಮಗಳಲ್ಲಿ ಜಾನುವಾರುಗಳಿಗೆ ನೀರಿನ ತೊಟ್ಟಿ ನಿರ್ಮಿಸಿ, ನೀರಿನ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು. ಕುಡಿಯುವ ನೀರಿನ ವಿಚಾರದಲ್ಲಿ ನಿರ್ಲಕ್ಷ್ಯ ತೋರಬಾರದು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಈ ದಿಸೆಯಲ್ಲಿ ವಿಶೇಷ ನಿಗಾ ವಹಿಸಬೇಕು ಎಂದು ಹೇಳಿದರು. ತಾಲ್ಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿ ಕಿರಣ ಪಾಟೀಲ, ಸಹಾಯಕ ನಿರ್ದೇಶಕರಾದ ಸಂಜುಕುಮಾರ ಕಾಡವಾದ್, ಸುದೇಶ್ ಇದ್ದರು.

## ಇಂದು ಶ್ರೀ ಶಿವಶರಣ ಹರಳಯ್ಯನವರ ಜಯಂತ್ಯೋತ್ಸವ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.25:ಶ್ರೀ ಶಿವಶರಣ ಸಮಗಾರ ಹರಳಯ್ಯನವರ ಜಯಂತ್ಯೋತ್ಸವ ಸಮಿತಿ ಮತ್ತು ಜಿಲ್ಲಾ ಹರಳಯ್ಯ ಸಮಾಜ ಇವರ ಸಂಯುಕ್ತಾಶ್ರಯದಲ್ಲಿ ಏಪ್ರಿಲ್ 26 ರಂದು ಸಂಜೆ 4 ಗಂಟೆಗೆ ಕಲಬುರಗಿ ನಗರದ ಬ್ರಹ್ಮಪೂರ ಪ್ರದೇಶದ ಹರಳಯ್ಯ ವೃತ್ತದಲ್ಲಿ ಶ್ರೀ ಶಿವಶರಣ ಸಮಗಾರ ಹರಳಯ್ಯನವರ 914ನೇ ಜಯಂತ್ಯೋತ್ಸವ ನಿಮಿತ್ಯ ಬಹಿರಂಗ ಸಭೆ ಆಯೋಜಿಸಿದೆ ಎಂದು ಜಯಂತ್ಯೋತ್ಸವ ಸಮಿತಿಯ ಗೌರವಾಧ್ಯಕ್ಷ ರಾಮಚಂದ್ರ ಗೋಳಾ ತಿಳಿಸಿದರು.

ಶುಕ್ರವಾರ ಇಲ್ಲಿನ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು,12ನೇ ಶತಮಾನದಲ್ಲಿ ಸಾಮಾಜಿಕ ಕ್ರಾಂತಿಗೆ ಕಾರಣಿಕರ್ತರಾದ ಶರಣ ಹರಳಯ್ಯನವರ ಜಯಂತ್ಯೋತ್ಸವ ಕಾರ್ಯಕ್ರಮವು ಅದ್ದೂರಿಯಾಗಿ ನೆರವೇರಿಸಲು ಸಕಲ ಸಿದ್ಧತೆ ಮಾಡಿಕೊಂಡಿದ್ದು, ಜಿಲ್ಲೆಯ ಸಮಸ್ತ ಸಮಗಾರ ಬಂಧುಗಳು ಅಪಾರ ಸಂಖ್ಯೆಯಲ್ಲಿ ಆಗಮಿಸಿ ಬಹಿರಂಗ ಸಭೆ ಮತ್ತು ಮೆರವಣಿಗೆ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ರಾಮಚಂದ್ರ ಗೋಳಾ ಅವರು ಮನವಿ ಮಾಡಿದರು.

ಕಲಬುರಗಿಯ ಮಕ್ತಂಪುರ ಗದ್ದಗಿ ಮಠದ ಪೂಜ್ಯ ಶ್ರೀ ಚರಲಿಂಗಸ್ವಾಮಿ ಶ್ರೀಗಳು, ಶ್ರೀ ಶರಣಬಸವೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಪೂಜ್ಯ ಶ್ರೀ ಚಿರಂಜೀವಿ ದೊಡ್ಡಪ್ಪ ಅಪ್ಪ ಹಾಗೂ ಹಾವೇರಿಯ ಶ್ರೀ ಹರಳಯ್ಯ ಪೀಠದ ಪೂಜ್ಯಶ್ರೀ ನಿಜಲಿಂಗ ಮಹಾಸ್ವಾಮಿಗಳ ದಿವ್ಯಸಾನಿಧ್ಯದಲ್ಲಿ ಈ ಬಹಿರಂಗ ಸಭೆ ನಡೆಯಲಿದೆ ಎಂದರು.

ಬಹಿರಂಗ ಸಭೆಯನ್ನು ಕಲಬುರಗಿ ದಕ್ಷಿಣ ಶಾಸಕ ಅಲ್ಲಂಪ್ರಭು ಪಾಟೀಲ ಮತ್ತು ಕಲಬುರಗಿ ಗ್ರಾಮೀಣ ಶಾಸಕ ಬಸವರಾಜ ಮತ್ತಿಮೂಡ ಅವರು ಉದ್ಘಾಟಿಸಲಿದ್ದು, ಕರ್ನಾಟಕ ರೇಷ್ಮೆ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷೆ ಮತ್ತು ಕಲಬುರಗಿ ಉತ್ತರ ಶಾಸಕಿ ಕನೀಜ್ ಫಾತಿಮಾ, ವಿಧಾನ ಪರಿಷತ್ ಶಾಸಕರಾದ ಶಶೀಲ ಜಿ. ನಮೋಶಿ, ಚಂದ್ರಶೇಖರ ಪಾಟೀಲ ಹುಮನಾಬಾದ, ಜಗದೇವಪ್ಪ ಗುತತೇದಾರ, ತಿಪ್ಪಣ್ಣಪ್ಪ ಕಮಕನೂರ, ಕಲಬುರಗಿ ಮಹಾನಗರ ಪಾಲಿಕೆಯ ಮೇಯರ್ ಯಲ್ಲಪ್ಪ ನಾಯ್ಕೋಡಿ, ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಸದಸ್ಯ ಶರಣು ಮೋದಿ ಅವರುಗಳು ಆಗಮಿಸಲಿದ್ದಾರೆ.

ಇದಲ್ಲದೆ ಮಹಾನಗರ ಪಾಲಿಕೆಯ ಸದಸ್ಯೆ ತೃಪ್ತಿ ಶ್ರೀಣಿವಾಸ ಲಾಖೆ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಹರ್ಷಾನಂದ ಗುತ್ತೇದಾರ, ಕಾಂಗ್ರೆಸ್ ಮುಖಂಡ ನೀಲಕಂಠರಾವ ಮೂಲಗೆ, ಬಿ.ಜೆ.ಪಿ. ಮುಖಂಡ ಶಿವಕಾಂತ ಮಹಾಜನ್, ಶ್ರೀ ಶಿವಶರಣ ಹರಳಯ್ಯ ಸಮಗಾರ ಸಮಾಜದ ಜಿಲ್ಲಾಧ್ಯಕ್ಷ ಕಾಶಿರಾಯ ನಂದೂರಕರ್ ಸೇರಿದಂತೆ ಸಮಾಜದ ಅನೇಕ ಉದ್ದಿಮೆದಾರರು, ಮುಖಂಡರು, ಗಣ್ಯರು ಭಾಗವಹಿಸಲಿದ್ದಾರೆ ಎಂದರು.

ಭವ್ಯ ಮೆರವಣಿಗೆ:

ಜಯಂತ್ಯೋತ್ಸವ ಅಂಗವಾಗಿ ಶ್ರೀ ಶರಣಬಸವೇಶ್ವರ ದೇವಸ್ಥಾನದಿಂದ ಅಂದು ಬೆಳಿಗ್ಗೆ 11 ಗಂಟೆಗೆ ಭವ್ಯ ಮೆರವಣಿಗೆ ಆರಂಭವಾಗಲಿದೆ. ಶಾಸಕ ಬಸವರಾಜ ಮತಿಮೂಡ ಮತ್ತು ಮಹಾನಗರ ಪಾಲಿಕೆ ಸದಸ್ಯ ಡಾ.ಶಂಭುಲಿಂಗ ಪಾಟೀಲ ಬಳಬಟ್ಟಿ ಇದ–ಕ್ಕೆ ಚಾಲನೆ ನೀಡಲಿದ್ದಾರೆ. ಲಾಲಗೇರಿ ಕ್ರಾಸ್–ಸೂಪರ್ ಮಾರ್ಕೆಟ್–ಜಗತ್ ವೃತ್ತ ಮಾರ್ಗವಾಗಿ ಗೋವಾ ಹೋಟೆಲ್ ಬಳಿ ಬಂದು ಮೆರವಣಿಗೆ ಸಂಪನ್ನವಾಗಲಿದೆ ಎಂದು ಅವರು ಮಾಹಿತಿ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಶ್ರೀ ಶಿವಶರಣ ಸಮಗಾರ ಹರಳಯ್ಯ ಜಯಂತ್ಯೋತ್ಸವ ಸಮಿತಿಯ ಅಧ್ಯಕ್ಷ ಮಲ್ಲಿಕಾರ್ಜುನ ಭೀಮಳ್ಳಿ, ಪ್ರಧಾನ ಕಾರ್ಯದರ್ಶಿ ದೇವರಾಜ ಗೋಳಾ, ಉಪಾಧ್ಯಕ್ಷರಾದ ಶಿವರಾಯ ಕಟ್ಟಿಮನಿ, ಕಾಶಿನಾಥ ದಿವಂಟಗಿ, ಲಕ್ಷ್ಮೀಕಾಂತ ಇಳಕಲ್, ಸುಭಾಷ ಜಿ. ಕಣ್ಣೂರು ಹಾಗೂ ಶ್ರೀ ಶಿವಶರಣ ಹರಳಯ್ಯ ಸಮಗಾರ ಸಮಾಜದ ಮಾಜಿ ಜಿಲ್ಲಾಧ್ಯಕ್ಷ ಚಂದ್ರಕಾಂತ ದೇಗಲಮಡಿ ಉಪಸ್ಥಿತರಿದ್ದರು.

## ನಕಲಿ ದಾಖಲೆ ಸೃಷ್ಟಿಸಿ ಬ್ಯಾಂಕಿನಿಂದ ಸಾಲ ಪಡೆದ ಪ್ರಕರಣ
# ವಂಚಕರ ವಿರುದ್ಧ ಪ್ರಕರಣ ದಾಖಲು

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್:ತಾಲೂಕಿನ ಕುಮಾರ್ ಚಿಂಚೋಳಿ ಗ್ರಾಮದ ಜಾವೀದ್ ಸೈಲಾನಿಮಿಯಾ ಮತ್ತು ಅವರ ಸಹೋದರ ಶಾಕೀರಮಿಯಾ ಸೈಲಾನಿಮಿಯಾ ಇವರುಗಳು ಮುಂಬಯಿ ಮೂಲದ ಕಿಶೋರ್ ಬಿಕುಭಾಯಿ ದಲಾಲ ಅವರಿಗೆ ಜಮೀನು ಮಾರಾಟ ಮಾಡಿ, ಮತ್ತೆ ಅದೇ ಜಮೀನು ತಮ್ಮ ಹೆಸರಿನ ಮೇಲೆ ನೋಂದಣಿ ಮಾಡಿಕೊಂಡ ಪ್ರಕರಣ ಹಾಗೂ ನಕಲಿ ದಾಖಲೆ ಸೃಷ್ಟಿಸಿ ಬ್ಯಾಂಕಿನ ಸಾಲ ಪಡೆದ ವಂಚನೆ ಪ್ರಕರಣ ಹುಮನಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪ್ರಕರಣ ಮುಂದುವರೆದಿದೆ. ತಾಲೂಕಿನ ಕುಮಾರ್ ಚಿಂಚೋಳಿ ಗ್ರಾಮದಲ್ಲಿ 1998ರಲ್ಲಿ ಕಿಶೋರ್ ಎಂಬುವರು ಗ್ರಾಮದ ಸರ್ವೇ ನಂಬರ್ 129 ರಲ್ಲಿ 3 ಎಕರೆ 31 ಗುಂಟೆ ಜಮೀನು ಖರೀದಿ ಮಾಡಿದನು. ಹುಮನಾಬಾದ ನೋಂದಣಿ ಕಚೇರಿಯಲ್ಲಿ ಹೆಸರು ನೊಂದಣಿ ಮಾಡಲಾಗಿತ್ತು. 2022ರಲ್ಲಿ ಶಾಕೀರಮಿಯಾ ಸೈಲಾನಿಮಿಯಾ ಇವರು ನಕಲಿ ದಾಖಲಾತಿಗಳನ್ನು ಸೃಷ್ಟಿಸಿ ತನ್ನ ಹೆಸರಿಗೆ ಶಾಕೀರಾಮಿಯಾ ಹಕ್ಕು ಬದಲಾವಣೆ ಮಾಡಿಕೊಂಡಿದ್ದ. ಈ ಸಂಬಂಧ ಕಿಶೋರ್ ರವರು ಹುಮನಾಬಾದ ತಹಸೀಲ್ ಕಚೇರಿಯಲ್ಲಿ ದೂರು ಸಲ್ಲಿಸಿದ್ದರು. ಬಸವಕಲ್ಯಾಣ ಸಹಾಯಕ ಆಯುಕ್ತರು ಈ ಜಮೀನನ್ನು ಮನಃ ನನ್ನ ಹೆಸರಿನ ಮೇಲೆ ಮಾಡಿದ್ದಾರೆ ಎಂದು ಕಿಶೋರ ದಾಲಾಲ ದೂರಿನಲ್ಲಿ ತಿಳಿಸಿದ್ದಾರೆ. 16-03-2024ರಲ್ಲಿ ಮತ್ತೆ ಸೈಯದ್ ಜಾಕೀರ ಅಲಿ/ಸೈಯದ್ ಲಿಯಾ-ಕತ ಅಲಿ ಅವರಿಗೆ ಮಾರಾಟ ಮಾಡಿದ್ದೇನೆ. ಉಪ ನೊಂದಣಿ ಕಚೇರಿಯಲ್ಲಿ ನೊಂದಣಿ ಮಾಡಿದ್ದೇನೆ. ಸೈಯದ್ ಜಾಕೀರ್ ಅಲಿ ಪಹಣಿ ಆದ ಮೇಲೆ ಪಹಣಿ ಮೇಲೆ ಖಟಕಚಿಂಚೋಳಿ ಎಸ್.ಬಿ.ಐ. ಬ್ಯಾಂಕಿನಿಂದ 7ಲಕ್ಷ ರೂ. ಹಂದಿಕೇರಾ ಪಿಕೆಪಿಎಸ್ ಬ್ಯಾಂಕಿನಿಂದ 10 ಸಾವಿರ ಸಾಲ ಪಡೆದಿದ್ದು ಪಹಣಿಯಲ್ಲಿ ಬಂದಿದೆ, ಬ್ಯಾಂಕಿನಲ್ಲಿ ಈ ಬಗ್ಗೆ ವಿಚಾರಣೆ ಮಾಡಿದಾಗ ಜಾಕಿರ ಮಿಯಾ ಮೋಸ ಮಾಡುವ ಉದ್ದೇಶದಿಂದ ಅಣ್ಣನ ಭಾವಚಿತ್ರ ಅಂಟಿಸಿ ಕಿಶೋರ ಎಂದು ಸಹಿ ಮಾಡಿದ್ದಾನೆ. ಈ ವಂಚನೆ ಪ್ರಕರಣ ಬಗ್ಗೆ ಹುಮನಾಬಾದ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದಾರೆ. ಜಾವೀದ ಶೈಲಾನಿಮಿಯಾ ಮತ್ತು ಅವರ ತಮ್ಮ ಶಾಕೀರಮಿಯಾ ಶೈಲಾನಿಮಿಯಾ ಇವರ ವಿರುದ್ಧ ಹುಮನಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಹುಮನಾಬಾದ ಪೊಲೀಸರು ವಂಚಕರ ವಿರುದ್ಧ ಕಲಂ 419,420,468,470 ಜೊತೆ 34 ಐಪಿಸಿ ಅಡಿಯಲ್ಲಿ ಹುಮನಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ತನಿಖೆ ಮುಂದುವರೆದಿದೆ.

## ಪಹಲ್ಗಾಮ್‌ನಲ್ಲಿ ನಡೆದ ದಾಳಿಗೆ ತೀವ್ರ ಖಂಡನೆ:ಜೋಗಿರೆ




ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಪಹಲ್ಗಾಮ್‌ನಲ್ಲಿ ನಡೆದ ದಾಳಿ ಅತ್ಯಂತ ಘೋರ ಮಾನವೀಯತೆಯ ವಿರುದ್ಧದ ಕೃತ್ಯವಾಗಿದ್ದು, ಈ ದಾಳಿಯಲ್ಲಿ ಅನೇಕರು ಬಲಿಯಾಗಿದ್ದಾರೆ, ಉಗ್ರರಿಗೆ ತಕ್ಕ ಶಿಕ್ಷೆಯಾಗಬೇಕು ಎಂದು ಕರ್ನಾಟಕ ವಿದ್ಯಾರ್ಥಿ ವೇದಿಕೆ ತಾಲ್ಲೂಕು ಅಧ್ಯಕ್ಷ ಅರವಿಂದ ಜೋಗಿರೆ ತೀವ್ರವಾಗಿ ಖಂಡಿಸಿದ್ದಾರೆ. ಹಾಗೂ ದಾಳಿಕೋರರಿಗೆ ಕಠಿಣ ಶಿಕ್ಷೆಯನ್ನು ನೀಡಬೇಕು. ದಾಳಿಯ ನೆಪದಲ್ಲಿ ಭಾರತೀಯರು ಪರಸ್ಪರ ಕಚ್ಚಾಡಿಸುವ ವಿದೇಶಿ ಶಕ್ತಿಗಳ ಶ್ರಮವನ್ನು ವಿಫಲಗೊಳಿಸಬೇಕು. ದಾಳಿಕೋರರಿಂದ ಪ್ರಾಣವನ್ನು ಪಣಕ್ಕಿಟ್ಟು ಹೋರಾಡುತ್ತಿರುವ ಕಾಶ್ಮೀರಿ ಮುಸ್ಲಿಮರು ಸೇರಿದಂತೆ ಎಲ್ಲರೂ ಒಂದಾಗಿ ಭಯೋತ್ಪಾದಕರನ್ನು ಎದುರಿಸಬೇಕು ಎಂದು ಸಮಾಜ ಸೇವಕ ಭೀಮರೆಡ್ಡಿ ಸಿಂಧನಕೇರಾ ತೀವ್ರವಾಗಿ ಖಂಡನೆ ಮಾಡಿದ್ದಾರೆ. ಇದು ಹಿಂದೂಗಳನ್ನು ದಮನ ಮಾಡುವ ಕೃತ್ಯವಾಗಿದೆ, ಕೇವಲ ಹಿಂದೂಗಳನ್ನೇ ಗುರಿಯಾಗಿಸಿ ಈ ಕೃತ್ಯ ನಡೆದಿರುವ ಕುರಿತು ವರದಿಯಾಗಿರುವುದು ನಿಜಕ್ಕೂ ನೋವಿನ ಸಂಗತಿಯಾಗಿದ್ದು, ಕೇಂದ್ರ ಸರ್ಕಾರ ಭಾರತೀಯ ಸೇನೆಗೆ ಪೂರ್ಣ ಅಧಿಕಾರ ನೀಡಿ ಇಂತಹ ದೇಶದ್ರೋಹಿಳನ್ನು ಮಟ್ಟಹಾಕಬೇಕು ಎಂದು ಒತ್ತಾಯಿಸಿದರು.



ಬಸವಕಲ್ಯಾಣ :- ಯುಪಿಎಸ್ಸಿ ಪರೀಕ್ಷೆಯಲ್ಲಿ ರಾಷ್ಟಮಟ್ಟದಲ್ಲಿ 984ನೇ ರ‍್ಯಾಂಕ್ ಪಡೆದ ಮತ್ತು ಕಲ್ಯಾಣ ಕರ್ನಾಟಕದ ಏಕೈಕ ವಿದ್ಯಾರ್ಥಿ ಮೋಹನ್ ಸಂಗಣ್ಣ ಪಾಟೀಲ ಡೋರ ಜಂಬಗಾ ಅವರು ಹಾರಕೂಡ ಮಠದ ಪರಮ ಭಕ್ತರಾಗಿದ್ದು ಶುಕ್ರವಾರ ಶ್ರೀಮಠಕ್ಕೆ ಆಗಮಿಸಿದಾಗ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಸತ್ಕರಿಸಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಸಂಗಣ್ಣ ಪಾಟೀಲ ಡೋರ್ ಜಂಬಗಾ, ಮುನೇಶ್ವರ ಬಿರಾದಾರ, ಅಪ್ಪಣ್ಣ ಜನವಾಡ, ವಿವೇಕ ಪಾಟೀಲ, ವಿರೇಶ ಬಿರಾದಾರ, ಶರಣಗೌಡ ಪಾಟೀಲ, ಶಾಂತಕುಮಾರ ದುದನಿ, ರವಿ ಯಕ್ಕಂಜೆ, ಅಂಬರೇಶ್ವರ ಹೊಸಳ್ಳಿ, ವಿಜಯಕುಮಾರ ಮಠಪತಿ, ಈಶ್ವರ ಬಿರಾದಾರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ವಾರ್ತೆ)

## ಕನ್ನಡ ಭಾಷಾಭಿಮಾನವನ್ನು ಬೆಳೆಸಿದವರು ಡಾ. ರಾಜ್‌ಕುಮಾರ್ – ಚಲನಚಿತ್ರ ಅಕಾಡೆಮಿ ಸದಸ್ಯೆ ಸಾವಿತ್ರಿ ಮುಜುಮದಾರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಡಾ.ರಾಜ್‌ಕುಮಾರ್ ರವರು ಕೇವಲ ಕಲಾವಿಧರಾಗಿ ಹಾಗೂ ಕನ್ನಡ ಕಲಾ ಅರಾಧಕರಾಗಿ ಉಳಿಯದೇ ಅವರು ಕನ್ನಡ ಭಾಷಾಭಿಮಾನವನ್ನು ಬೆಳೆಸಿದ್ದರು ಎಂದು ಕರ್ನಾಟಕ ಚಲನಚಿತ್ರ ಅಕಾಡೆಮಿ ಸದಸ್ಯರಾದ ಸಾವಿತ್ರಿ ಮುಜುಮದಾರ ಹೇಳಿದರು.

ಅವರು ಗುರುವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕೊಪ್ಪಳ ಇವರ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಕನ್ನಡ ಚಲಚಿತ್ರ ರಂಗ ಕಂಡ ಮೆರು ನಟ, ನಟ ಸಾರ್ವಭೌಮ, ಕರ್ನಾಟಕ ರತ್ನ, ಪದ್ಮಭೂಷಣ ಡಾ. ರಾಜ್‌ಕುಮಾರ್ ರವರ 97ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಡಾ. ರಾಜ್‌ಕುಮಾರ್ ರವರು ಎಲ್ಲರಿಗೂ ಆದರ್ಶ ವ್ಯಕ್ತಿಗಳಾಗಿದ್ದರು. ಆಗಿನ ಕಾಲದಲ್ಲಿ ತುಂಬಾ ಜನ ರಾಜ್‌ಕುಮಾರ್ ರವರ ಜೀವನವನ್ನು ಆದರ್ಶವಾಗಿಟ್ಟುಕೊಂಡು ಬದಲಾಗಿದ್ದಾರೆ. ಕರ್ನಾಟಕ ರಾಜ್ಯ ಹಾಗೂ ಭಾರತ ಮಾತ್ರವಲ್ಲದೇ ಜಾಗತಿಕ ಮಟ್ಟದಲ್ಲಿ ಅರಣ್ಯಕ್ಕೆ ಸಂಬಂಧಿಸಿ ಮೊಟ್ಟ ಮೊದಲ ಚಲನಚಿತ್ರ ಮಾಡಿದವರೇ ಡಾ. ರಾಜ್‌ಕುಮಾರ್. ಅವರು ಕೇವಲ ನಟರಾಗದೇ ಗೋಕಾಕ್ ಚಳುವಳಿ ಮೂಲಕ ಇಡಿ ಕನ್ನಡ ಚಿತ್ರರಂಗ ಹಾಗೂ ಎಲ್ಲಾ ಸಾಹಿತಿಗಳ ಜೊತೆಗೆ ಕರ್ನಾಟಕ ರಾಜ್ಯವನ್ನು ಸುತ್ತಿ ಕನ್ನಡ ಭಾಷಾಭಿಮಾನ ಬೆಳೆಸಿದ್ದರು. ನಮ್ಮ ಅನ್ನದ ಭಾಷೆ ಯಾಕೆ ಬೇಕು, ನಮ್ಮ ಜೀವನದಲ್ಲಿ ಈ ಭಾಷೆಯ ಮಹತ್ವ ಏನು ಎಂಬುವುದನ್ನು ತೋರಿಸಿಕೊಟ್ಟಿದ್ದರು ಎಂದರು.

ಬೇರೆ ರಾಜ್ಯದ ದೊಡ್ಡ-ದೊಡ್ಡ ನಟರೆಲ್ಲಾ ರಾಜ-ಕಾರಣಕ್ಕೆ ಹೋಗಿದ್ದಾರೆ. ಡಾ. ರಾಜ್‌ಕುಮಾರ್ ರವರು ಮನಸ್ಸು ಮಾಡಿದರೆ, ಅವರು ರಾಜ-ಕಾರಣಿಯಾಗಿ ಇಡಿ ಕರ್ನಾಟಕವನ್ನು ಆಳಬಹುದಾಗಿತ್ತು. ಆದರೆ, ಅವರು ಕೇವಲ ಕಲಾವಿಧರಾಗಿ, ಕನ್ನಡ ಕಲಾ ಅರಾಧಕರಾಗಿ ಪ್ರತಿಯೊಬ್ಬ ಕನ್ನಡಿಗರ ಮನದಲ್ಲಿ ಉಳಿದಿದ್ದಾರೆ. ಬೇರೆ ಭಾಷೆಗಳಲ್ಲಿ ಅವಕಾಶಗಳು ಸಿಕ್ಕರು ಸಹ ಕನ್ನಡ ಭಾಷೆಯನ್ನು ಬಿಟ್ಟು ಬರುವುದಿಲ್ಲ ಎಂದು ಹೇಳಿದ್ದರು. ಅವರ ಕಲೆ ಕನ್ನಡ ಭಾಷೆಗೆ ಮಾತ್ರ ಸಿಮಿತವಾಗಿತ್ತು. ರಾಜ್‌ಕುಮಾರ್ ರವರು ಕನ್ನಡದ ಆಸ್ತಿ, ಶಕ್ತಿ, ಕನ್ನಡದ ಅಸ್ಮಿತೆಯಾಗಿದ್ದಾರೆ. ಅವರ ಕುಟುಂಬದವರು ಚಿತ್ರರಂಗಕ್ಕೆ ಅಷ್ಟೆ ಅಲ್ಲದೇ ಸಾಮಾಜಿಕವಾಗಿಯೂ ಸಹ ಬಹಳ ದೊಡ್ಡ ಕೊಡುಗೆಯನ್ನು ನೀಡಿದ್ದಾರೆ ಎಂದು ಹೇಳಿದರು.

ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚರ್ಯರಾದ ಕೃಷ್ಣಮೂರ್ತಿ ದೇಸಾಯಿ ಅವರು ಮಾತನಾಡಿ, ಡಾ. ರಾಜ್‌ಕುಮಾರ್ ರವರು ಕನ್ನಡ ಚಲನ ಚಿತ್ರರಂಗದಲ್ಲಿ ಅತ್ಯಂತ ಪ್ರಭಾವಿ ನಟರಾಗಿ ಸುಮಾರು ಐದು ದಶಕಗಳ ಕಾಲ ಚಿತ್ರರಂಗದಲ್ಲಿ ತಮ್ಮದೆ ಆದ ಛಾಪನ್ನು ಮೂಡಿಸಿದ್ದರು. ನಾಟಕ ಕಂಪನಿಗಳಿಂದ ಹಿಡಿದು ಸಿನಿಮಾ ಕಂಪನಿಗಳವರೆಗೆಗೂ ತಮ್ಮ ಪ್ರತಿಭೆಯನ್ನು ತೋರಿಸಿ, ಇತರರಿಗೆ ಮಾರ್ಗದರ್ಶಕರಾಗಿದ್ದರು. ದಾರಿ ತಪ್ಪಿದ ಮಗ, ಬಡವರ ಬಂಧು, ಕವಿರತ್ನ ಕಾಳಿದಾಸ, ಭಕ್ತ ಕುಂಬಾರ, ಹೀಗೆ ಹಲವಾರು ಚಿತ್ರಗಳಲ್ಲಿ ನಟಿಸುವ ಮೂಲಕ ಕನ್ನಡಿಗರ ಮನದಲ್ಲಿ ಅಜರಾಮರವಾಗಿದ್ದಾರೆ. ಚಲನ ಚಿತ್ರಗಳಲ್ಲಿನ ಅವರ ನಟನೆ, ಸಂಭಾಷಣೆ, ಸಂಗೀತ, ಸ್ವರ ಸಂಯೋಜನೆ ಅರ್ಥಗರ್ಭಿತವಾಗಿದ್ದವು. ಡಾ. ರಾಜ್‌ಕುಮಾರ್ ರವರು ಕನ್ನಡ ಚಿತ್ರರಂಗಕ್ಕೆ ವಿಶೇಷವಾದ ಸ್ಥಾನ-ಮಾನ ತಂದು ಕೊಟ್ಟವರಾಗಿದ್ದಾರೆ ಎಂದರು.

*ಪುಷ್ಪನಮನ ಸಲ್ಲಿಕೆ ಹಾಗೂ ಸಂಗೀತ:* ಡಾ. ರಾಜ್‌ಕುಮಾರ್ 97ನೇ ಜನ್ಮ ದಿನಾಚರಣೆ ನಿಮಿತ್ತ ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಅವರು ರಾಜ್‌ಕುಮಾರ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಗೌರವ ಸಮರ್ಪಿಸಿದರು. ಕಲಾವಿದ ಬಾಷು ಹಿರೇಮನಿ ಕಿನ್ನಾಳ ಹಾಗೂ ಚಂದನ ಭದ್ರಾವತಿ ಅವರು ರಾಜ್‌ಕುಮಾರ್ ರವರ ಅಭಿನಯದ ಚಲನಚಿತ್ರಗಳ ಗೀತೆಗಳನ್ನು ಹಾಡಿದರು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್, ಆಹಾರ ಇಲಾಖೆ ಉಪನಿರ್ದೇಶಕ ಸೋಮಶೇಖರ ಬಿರಾದಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ನಾಗಮಣಿ, ಚುನಾವಣಾ ವಿಭಾಗದ ತಹಶೀಲ್ದಾರ ರವಿ ವಸ್ತ್ರದ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಡಾ. ಸುರೇಶ್ ಜಿ., ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ ಮರಬನಳ್ಳಿ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಡಿ.ನಾಗರಾಜ ಸೇರಿದಂತೆ ವಾರ್ತಾ ಇಲಾಖೆ, ಜಿಲ್ಲಾಧಿಕಾರಿ ಕಛೇರಿ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

## ರಾಷ್ಟ್ರ ಮಟ್ಟದಲ್ಲಿ ಬಸವ ಜಯಂತಿ ಆಚರಿಸಿ : ಎಮ್. ಜಿ. ಮೂಳೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಏ 25 ವಿಶ್ವಗುರು ಬಸವಣ್ಣನವರ ಜಯಂತಿಯು ರಾಷ್ಟ್ರೀಯ ಮಟ್ಟದಲ್ಲಿ ಆಚರಿಸುವಂತೆ ದೆಹಲಿಯಲ್ಲಿ ರೈಲ್ವೆ ರಾಜ್ಯ ಸಚಿವರಾದ ವಿ. ಸೋಮಣ್ಣಗೆ ವಿಧಾನ ಪರಿಷತ್ ಸದಸ್ಯ ಎಮ್. ಜಿ. ಮೂಳೆ ಮನವಿ ಮಾಡಿದರು.

12 ನೇಯ ಶತಮಾನವು ಭಾರತೀಯ ಇತಿಹಾಸದಲ್ಲಿ ಅತ್ಯಂತ ಸ್ಮರಣೀಯ ವಾದದ್ದು. ಇಂದು ಭಾರತದಲ್ಲಿ ಅತ್ಯಂತ ಪ್ರಭಾವ ಶಾಲಿ ಎಂದು ಪರಿಗಣಿಸಲ್ಪಟ್ಟ ಮಹಾತ್ಮ ಬಸವಣ್ಣನವರು ಸಮಾನತೆ ಮತ್ತು ಕಾಯಕ ದಾಸೋಹದ ಆದರ್ಶಗಳನ್ನು ಆಧರಿಸಿ ಶರಣರೊಂದಿಗೆ ಅನುಭವ ಮಂಟಪವನ್ನು ಸ್ಥಾಪಿಸಿದ್ದಾರೆ. ಅನುಭವ ಮಂಟಪವು ವಿಶ್ವದ ಪ್ರಥಮ ಸಂಸತ್ತು ಎಂದು ಹೆಗ್ಗಳಿಕೆ ಖ್ಯಾತಿ ಪಡೆದಿದೆ ಎಂದು ಮನವಿ ಪತ್ರದಲ್ಲಿ ತಿಳಿಸಿದ್ದಾರೆ. ಇಡೀ ಜಗತ್ತಿನಲ್ಲಿ ಪ್ರಜಾಪ್ರಭುತ್ವ ಮತ್ತು ಮಾನವೀಯ ಮೌಲ್ಯಗಳು ಅನುಭವ ಮಂಟಪದ ಮೂಲಕ ತೋರಿಸಿದ್ದಾರೆ ಬರುವ 30 ರಂದು ರಾಜ್ಯದ ವಿವಿಧ ಕಡೆ ಬಸವ ಜಯಂತಿ ಆಚರಿಸುತ್ತಿವೆ. ಅದರಂತೆ ರಾಷ್ಟ್ರಮಟ್ಟದಲ್ಲಿ ವಿಶ್ವ ಗುರು ಬಸವಣ್ಣನವರ ಜಯಂತಿ ಆಚರಿಸುವಂತೆ ಬಸವ ಭಕ್ತರ ಆಸೆಯಾಗಿದ್ದು ಹೀಗಾಗಿ ಕೇಂದ್ರ ಸರ್ಕಾರವು ಬಸವ ಭಕ್ತರ ಬೇಡಿಕೆ ಈಡೇರಿಸಬೇಕೆಂದರು. ಇಗಾಗಲೇ ಅನುಭವ ಮಂಟಪದ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ಡಾ. ಬಸವಲಿಂಗ ಪಟ್ಟದೇವರು ಮತ್ತು ಈ ಭಾಗದ ಮಠಾಧೀಶರು ಬಸವಾಭಿಮಾನಿಗಳ ಮನವಿಗೆ ಕೇಂದ್ರ ಸರ್ಕಾರ ಸ್ಪಂದಿಸಿ ಈ ಭಾರಿ ದೆಹಲಿಯ ಸಂಸತ್ ಭವನದಲ್ಲಿ 30.ರಂದು ಬಸವ ಜಯಂತಿ ಆಚರಿಸುತ್ತಿದ್ದಾರೆ. ಇದು ಇತಿಹಾಸದಲ್ಲಿ ಪ್ರಥಮ ವಾಗಿದೆ ಎಂದು ಅನುಭವಿಗಳಾದ ಹಿರಿಯ ನಾಯಕ ವಿಧಾನ ಪರಿಷತ್ ಸದಸ್ಯರಾದ ಎಮ್. ಜಿ. ಮೂಳೆ. ತಿಳಿಸಿದ್ದಾರೆ.

## ಮಹಾತ್ಮ ಶ್ರೀ ಬಸವೇಶ್ವರರ 75 ನೇ ಜಾತ್ರಾ ಅಮೃತ ಮಹೋತ್ಸವ ಅದ್ದೂರಿಯಿಂದ ಆಚರಣೆ



(ವರದಿ.ಡಿ.ಕೆ. ಪ್ರಹ್ಲಾದ)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಏ 25 ಶರಣ ನಾಡಿನಲ್ಲಿ ದಿನಾಂಕ 30 - 4 - 2025 ರಿಂದ. ಮೇ 2 ರವರೆಗೆ (ಮೂರು ದಿವಸ) ವಿಶ್ವ ಗುರು ಮಹಾತ್ಮ ಬಸವೇಶ್ವರರ 75 ನೇ ಜಾತ್ರಾ ಅಮೃತ ಮಹೋತ್ಸವ ಅದ್ದೂ-ರಿಯಾಗಿ ಬಹು ವಿಜ್ರಂಭಣೆಯಿಂದ ಹಮ್ಮಿಕೊಳ್ಳಲಾಗಿದೆ ಎಂದು ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಅಧ್ಯಕ್ಷರಾದ ಬಸವರಾಜ ಕೊರಕೆ ಹಾಗೂ ವಿಶ್ವಸ್ಥ ಸಮಿತಿಯ ಅಧ್ಯಕ್ಷರಾದ ಶಶಿಕಾಂತ ದುರ್ಗೆ ತಿಳಿಸಿದ್ದಾರೆ. ಇಲ್ಲಿನ ತಮ್ಮ ಕಾರ್ಯಲಯದಲಿ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಇಗಾಗಲೇ ಜಾತ್ರಾ ಮಹೋತ್ಸವದ ನಿಮಿತ್ತವಾಗಿ 20 ದಿನಗಳವರೆಗೆ ಪೂಜ್ಯ ಶ್ರೀ ಅಮೃಂತಾನಂದ ಸ್ವಾಮಿಸ್ವಾಮೀಜಿಗಳವರಿಂದ ಆಧ್ಯಾತ್ಮಿಕ ಪ್ರವಚನ. ಆರೋಗ್ಯ ತಪಾಸಣೆ ಮತ್ತು ರಕ್ತದಾನ ಅಲ್ಲದೆ ರವಿವಾರದಂದು ಉದ್ಯೋಗ ಮೇಳ ಹಮ್ಮಿಕೊಳ್ಳಲಾಗಿದ್ದು ಸುಮಾರು 9 ಪ್ರತಿಷ್ಠಿತ ಕಂಪೆನಿಗಳು ಪಾಲ್ಗೊಂಡು ಸುಮಾರು 75 ಯುವಕರಿಗೆ ಉದ್ಯೋಗ ಸಹ ನೀಡುವ ಬರವಸೆ ಅಲ್ಲದೆ ಥೇರ ಮೈದಾನದಿಂದ ಪ್ರಮುಖ ವೃತ್ತಗಳ ಮುಖಾಂತರ ಸುಮಾರು 200 ರು ಕಾರುಗಳ ಬೈಕ್ ರ‍್ಯಾಲಿ ಹಮ್ಮಿಕೊಳ್ಳಲಾಗಿದೆ ನಗರದಲ್ಲಿ ಜಾತ್ರಾ ನಿಮಿತ್ತವಾಗಿ ಸೌಂದರ್ಯ ಹೆಚ್ಚಿಸುವ ದೃಷ್ಟಿಯಿಂದ ಮಧ್ಯೆ ಭಾಗದಲ್ಲಿರುವ ಮರಗಳಿಗೆ ಹಾಗೂ ವಿದ್ಯುತ್ ಕಂಬಗಳಿಗೆ ಲೈಟಿನ ದೀಪ ಅಲಂಕಾರ ಹಾಗೂ ಬಸವಣ್ಣನವರ ಷಟಸ್ಥಲ ಭಾವುಟಗಳು ಸಹ ರಾರಾಜಿಸುತ್ತಿರುವುದು.

ಬಸವ ಜಯಂತಿಯ ದಿನದಂದು ಮುಂಜಾನೆ ಬೆಳ್ಳಿ ತೊಟಿಲು ಪೂಜೆಯನ್ನು ಬಾಲಗಾಂವದ ಗುರು ದೇವ ಆಶ್ರಮದ ಪೂಜ್ಯ ಶ್ರೀ ಅಮೃಂತಾನಂದ ಸ್ವಾಮಿಸ್ವಾಮೀಜಿಗಳಿಂದ. ಶಾಸಕರಾದ ಶರಣು ಸಲಗರ್ ಅವರಿಂದ ಮೆರವಣಿಗೆ ಚಾಲನೆ ನೀಡುವರು. ಮೆರವಣಿಗೆಯಲ್ಲಿ ಹೊಸದಾಗಿ ನಿರ್ಮಿಸಿರುವ ಬಸವಣ್ಣನವರ ಬೆಳ್ಳಿ ಪಲ್ಲಕಿ ಹಾಗೂ ಆನೆಯ ಮೇಲೆ ವಚನ ಭಂಡಾರ ಅಲ್ಲದೆ ವಿವಿಧ ಕಲಾತಂಡಗಳು ಭಾಗವಹಿಸಿ ಮೆರವಣಿಗೆಗೆ ಶೋಭೆ ತಂದ್ದುಕೊಡುವವು ಭಂದಂತ ಭಕ್ತರಿಗೆ ಮಹಾ ಪ್ರಸಾದ ವ್ಯವಸ್ಥೆ ಮಾಡಲಾಗುವುದು.

ರಥಮೈದಾನದಲ್ಲಿ ಸಂಜೆಗೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಅಲ್ಲದೆ ಹಾಸ್ಯ ಕಲಾವಿದ ಗಂಗಾವತಿ ಪ್ರಾಣೇಶ ಹಾಗೂ ಸಂಗಡಿಗರು ಮತ್ತು ಚನ್ನ ಬಸವೇಶ್ವರ ನಾಟ್ಯ ಸಂಘ. ಮುತ್ಯಾನ ಬಬಲಾದನ ಸಂಗಡಿಗರಿಂದ ಕಳ ಗುರು ಸುಳ್ಳ ಶಿಷ್ಯ ನಾಟಕ. ನಮ್ಮ ಶಾಲಾ ಮಕ್ಕಳಿಂದ ವಚನ ನೃತ್ಯ ನಡೆಸಲಾಗುವುದು ಎಂದು ತಿಳಿಸಿದರು.

ಉಪಾಧ್ಯಕ್ಷರಾದ ಮಲ್ಲಿಕಾರ್ಜುನ್ ಚಿರಡೆ. ಸಹ ಕಾರ್ಯದರ್ಶಿ ವಿವೇಕಾನಂದ ಹೂದಲೂರೆ. ನಿರ್ದೇಶಕರಾದ ಈರಣ್ಣ ಹಲಶೇಟ್ಟೆ. ಮಲ್ಲಯ್ಯಾ ಹೀರೆಮಠ. ಜಗನ್ನಾಥ ಖುಬಾ. ರೇವಣಪ್ಪಾ ರಾಯವಾಡೆ. ವಿಶ್ವಸ್ಥ ಸಮಿತಿಯ ಉಪಾಧ್ಯಕ್ಷರಾದ ಡಾ. ಜಿ. ಎಸ್. ಭುರಳೆ. ಕಾರ್ಯದರ್ಶಿ ನಾಗಯ್ಯ ಸ್ವಾಮಿ. ವಿಶ್ವಸ್ಥರಾದ ಸೋಮಶೇಖರ ವಸ್ತು ವಸ್ತ್ರದ . ಹಾಗೂ ಶರಣು ದುರ್ಗೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಆಶಾಪುರ ಶಾಲೆಯಲ್ಲಿ ಬೇಸಿಗೆ ಶಿಬಿರ ಆರಂಭ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಏಪ್ರಿಲ್ 25-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ ರಾಯಚೂರ ಹಾಗೂ ಅಭ್ಯುದಯ ಫೌಂಡೇಶನ್ ಮೈಸೂರ ಇವರ ಆಶ್ರಯದಲ್ಲಿ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಆಶಾಪೂರದಲ್ಲಿ 20 ದಿನಗಳ ಬೇಸಿಗೆ ಶಿಬಿರ ಇತ್ತೀಚೆಗೆ ಆರಂಭಗೊಂಡಿತು.

ಈ ಶಿಬಿರಕ್ಕೆ ಮಹಿಳಾ ಮತ್ತು ಮಕ್ಕಳ ಕಲ್ಯಾಣಾಧಿಕಾರಿ ಮುದುಕಪ್ಪ ಹೆಚ್ ಅವರು ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಶಿಬಿರದಲ್ಲಿ ಗಣಿತ, ಬೇಸಿಕ್ ಇಂಗ್ಲೀಷ್, ವಿಜ್ಞಾನ ವಿಷಯಗಳು ಹಾಗೂ ಪಠ್ಯೇತರ ಚಟುವಟಿಕೆಗಳಾದ, ಚಿತ್ರಕಲೆ, ಸಂಗೀತ, ಆರ್ಟ್ ಮತ್ತು ಕ್ರಾಫ್ಟ್ (ಕಲೆ ಮತ್ತು ಕರಕುಶಲ) ಇನ್ನಿತರ ಚಟುವಟಿಕೆಗಳನ್ನು ನಡೆಸಲಾಗುತ್ತದೆ. ಮಕ್ಕಳು ಬೇಸಿಗೆಯ ಸಮಯ ವ್ಯರ್ಥ ಮಾಡುವುದಕ್ಕಿಂತ ಇಂತಹ ಶಿಬಿರದಲ್ಲಿ ಭಾಗವಹಿಸಿ ನಿರಂತರ ಕಲಿಕಾ ಚಟುವಟಿಣಟಿಜಜಿಟಿಜಯಲ್ಲಿ ತೊಡಗಿಸಿಕೊಂಡು ಮುಂದಿನ ಭವಿಷ್ಯವನ್ನು ರೂಪಿಸಿಕೊಳ್ಳುವಂತೆ ಮಕ್ಕಳಿಗೆ ಸಲಹೆ ನೀಡಿದರು. ಹಾಗೂ ಎಲ್ಲಾ ಪಾಲಕರು ಮಕ್ಕಳಿಗೆ ಬೇಸಿಗೆ ಶಿಬಿರದಲ್ಲಿ ಭಾಗವಹಿಸುವಂತೆ ಪ್ರೋತ್ಸಾಹಿಸಬೇಕೆಂದು ಮನವಿ ಮಾಡಿದರು.

ಸಮಾರಂಭದಲ್ಲಿ ಆಶಾಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಗುರುಮಾತೆ ತನುಜಾ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಸಂಯೋಜಕರಾದ ಬಾವಸಲಿ, ಅಂಗನವಾಡಿ ಕಾರ್ಯಕರ್ತೆ ಖಮರ್ಜಾನ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜೆಂಡರ್ ತಜ್ಞೆ ಗಿರಿಜವ್ವ, ವಿಜಯಲಕ್ಷ್ಮೀ ಹಾಗೂ ಶಿಬಿರದ ಶಿಕ್ಷಕಿಯರಾದ ಪದ್ಮಾ, ರಾಜೇಶ್ವರಿ ಹಾಗೂ ಮಕ್ಕಳು ಪಾಲಕರು ಭಾಗವಹಿಸಿದ್ದರು.

## ಏಪ್ರಿಲ್ 30 ರಂದು ವಿಶ್ವಗುರು ಬಸವಣ್ಣ ಸಾಂಸ್ಕೃತಿಕ ನಾಯಕ ಬಸವ ಜಯಂತಿ ಆಚರಣೆ

ಕಲಬುರಗಿ.ಏ.25-ಕಲಬುರಗಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರಪಾಲಿಕೆ ಹಾಗೂ ಜಿಲ್ಲಾ ಪಂಚಾಯತ್ ಇವುಗಳ ಸಂಯುಕ್ತಾಶ್ರಯದಲ್ಲಿ ವಿಶ್ವಗುರು ಬಸವಣ್ಣ ಸಾಂಸ್ಕೃತಿಕ ನಾಯಕ ಬಸವ ಜಯಂತಿ ಆಚರಣೆ ಕಾರ್ಯಕ್ರಮವನ್ನು ಏಪ್ರಿಲ್ 30 ರಂದು ಬುಧವಾರ ಬೆಳಿಗ್ಗೆ 9 ಗಂಟೆಗೆ ಕಲಬುರಗಿ ನಗರದ ಜಗತ್ ವೃತ್ತದಲ್ಲಿರುವ ಬಸವೇಶ್ವರ ಪ್ರತಿಮೆ ಹತ್ತಿರದಲ್ಲಿ ಹಮ್ಮಿಕೊಳ್ಳಲಾಗಿದೆ. ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹಾಗೂ ರಾಜ್ಯಸಭಾ ಸದಸ್ಯ ಡಾ. ಮಲ್ಲಿಕಾರ್ಜುನ ಖರ್ಗೆ ಅವರು ಘನ ಉಪಸ್ಥಿತಿ ವಹಿಸುವರು. ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ರಾಜ್ಯದ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ, ಜೇವರ್ಗಿ ಶಾಸಕ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಡಾ. ಅಜಯಸಿಂಗ್, ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ, ಕರ್ನಾಟಕ ರೇಷ್ಮೆ ಉದ್ದಿಮೆಗಳ ನಿಗಮದ ನಿಯಮಿತದ ಅಧ್ಯಕ್ಷೆ ಹಾಗೂ ಉತ್ತರ ಶಾಸಕಿ ಕನೀಜ್ ಫಾತೀಮಾ, ಆಳಂದ ಶಾಸಕ ಹಾಗೂ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷರಾದ ಬಿ.ಆರ್. ಪಾಟೀಲ ಹಾಗೂ ಕರ್ನಾಟಕ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಾಬುರಾವ್ ಚಿಂಚನಸೂರ್ ಅವರು ಗೌರವ ಉಪಸ್ಥಿತಿ ವಹಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಕಲಬುರಗಿ ಲೋಕಸಭಾ ಸದಸ್ಯ ರಾಧಾಕೃಷ್ಣ ದೊಡ್ಡಮನಿ, ಬೀದರ ಲೋಕಸಭಾ ಸದಸ್ಯ ಸಾಗರ ಖಂಡ್ರೆ, ಶಾಸಕರುಗಳಾದ ಬಸವರಾಜ ಮತ್ತಿಮಡು, ಡಾ. ಅವಿನಾಶ ಉಮೇಶ ಜಾಧವ, ವಿಧಾನ ಪರಿಷತ್ ಶಾಸಕರುಗಳಾದ ಸುನೀಲ್ ವಲ್ಲ್ಯಾಪುರೆ, ಶಶೀಲ ಜಿ. ನಮೋಶಿ, ಡಾ. ಬಿ.ಜಿ. ಪಾಟೀಲ, ಡಾ. ಚಂದ್ರಶೇಖರ ಪಾಟೀಲ ಹುಮನಾಬಾದ, ಡಾ. ತಳವಾರ ಸಾಬಣ್ಣ, ತಿಮ್ಮಣ್ಣಪ್ಪ ಕಮಕನೂರ, ಜಗದೇವ ಗುತ್ತೇದಾರ್, ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ಅಧ್ಯಕ್ಷ ಸೈಯದ್ ಮಹಮ್ಮದ್ ಅಲಿ ಅಲ್ ಹುಸೇನಿ, ಮಹಾನಗರಪಾಲಿಕೆ ಮಹಾಪೌರ ಯಲ್ಲಪ್ಪ ನಾಯ್ಕೋಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜಹರ್ ಆಲಂ ಖಾನ್, ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಅಧ್ಯಕ್ಷ ದೇವಿಂದ್ರಪ್ಪ ಮರತೂರ, ಅಚ್ಚುಕಟ್ಟು ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ದುಲ್ ರಶೀದ ಅವರು ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತ ಕೃಷ್ಣ ಭಾಜಪೇಯಿ, ಕಲಬುರಗಿ ಈಶಾನ್ಯ ವಲಯದ ಪೊಲೀಸ್ ಉಪ ಮಹಾನಿರೀಕ್ಷಕ ಅಜಯ ಹಿಲೋರಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿ ಎಂ. ಸುಂದರೇಶ ಬಾಬು ಹಾಗೂ ಕಲಬುರಗಿ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಅಪರ ಆಯುಕ್ತ ಡಾ. ಆಕಾಶ ಎಸ್ ಅವರು ವಿಶೇಷ ಆಹ್ವಾನಿತರಾಗಿ ಉಪಸ್ಥಿತರಿರುವರು.

ಕಾರ್ಯಕ್ರಮದಲ್ಲಿ ಧಾರವಾಡದ ನಿವೃತ್ತ ಉಪನ್ಯಾಸಕ ಡಾ. ದುರ್ಗಾದಾಸ್ ಅವರು ವಿಶೇಷ ಉಪನ್ಯಾಸ ನೀಡುವರು.

## ಕಾಶ್ಮೀರದಲ್ಲಿ ಪ್ರವಾಸಿಗರ ಮೇಲಿನ ದಾಳಿಗೆ ಖಂಡನೆ:ಮೇತ್ರಿ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಕಾಶ್ಮೀರದಲ್ಲಿ ಪ್ರವಾಸಿಗರ ಮೇಲಿನ ದಾಳಿಯನ್ನು ಬಿಜೆಪಿ ಓಬಿಸಿ ಮೋರ್ಚಾದ ಜಿಲ್ಲಾ ಉಪಾಧ್ಯಕ್ಷ ದಯಾನಂದ ಮೇತ್ರಿ ತೀವ್ರವಾಗಿ ಖಂಡಿಸಿದ್ದಾರೆ. ಕೇಂದ್ರದ ನರೇಂದ್ರ ಮೋದಿ ಸರ್ಕಾರ ಉಗ್ರರ ಈ ಕೃತ್ಯಕ್ಕೆ ಅವರದೇ ಭಾಷೆಯಲ್ಲಿ ತಕ್ಕ ಉತ್ತರ ಕೊಟ್ಟೇ ಕೊಡುತ್ತದೆ ಎಂದಿದ್ದಾರೆ. ಶಾಂತಿ ಸೌಹಾರ್ದದ ಭಾರತದಲ್ಲಿ ಇಂತಹ ಕೃತ್ಯಗಳು ಮರುಕಳಿಸದಿರಲಿ. ಹಾಗೆಯೇ ಈ ಕೃತ್ಯ ಎಸಗಿದವರಿಗೆ ಕಠಿಣ ಶಿಕ್ಷೆ ಆಗಲಿ ಮತ್ತು ನಮ್ಮನ್ನು ಅಗಲಿದ ಎಲ್ಲಾ ಭಾರತೀಯರಿಗೆ ಭಾವಪೂರ್ಣ ಶ್ರದ್ಧಾಂಜಲಿ ಕೋರುತ್ತಾ ಎಲ್ಲಾ ಕುಟುಂಬಸ್ಥರಿಗೆ ಈ ದುಃಖವನ್ನು ಭರಿಸುವ ಶಕ್ತಿ ಹಾಗೂ ಧೈರ್ಯವನ್ನು ದೇವರು ನೀಡಲಿ ಎಂದು ಪ್ರಾರ್ಥಿಸಿದ್ದಾರೆ.

ಮಲ್ಲಮ್ಮ ನುಡಿ ಕನ್ನಡ ದಿನ ಪತ್ರಿಕೆಯಲ್ಲಿ ಜಾಹೀರಾತಿಗಾಗಿ ಇಂದೇ ಸಂಪರ್ಕಿಸಿ: 7795896664

## ವಿದ್ಯಾರ್ಥಿನಿ ಕಿರತ್ ಕೌರ್ ಸಾಧನೆ-ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 25 : ನಗರದ ಗುರು ಕಾಲೋನಿಯಲ್ಲಿರುವ ಗುರು ನಾನಕ ದೇವ ಪಬ್ಲಿಕ್ ಶಾಲೆಯ 10ನೇ ತರಗತಿಯಲ್ಲಿ ಓದುತ್ತಿರುವ ಕಿರತ್ ಕೌರ್ ಪ್ರತಿಭಾನ್ವಿತ ವಿದ್ಯಾರ್ಥಿನಿ ಅಂತರರಾಷ್ಟ್ರೀಯ ಮಟ್ಟದಲ್ಲಿ ತನ್ನ ಛಾಪು ಮೂಡಿಸಿ ಕಿರಿಯ ವಯಸ್ಸಿನಲ್ಲಿಯೇ ಸಂಶೋಧಕಿಯಾಗಿ ಆಯ್ಕೆಯಾಗಿದ್ದಾರೆ.

ಬೆಂಗಳೂರಿನ ಪ್ರಯೋಗ ಸಂಶೋಧನ ಸಂಸ್ಥೆಯು ಗೌರವಾನ್ವಿತ ಎಲ್ಸೆವಿಯರ್ ಇಂಟರ್‌ನ್ಯಾಷನಲ್ ಪಬ್ಲಿಕೇಶನ್‌ನಲ್ಲಿ ಶಂಶೋಧನಾ ಲೇಖನವನ್ನು ಪ್ರಕಟಿಸಿದೆ.

ಈ ಗಮನಾರ್ಹ ಸಾಧನೆಯು ಕಿರತ ಕೌರ್ ಅವರ ಕಠಿಣ ಪರಿಶ್ರಮ, ವೈಜ್ಞಾನಿಕ ಕುತೂಹಲ ಮತ್ತು ಸುಸ್ಥಿರ ಸಾವೀನ್ಯತೆಗೆ ಬದ್ಧತೆಗೆ ಸಾಕ್ಷಿಯಾಗಿಯಾಗಿ ಅವರು ಅಪಾರ ಕೀರ್ತಿ ತಂದಿದ್ದಾರೆ.

ಕಿರತ್ ಕೌರ್ ಅವರಿಗೆ ಶಾಲೆಯಲ್ಲಿ ಸನ್ಮಾನಿಸಿ ಅಧ್ಯಕ್ಷೆ ಡಾ॥ ರೇಶ್ಮಾ ಕೌರ ಅವರು ಮಾತನಾಡುತ್ತ ಕಿರತ್ ಕೌರ್ ಅವರ ಯಶಸ್ಸು ಶಾಲೆಗೆ ಹೆಮ್ಮೆಯ ಕ್ಷಣ ಮಾತ್ರವಲ್ಲದೆ ಶೋಧನೆ ಮತ್ತು ನವೀನ್ಯತೆ ಜಗತ್ತಿನಲ್ಲಿ ಛಾಪು ಮೂಡಿಸಲು ಬಯಸುವ ಎಲ್ಲಾ ಯುವ ಪಿಳಿಗಿಗೆ ಸ್ಪೂರ್ತಿಯಾಗಿದೆ, ಅವರಿಗೆ ನಾನು ಹೃತ್ಪೂರ್ವಕ ಅಭಿನಂದನೆ ಸಲ್ಲಿಸುತ್ತೇನೆ ಎಂದು ನುಡಿದರು.

ವಿದ್ಯಾರ್ಥಿನಿ ಕಿರತ್ ಕೌರ್ ಅವರು ಮಾತನಾಡುತ್ತ ಬೆಂಗಳೂರಿನ ಡಾ॥ ಹೆಚ್ ಎಸ್ ನಾಗರಾಜ ಪ್ರಯೋಗ ಇನ್‌ಸ್ಟಿಟ್ಯೂಟ್ ಆಫ್ ಎದುಕೇಶನ್ ರಿಸರ್ಚ್ ಸಂಸ್ಥೆ ಮಾರ್ಗದರ್ಶನ ನನಗೆ ಈ ಸಾಧನೆ ಮಾಡಲು ಬಹಳ ಅನುಕೂಲವಾಗಿದೆ ಎಂದು ಕೌರ್ ತಿಳಿಸಿದರು.

ಈ ಸಾಧನೆಗೆ ಶ್ರೀ ನಾನಕ ಝಿರಾ ಸಂಸ್ಥೆಯ ಫೌಂಡೇಷನ್‌ನ ಅಧ್ಯಕ್ಷ ಡಾ॥ ಎಸ್.ಬಲಬೀರ್ ಸಿಂಗ್, ಪ್ರಾಂಶುಪಾಲರಾದ ಶ್ರೀಮತಿ ಶರ್ಲಿ ಶೀಬಾ, ಬೋಧನೆ ಮತ್ತು ಬೋಧಕೇತರ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ. ಈ ಸಂದರ್ಭದಲ್ಲಿ ಕಿರತ್ ಕೌರ್ ತಂದೆ ರಾಜೇಂದ್ರಸಿಂಗ್ ಮತ್ತು ತಾಯಿ ವಿನೀತ್ ಕೌರ್ ಸಹ ಉಪಸ್ಥಿತರಿದ್ದರು.

## ಸಣ್ಣ ನೀರಾವರಿ ಇಲಾಖೆಯಲ್ಲಿ ಸಿ ಸಿ ಕ್ಯಾಮೆರಾ ಅಳವಡಿಸಲು ಜಾನಸನ್ ಘೋಡೆ ಮನವಿ



ಬೀದರ. ಏ. 25 : ಇಲ್ಲಿಯ ಸಣ್ಣ ನೀರಾವರಿ ಇಲಾಖೆಯ ವಿಭಾಗೀಯ ಕಚೇರಿಯಲ್ಲಿ ಹಾಗೂ ಉಪ ವಿಭಾಗಗಳಲ್ಲಿ ಸಿ ಸಿ ಕ್ಯಾಮೆರಾ ಕೂಡಿಸಬೇಕು ಎಂದು ಕಾಂಗ್ರೆಸ್ ಕಾರ್ಮಿಕ ವಿಭಾಗದ ರಾಜ್ಯ ಕಾರ್ಯದರ್ಶಿ ಜಾನಸನ್ ಘೋಡೆ ಮನವಿ ಮಾಡಿದ್ದಾರೆ

ಬೆಂಗಳೂರಿನಲ್ಲಿ ಅವರು ಈ ಕುರಿತು ಸಣ್ಣ ನೀರಾವರಿ ಇಲಾಖೆ ಸಚಿವರಿಗೆ ಪ್ರತ್ಯೇಕ ಮನವಿ ಪತ್ರ ಸಲ್ಲಿಸಿದ್ದಾರೆ.

ಸರ್ಕಾರದ ವಿವಿಧ ಇಲಾಖೆಗಳ ಕಚೇರಿಗಳಲ್ಲಿ ಸಿ ಸಿ ಕ್ಯಾಮೆರಾ ಗಳಿವೆ ಆದರೆ. ಬೀದರ್ ಸಣ್ಣ ನೀರಾವರಿ ಇಲಾಖೆ ಕಚೇರಿಯಲ್ಲಿ ವಿಭಾಗ ಮತ್ತು ಉಪ ವಿಭಾಗಗಳಲ್ಲಿ ಸಿ ಸಿ ಕ್ಯಾಮೆರಾ ಇರುವುದಿಲ್ಲ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಮನವಿ ಪತ್ರ ಸಲ್ಲಿಸಿದ್ದಾರೆ.

## ಡಾ. ಬಸವಲಿಂಗ ಅವಧೂತರಿಗೆ ಅಣ್ಣ ಬಸವಣ್ಣ ಪ್ರಶಸ್ತಿ



ಮಲ್ಲಮ್ಮನುಡಿವಾರ್ತೆ ಬೀದರ. ಏ. 25 : ಜಹೀರಾಬಾದ್ ತಾಲ್ಲೂಕಿನ ಮಲ್ಲಯ್ಯಗಿರಿ ಹಾಗೂ ಬಸವಕಲ್ಯಾಣ ಆಶ್ರಮದ ಪೀಠಾಧಿಪತಿ ಡಾ. ಬಸವಲಿಂಗ ಅವಧೂತರನ್ನು ಬೆಂಗಳೂರಿನ ಸುಮಂಗಲಿ ಸೇವಾ ಆಶ್ರಮದ ಪ್ರಸಕ್ತ ಸಾಲಿನ ಅಣ್ಣ ಬಸವಣ್ಣ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಬೆಂಗಳೂರಿನ ಆರ್.ಟಿ.ನಗರದ ಚೋಳನಾಯಕನಹಳ್ಳಿಯ ಆಶ್ರಮದಲ್ಲಿ ಏಪ್ರಿಲ್ 30 ರಂದು ನಡೆಯಲಿರುವ ಬಸವ ಜಯಂತಿ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಆಶ್ರಮದ ಪ್ರಕಟಣೆ ತಿಳಿಸಿದೆ. ಡಾ. ಬಸವಲಿಂಗ ಅವಧೂತರು ಮೂರು ದಶಕಗಳಿಂದ ಸಮಾಜೋಧಾರ್ಮಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಸಭೆ, ಸಮಾರಂಭ, ಪ್ರವಚನ ಕಾರ್ಯಕ್ರಮಗಳ ಮೂಲಕ ಜನರಲ್ಲಿ ಆಧಾತ್ಮಿಕ ಜಾಗೃತಿ ಮೂಡಿಸುತ್ತಿದ್ದಾರೆ. ಅವಧೂತರಿಗೆ ಕರ್ನಾಟಕ, ತೆಲಂಗಾಣ, ಆಂಧ್ರಪ್ರದೇಶ, ಮಹಾರಾಷ್ಟ್ರ ಸೇರಿದಂತೆ ವಿವಿಧೆಡೆ ಅಪಾರ ಭಕ್ತರು ಇದ್ದಾರೆ. ಸಾಮಾಜಿಕ ಹಾಗೂ ಧಾರ್ಮಿಕ ಕ್ಷೇತ್ರಗಳಿಗೆ ನೀಡಿದ ಕೊಡುಗೆಗಾಗಿ ಸುಮಂಗಲಿ ಆಶ್ರಮ ಅವರನ್ನು ಪ್ರಶಸ್ತಿಗೆ ಆಯ್ಕೆ ಮಾಡಿದೆ. ಡಾ. ಬಸವಲಿಂಗ ಅವಧೂತರನ್ನು ಪ್ರಶಸ್ತಿಗೆ ಆಯ್ಕೆ ಮಾಡಿದ್ದಕ್ಕೆ ಪ್ರಮುಖರಾದ ಡಾ. ಬಸವರಾಜ ಬಲ್ಲೂರ, ಸಿದ್ದಾರೆಡ್ಡಿ ನಾಗೋರಾ, ದೇವೇಂದ್ರ ಕರಂಜೆ, ಟಿ.ಎಂ. ಮಚ್ಚೆ, ಬಂಡಯ್ಯ ಸ್ವಾಮಿ, ಹಣಮಂತ ಪಾಟೀಲ ಚಿಟ್ಟಾ, ವೀರಶೆಟ್ಟಿ, ಚನಶೆಟ್ಟಿ, ಸಿದ್ಧಾರೂಢ ಭಾಲ್ಕೆ, ಅಶೋಕ ದಿಡಗೆ, ಶಿವಕುಮಾರ ಮೂಲಗೆ, ನಾಗೇಶ ಪಾಟೀಲ, ತುಕಾರಾಮ ಮೇತ್ರೆ, ಸಂಜುಕುಮಾರ ಬುಕ್ಕಾ, ಸುನೀಲ್ ರಾಠೋಡ್, ಜಗನ್ನಾಥ ಕೊಳಾರೆ, ಶಿವಕುಮಾರ ಪಟಪಳ್ಳಿ, ಜಗನ್ನಾಥ ಕಮಲಾಪುರೆ, ಸಂಗೀತಾ ಘಂಟೆ, ಈಶ್ವರಮ್ಮ ಪಾಟೀಲ ಮತ್ತಿತರರು ಸಂತಸ ವ್ಯಕ್ತಪಡಿಸಿದ್ದಾರೆ.

## 27ರಿಂದ ಶ್ರೀ ಬುತ್ತಿ ಬಸವಣ್ಣ ಜಾತ್ರಾ ಮಹೋತ್ಸವ: ಡಾ. ರಾಜಶೇಖರ ಶಿವಾಚಾರ್ಯರು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 25 : ಪ್ರತೀ ವರ್ಷದಂತೆ ಈ ವರ್ಷವೂ ಸಹ ಈ ತಿಂಗಳ 27 ರಿಂದ ಮೇ 2ರ ವರೆಗೆ ನಗರಕ್ಕೆ ಹತ್ತಿರದ ಸುಕ್ಷೇತ್ರ ಚಿದ್ರಿಯ ಐತಿಹಾಸಿಕ ಪ್ರಸಿದ್ಧ ಶ್ರೀ ಬುತ್ತಿ ಬಸವಣ್ಣನವರ 25ನೇ ಜಾತ್ರಾ ರಜತ ಮಹೋತ್ಸವ ನಡೆಯಲಿದೆ ಎಂದು ಜಾತ್ರಾ ಮಹೋತ್ಸವದ ನೇತೃತ್ವ ವಹಿಸಿದ್ದ ಬೇಮಳಖೇಡದ ಪೂಜ್ಯಶ್ರೀ ಡಾ. ರಾಜಶೇಖರ ಶಿವಾಚಾರ್ಯರು ನುಡಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಶ್ರೀಗಳು 2000ನೇ ಇಸವಿಯಿಂದ ಜಾತ್ರಾ ಮಹೋತ್ಸವ ಆಚರಿಸಿಕೊಂಡು ಬರಲಾಗುತ್ತಿದೆ. ಈ ಹಿಂದೆಯೂ ಸಹ ನೂರಾರು ವರ್ಷಗಳಿಂದ ಹಿರಿಯರು ಜಾತ್ರಾ ಮಹೋತ್ಸವ ಹಮ್ಮಿಕೊಂಡು ಬರುತ್ತಿದ್ದರು. ಅದರ ಮಧ್ಯದಲ್ಲಿ ಅಲ್ಲಿಯ ನಂದಿ ವಿಗ್ರಹ ಭಿನ್ನವಾದ ಕಾರಣ ಜಾತ್ರೆಯನ್ನು ನಿಲ್ಲಿಸಲಾಗಿತ್ತು. 2000ನೇ ಇಸವಿಯಲ್ಲಿ ಹೊಸ ಮೂರ್ತಿ ಸ್ಥಾಪಿಸಿ ಮಂದಿರದ ನೂತನ ಜೀರ್ಣೋದ್ಧಾರಗೈದು ಮತ್ತೆ ಜಾತ್ರೆ ಮುಂದುವರೆಸಿಕೊಂಡು ಬರಲಾಗುತ್ತಿದೆ ಎಂದರು.

12ನೇ ಶತಮಾನದಲ್ಲಿ ಶರಣರಲ್ಲಿ ಒಬ್ಬರಾದ ಮೇದಾರ ಕೇತಯ್ಯನವರು ಕಲ್ಯಾಣಕ್ಕೆ ಹೋಗಿ ಬಸವಣ್ಣನವರ ದರ್ಶನ ಪಡೆದು ಬರುತ್ತಿರುವಾಗ ಈಗಿರುವ ಬುತ್ತಿ ಬಸವಣ್ಣ ದೇವಸ್ಥಾನದಲ್ಲಿ ತಾನು ತಂದ ಬುತ್ತಿ ಬಿಚ್ಚಿ ಊಟ ಮಾಡಿದ್ದನ್ನು ಸ್ಮರಿಸಬಹುದು. ಇಲ್ಲಿ ಸದಾ ದಾಸೋಹ ನಡೆಯುತ್ತಿರುವ ಕಾರಣ ಇದಕ್ಕೆ ಬುತ್ತಿ ಬಸವಣ್ಣ ದೇವಸ್ಥಾನವೆಂಬ ಹೆಸರು ಬರಲು ಕಾರಣವಾಯಿತು. ಇತ್ತೀಚಿಗೆ ಭವ್ಯವಾದ ರಥೋತ್ಸವ ಸಹ ಜರುಗುತ್ತಲಿದ್ದು, ಜಾತ್ರೆಯ ಕಳೆ ಮತ್ತಷ್ಟು ಹೆಚ್ಚಿಸಿದೆ ಎಂದರು.

ಈ ತಿಂಗಳ 30 ರಂದು ಸಾ. 4ಗಂಟೆಗೆ ಕಾಶಿ ಜಗದ್ಗುರುಗಳು ಬುತ್ತಿ ಬಸವಣ್ಣ ದೇವಸ್ಥಾನಕ್ಕೆ ಆಗಮಿಸುತ್ತಿದ್ದು, ಚಿದ್ರಿಯ ಶ್ರೀ ಹನುಮಾನ ದೇವಸ್ಥಾನದಿಂದ ಬುತ್ತಿಬಸವಣ್ಣದೇವಸ್ಥಾನದವರೆಗೆ ಜಗದ್ಗುರುಗಳ ಪುರಪ್ರವೇಶ ಹಾಗೂ ಭವ್ಯ ಮೆರವಣಿಗೆ ಜರುಗಲಿದೆ. ಅಲ್ಲಿಯ ಸುಮಂಗಲೆಯರು ಕುಂಭ ಕಳಶದೊಂದಿಗೆ ಜಗದ್ಗುರುಗಳ ಮೆರವಣಿಗೆಗೆ ಶೋಭೆ ತರುವರು. ಆರತಿಯೆತ್ತಿ ಜಗದ್ಗುರುಗಳನ್ನು ಸ್ವಾಗತಿಸುವರು ಎಂದರು.

ಬುತ್ತಿ ಬಸವಣ್ಣ ದೇವಸ್ಥಾನದ ಪದಾಧಿಕಾರಿಗಳಲ್ಲೊಬ್ಬರಾದ ಸಂದೀಪ ಮಾಶೆಟ್ಟಿ ಮಾತನಾಡಿ 30 ರಂದು ಬೆ. 8ಗಂಟೆಗೆ ಶ್ರೀ ಬುತ್ತಿ ಬಸವಣ್ಣ ದೇವಾಲಯದಿಂದ ಬೀದರ ನಗರದಲ್ಲಿ ಶಾಂತಿಯುತ ಬೈಕ್ ರ್‍ಯಾಲಿ ನಡೆಯಲಿದ್ದು, ಎಲ್ಲಾ ಬಸವಭಕ್ತರು ಪಾಲ್ಗೊಳ್ಳಬೇಕೆಂದು ವಿನಂತಿಸಿದರು. ಸಂಜೆ 6 ಗಂಟೆಗೆ ಬಸವಣ್ಣನ ತೊಟ್ಟಿಲು ಕಾರ್ಯಕ್ರಮವನ್ನು ಪೂಜ್ಯ ರಾಜಶೇಖರ ಶಿವಾಚಾರ್ಯರು ಹಾಗೂ ಭಕ್ತಾದಿಗಳಿಂದ ಜರುಗಲಿದೆ. ಸ. 7ಗಂಟೆಗೆ ಪೂಜ್ಯ ಕಾಶಿ ಜಗದ್ಗುರುಗಳಿಂದ ನೂತನ ಬುತ್ತಿ ಬಸವಣ್ಣ ಅನುಭವ ಮಂಟಪ ಹಾಗೂ ಪ್ರವಚನ ಕಾರ್ಯಕ್ರಮ ಜರುಗುವುದು. ಉದ್ಘಾಟನೆಯನ್ನು ರಾಜ್ಯದ ಅರಣ್ಯ ಪರಿಸರ ಹಾಗೂ ಜೀವಿಶಾಸ್ತ್ರ ಮತ್ತು ಬೀದರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಮಾಡುವರು. ಪೌರಾಡಳಿತ ಸಚಿವ ರಹಿಂಖಾನ್, ಸಂಸದ ಸಾಗರ ಖಂಡ್ರೆ, ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ, ನಗರಸಭೆ ಸದಸ್ಯ ಶಶಿ ಹೊಸಳ್ಳಿ, ಸ್ಥಳೀಯ ಕೌನ್ಸಿಲರಗಳಾದ ಇಂದುಮತಿ ಮಾಶೆಟ್ಟಿ, ಬಿಜೆಪಿ ಮುಖಂಡ ಈಶ್ವರಸಿಂಗ್ ಠಾಕೂರ ಹಾಗೂ ಇತರರು ಉಪಸ್ಥಿತರಿರುವರು. ದೇವಸ್ಥಾನದ ಅಧ್ಯಕ್ಷ ರಮೇಶ ಮಾಶೆಟ್ಟಿ ಅಧ್ಯಕ್ಷತೆ ವಹಿಸುವರು. ರಾ. 9ಗಂಟೆಗೆ ಸದ್ಭಕ್ತರಿಂದ ಲಕ್ಷದೀಪೋತ್ಸವ ಜರುಗಲಿದೆ. ರಾ. 10 ಗಂಟೆಗೆ ಬುತ್ತಿ ಬಸವಣ್ಣನ ದೇವಾಲಯದಿಂದ ನಂದಿ ಬಸವಣ್ಣನ ಪಲ್ಲಕ್ಕಿಯನ್ನು ಅತೀ ವಿಜೃಂಭಣೆಯಿಂದ ಮಕ್ಕಳ ಕೋಲಾಟ, ಕುಣಿತ ಹಾಗೂ ಸಂಗೀತ ಮೇಳದೊಂದಿಗೆ ಚಿದ್ರಿ ಗ್ರಾಮದಲ್ಲಿ ನಡೆಯುವುದು. ನಂತರ ಬೆಳಗಿನ ಜಾವ ಅಗ್ನಿಪೂಜೆ ಮಾಡಲಾಗುವುದು.

ಜಾತ್ರೆಯ ಇನ್ನೋರ್ವ ಪದಾಧಿಕಾರಿ ತುಕಾರಾಮ ಕರಾಟೆ ಚಿಮಕೊಡೆ ಮಾತನಾಡಿ ಈ ತಿಂಗಳ 27ರಂದು ಬೆ. 6ಗಂಟೆಗೆ ಶ್ರೀ ನಂದಿ ಬಸವಣ್ಣನ ಮೂರ್ತಿಗೆ ರುದ್ರಾಭಿಷೇಕ, ಬೆ. 8ಗಂಟೆಗೆ ಷಟಸ್ಥಲ ಧ್ವಜಾರೋಹಣ ಮೂಲಕ ಜಾತ್ರಾ ಮಹೋತ್ಸವಕ್ಕೆ ಚಾಲನೆ, ಸಾ. 7ಗಂಟೆಗೆ ಪೂಜ್ಯ ಷ.ಬ್ರ.ಡಾ.ರಾಜಶೇಖರ ಶಿವಾಚಾರ್ಯರಿಂದ ಪ್ರವಚನ ಕಾರ್ಯಕ್ರಮ ಜರುಗಲಿದೆ. 28 ರಂದು ಬೆ. 8 ಗಂಟೆಗೆ ಪೂಜ್ಯ ಷ.ಬ್ರ.ರಾಜಶೇಖರ ಶಿವಾಚಾರ್ಯರ ಸನ್ನಿಧಿಯಲ್ಲಿ 101 ದಂಪತಿಗಳಿಂದ ಲಕ್ಷಬಿಲ್ವಾರ್ಚನೆ, ಸಾ. 6ಗಂಟೆಗೆ ಸಂಗೀತ ರಸಮಂಜರಿ ನಡೆಯುವುದು. ಸಾ. 7ಗಂಟೆಗೆ ಮಾತೆ ಬಸವಾಂಜಲಿ ತಾಯಿಯವರಿಂದ ಪ್ರವಚನ ಜರುಗುವುದು. 29 ರಂದು ಸಾ. 7ಗಂಟೆಗೆ ಸದ್ಗುರು ಡಾ. ಬಸವಲಿಂಗ ಅವಧೂತರಿಂದ ಸಂಗೀತ ಮತ್ತು ಪ್ರವಚನ ಕಾರ್ಯಕ್ರಮ ನಡೆಯುವುದು. ಮೇ. 1ರಂದು ಸಾ. 7ಗಂಟೆಗೆ ಶ್ರೀ ದತ್ತದಿಗಂಬರ ಅಭಿನವ ಶರಣ ಶಂಕರಲಿಂಗ ಮಹಾರಾಜರಿಂದ ಪ್ರವಚನ ಹಾಗೂ ರಾ. 9 ಗಂಟೆಯಿಂದ ಪೂಜ್ಯರು ಹಾಗೂ ಸದ್ಭಕ್ತರಿಂದ ರಥೋತ್ಸವ ಜರುಗುವುದು.

ಮೇ. 2ರಂದು ಬೆ. 7 ಗಂಟೆಗೆ ಜಂಗಿ ಕುಸ್ತಿ ಸ್ಪರ್ಧೆಯೊಂದಿಗೆ ಜಾತ್ರಾ ಮಹೋತ್ಸವ ಸಂಪನ್ನಗೊಳ್ಳುವುದು. ಕುಸ್ತಿಯಲ್ಲಿ ಸ್ಥಳೀಯ, ನೆರೆಯ ತೆಲಂಗಾಣ, ಮಹಾರಾಷ್ಟ್ರ, ಆಂಧ್ರಪ್ರದೇಶದಿಂದ ಕುಸ್ತಿಪಟುಗಳು ಆಗಮಿಸಲಿದ್ದಾರೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಬುತ್ತಿ ಬಸವಣ್ಣ ದೇವಸ್ಥಾನದ ಅಧ್ಯಕ್ಷ ರಮೇಶ ಮಾಶೆಟ್ಟಿ, ದೇವಸ್ಥಾನದ ಪದಾಧಿಕಾರಿಗಳಾದ ರಾಜಕುಮಾರ ಬಿರಾದಾರ, ವೀರಶೆಟ್ಟಿ ಮಾಶೆಟ್ಟಿ, ಅಶೋಕ ಚಿನ್ನಾಪುರೆ, ದತ್ತು ಮೇತ್ರೆ, ಚಂದ್ರಕಾಂತ ಹುಮನಾಬಾದೆ, ಕಂಟೆಪ್ಪಾ ಧನ್ನೂರೆ, ನಗರಸಭೆ ಸದಸ್ಯ ಸಂಗಪ್ಪ ಚಿದ್ರಿ ಹಾಗೂ ಇತರರು ಹಾಜರಿದ್ದರು.

ಶ್ರೀ ಬುತ್ತಿ ಬಸವಣ್ಣ ದೇವಸ್ಥಾನವು ಅತ್ಯಂತ ಪುರಾತನ ದೇವಸ್ಥಾನವಾಗಿದ್ದು, ಇದಕ್ಕೆ ತನ್ನದೇ ಆದ ಇತಿಹಾಸವಿದೆ. ಇಲ್ಲಿ ಮೇದಾರ ಕೇತಯ್ಯನವರು ಭೇಟಿ ನೀಡಿ ದಾಸೋಹ ಮಾಡಿದ್ದಾರೆ. ಶರಣ ಪರಂಪರೆಯ ದೇವಸ್ಥಾನ ಇದಾಗಿದ್ದರಿಂದ ಈ ದೇವಸ್ಥಾನವನ್ನು ಬಸವಕಲ್ಯಾಣ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ಸೇರಿಸಿ ದೇವಸ್ಥಾನದ ಸಮಗ್ರ ಅಭಿವೃದ್ಧಿಯಾಗಲಿ. ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವರಿಗೆ ಜಾತ್ರೆಯಲ್ಲಿ ಮನವಿ ಸಲ್ಲಿಸಲಾಗುವುದು – ಡಾ. ರಾಜಶೇಖರ ಶಿವಾಚಾರ್ಯರು.

## ಅಕ್ಕನ ವಚನಗಳಲ್ಲಿ ಬದುಕಿನ ಕೌಶಲ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 25 : ಅಕ್ಕ ಮಹಾದೇವಿ ವಚನಗಳಲ್ಲಿ ಬದುಕಿನ ಕೌಶಲ ಹಾಗೂ ಅಧ್ಯಾತ್ಮ ಸಾಧನೆಯ ಮಾರ್ಗ ಇದೆ ಎಂದು ಲಿಂಗಾಯತ ಮಹಾಮಠದ ಪ್ರಭುದೇವ ಸ್ವಾಮೀಜಿ ಹೇಳಿದರು.

ಲಿಂಗಾಯತ ಮಹಾ ಮಠದ ವತಿಯಿಂದ ನಗರದ ಬಸವಗಿರಿಯಲ್ಲಿ ಗುರುವಾರ ನಡೆದ 262ನೇ ಮಾಸಿಕ ಶರಣ ಸಂಗಮ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಅವರು, ಅಕ್ಕನ ಯೋಗಾಂಗ ತ್ರಿವಿಧಿ ಅಧ್ಯಾತ್ಮದ ಕೆನೆ ಎಂದು ಬಣ್ಣಿಸಿದರು. ಕಿರಿಯ ವಯಸ್ಸಿನಲ್ಲೇ ಲಿಂಗಾಂಗ ಸಾಮರಸ್ಯಕ್ಕೇರಿದ ಮಹಾ ಶರಣೆ ಅಕ್ಕ. ಅಂದಿನ ದಿನಮಾನದಲ್ಲಿ ಬಯಸಿದ್ದನ್ನು ಪಡೆಯುವ ರಾಜನನ್ನೇ ಜಾಣ್ಮೆಯಿಂದ ಎದುರಿಸಿ ಗುರಿ ತಲುಪಿದಿಟ್ಟೆ ಎಂದು ಹೇಳಿದರು. ಮಹಾದೇವಿ ಅಕ್ಕನ ಧೈರ್ಯ, ಸಾಹಸ ಹಾಗೂ ಸಮಯ ಪ್ರಜ್ಞೆ ಮಹಿಳಾ ಕುಲಕ್ಕೆ ಸ್ಫೂರ್ತಿ. ಇಂದಿನ ಮಹಿಳೆಯರು ಅಕ್ಕನ ಆತ್ಮವಿಶ್ವಾಸ ಮೈಗೂಡಿಸಿಕೊಳ್ಳಬೇಕು. ಅಕ್ಕ ವಚನ, ಸಂದೇಶಗಳನ್ನು ಅರಿಯಬೇಕು. ಮಕ್ಕಳಿಗೂ ತಿಳಿಸಬೇಕು ಎಂದು ತಿಳಿಸಿದರು.

ಜಗತ್ತಿನ ಸರ್ವ ಚಟುವಟಿಕೆಗಳ ಮೂಲ ಸೂರ್ಯ. ಹಾಗೆಯೇ ಪಂಚೇಂದ್ರಿಗಳ ಚಟುವಟಿಕೆಗೆ ಮನಸ್ಸೆ ಮೂಲ. ಚಂಚಲವಾದ ಮನಸ್ಸನ್ನನು ನಿಲ್ಲಿಸಿ, ಸಾಧನೆಯ ಶಿಖರವೇರುವ ಕಲೆಯನ್ನು ಅಕ್ಕನಿಂದ ತಿಳಿಯಬೇಕು ಎಂದು ಭಾಲ್ಕಿಯ ಮಹಾಲಿಂಗ ದೇವರು ನುಡಿದರು. ಜೀವನದಲ್ಲಿ ಶಾಂತಿ, ನೆಮ್ಮದಿ ಪಡೆಯಲು ಶರಣ ಸಂಗಮಗಳು ಸಹಕಾರಿ. ಇದರಿಂದ ಒತ್ತಡ ಮುಕ್ತರಾಗಿ ಬದುಕಬಹುದು. ಯುವಕರು ಈ ಕಡೆ ಗಮನ ಹರಿಸಬೇಕು ಎಂದು ಉದ್ಘಾಟನೆ ನೆರವೇರಿಸಿದ ದಂತ ವೈದ್ಯ ನಾಗೇಶ ಪಾಟೀಲ ಹೇಳಿದರು.

ಹಿರಿಯ ಸಾಹಿತಿ ಪಂಚಾಕ್ಷರಿ ಪುಣ್ಯಶೆಟ್ಟಿ ರಚಿತ ಅಕ್ಕ ಅನ್ನಪೂರ್ಣ ಚರಿತ್ರೆ ಪುಸ್ತಕವನ್ನು ನೀಲಮ್ಮನ ಬಳಗದ ಶೋಭಾವತಿ ಬಿರಾದಾರ ಬಿಡುಗಡೆ ಮಾಡಿದರು.

ರಾಜ್ಯ ಶಾಲಾ ಶಿಕ್ಷಣ ಇಲಾಖೆಯ ನೌಕರರ ಸಂಘದ ಭಾಲ್ಕಿ ತಾಲ್ಲೂಕು ಘಟಕದ ಅಧ್ಯಕ್ಷರಾಗಿ ಆಯ್ಕೆಯಾದ ಸೋಮನಾಥಪ್ಪ ರಾಜೇಶ್ವರೆ ಗೋರ್ಟಾ ಅವರನ್ನು ಶ್ರೀಮಠದಿಂದ ಶಾಲು ಹೊದಿಸಿ, ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು. ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿಯ ಅಧ್ಯಕ್ಷ ಶಿವಕುಮಾರ ಪಾಖಾಲ್ ಅಧ್ಯಕ್ಷತೆ ವಹಿಸಿದ್ದರು. ಸಾಹಿತಿ ರಮೇಶ ಮಠಪತಿ ಉಪಸ್ಥಿತರಿದ್ದರು. ಚನ್ನಬಸವಣ್ಣ ಮತ್ತು ನೀಲಮ್ಮನ ಬಳಗದವರು ಪ್ರಾರ್ಥನೆಗೈದರು. ರೇವಣಪ್ಪ ಮೂಲಗೆ ಹಾಗೂ ಡಾ. ಬಸವದೀಪ್ತಿ ಸುಶ್ರಾವ್ಯವಾಗಿ ವಚನ ಗಾಯನ ಮಾಡಿದರು. ಪ್ರಭಾವತಿ ಗೋರನಾಳೆ ಹಾಗೂ ಬಸವ ಜ್ಯೋತಿ ನಿಟ್ಟೂರೆ ಗುರುಪೂಜೆಗೈದರು. ಮಾಣಿಕಪ್ಪ ಗೋರನಾಳೆ ಸ್ವಾಗತಿಸಿದರು

## ವಚನ ಮಂಟಪ, ಪಟ್ಟದ್ದೇವರ ಸ್ಮರಣೆ ನಾಳೆ



ಬೀದರ. ಏ. 25 : ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ನಗರದ ಗಾಂಧಿಗಂಜನ ಬಸವೇಶ್ವರ ದೇವಸ್ಥಾನದಲ್ಲಿ ಏಪ್ರಿಲ್ 27 ರಂದು ಸಂಜೆ 6ಕ್ಕೆ ವಚನ ಮಂಟಪ ಮಾಸಿಕ ಚಿಂತನ–ಮಂಥನ ಹಾಗೂ ಡಾ. ಚನ್ನಬಸವ ಪಟ್ಟದ್ದೇವರ ಸ್ಮರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷ ಜೈರಾಜ ಖಂಡ್ರೆ ಉದ್ಘಾಟಿಸುವರು. ಬಸವಕಲ್ಯಾಣದ ಅನುಭವ ಮಂಟಪದ ಅಧ್ಯಕ್ಷ ಡಾ. ಬಸವಲಿಂಗ ಪಟ್ಟದ್ದೇವರು ಸಾನಿಧ್ಯ, ಸಂಚಾಲಕ ಶಿವಾನಂದ ಸ್ವಾಮೀಜಿ ಸಮ್ಮುಖ ವಹಿಸುವರು. ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಅಧ್ಯಕ್ಷತೆ ವಹಿಸುವರು.

ಡಾ. ಚನ್ನಬಸವ ಪಟ್ಟದ್ದೇವರ ಜೀವನ ಕುರಿತು ಸಾಹಿತಿ ಡಾ. ಸೋಮನಾಥ ಯಾಳವಾರ ಉಪನ್ಯಾಸ ನೀಡುವರು. ಚಿಂತಕ ಶಿವಲಿಂಗ ಹೇಡೆ ಅನುಭಾವ ಮಂಡಿಸುವರು.

ಬಸವ ಜಯಂತಿ ಉತ್ಸವ ಸಮಿತಿಯ ಮಹಿಳಾ ಘಟಕದ ಅಧ್ಯಕ್ಷೆ ಡಾ. ವಿಜಯಶ್ರೀ ಬಶೆಟ್ಟಿ, ಸಮಿತಿಯ ಪ್ರಧಾನ ಕಾರ್ಯದರ್ಶಿ ಸಂಜುಕುಮಾರ ಪಾಟೀಲ, ಕೋಶಾಧ್ಯಕ್ಷ ಡಾ. ರಜನೀಶ್ ವಾಲಿ, ದತ್ತಗಿರಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಹತ್ತಿ, ದಿ. ಗ್ರೇನ್ ಆಯಿಂಡ್ ಸೀಡ್ಸ್ ಮರ್ಚಂಟ್ಸ್ ಅಸೋಸಿಯೇಷನ್ ಅಧ್ಯಕ್ಷ ಭಗವಂತ ಔದತ್ತಪುರ, ಬಸವ ಜಯಂತಿ ಉತ್ಸವ ಸಮಿತಿಯ ಮಹಿಳಾ ಘಟಕದ ಕಾರ್ಯದರ್ಶಿ ವಿಜಯಲಕ್ಷ್ಮಿ ಕೌಟಗೆ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ವಚನಶ್ರೀ ಚನ್ನಬಸಪ್ಪ ನೌಬಾದೆ ವಚನ ಗಾಯನ ಮಾಡುವರು. ರೇಣುಕಾ ಟ್ರೇಡಿಂಗ್ ಕಂಪನಿಯ ಮುಖ್ಯಸ್ಥ ಅಶೋಕ ಭಕ್ತಿ ದಾಸೋಹಗೈಯುವರು.

ಬಸವಾನುಯಾಯಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಜಾಗತಿಕ ಲಿಂಗಾಯತ ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಮನವಿ ಮಾಡಿದ್ದಾರೆ.

## ಬಸವ ಪರ ಸಂಘಟನೆಗಳಿಂದ ಪ್ರತಿಭಟನೆ ಇಂದು



ಮಲ್ಲಮ್ಮ ನುಡಿ ವಾರ್ತೆ

ಬೀದರ. ಏ. 25 : ಬೆಂಗಳೂರಿನ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯು ಬಸವ ಜಯಂತಿ ದಿನದಂದೇ ಪಂಚಾಚಾರ್ಯರ ಯುಗಮಾನೋತ್ಸವ ಹಮ್ಮಿಕೊಂಡಿರುವುದನ್ನು ವಿರೋಧಿಸಿ ಜಿಲ್ಲೆಯ ಮಠಾಧೀಶರು ಹಾಗೂ ಬಸವ ಪರ ಸಂಘಟನೆಗಳಿಂದ ಏಪ್ರಿಲ್ 26 ರಂದು ನಗರದಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ತಿಳಿಸಿದ್ದಾರೆ.

ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ನಗರದ ಗಾಂಧಿಗಂಜನ ಬಸವೇಶ್ವರ ದೇವಸ್ಥಾನದಲ್ಲಿ ಗುರುವಾರ ನಡೆದ ಸಭೆಯಲ್ಲಿ ಈ ಕುರಿತು ಸರ್ವಾನುಮತದ ನಿರ್ಣಯ ಕೈಗೊಳ್ಳಲಾಗಿದೆ ಎಂದು ಹೇಳಿದ್ದಾರೆ. ಬಸವ ಜಯಂತಿಯ ದಿನ ಪಂಚಾಚಾರ್ಯರ ಯುಗಮಾನೋತ್ಸವ ಹಮ್ಮಿಕೊಳ್ಳುವ ಮೂಲಕ ಬಸವ ಜಯಂತಿಯ ವಿಶೇಷತೆ, ಮಹತ್ವ ಹಾಗೂ ಐತಿಹಾಸಿಕತೆಯನ್ನು ಕುಬ್ಜಗೊಳಿಸುವ ಹುನ್ನಾರಕ್ಕೆ ಈಗಾಗಲೇ ನಾಡಿನಾದ್ಯಂತ ಅನೇಕ ಮಠಾಧೀಶರು ಹಾಗೂ ಸಂಘಟನೆಗಳು ವಿರೋಧ ವ್ಯಕ್ತಪಡಿಸಿವೆ. ಅದಾಗಿಯೂ ಬಸವ ಜಯಂತಿ ಜತೆ ಪಂಚಾಚಾರ್ಯರ ಯುಗಮಾನೋತ್ಸವ ಏರ್ಪಡಿಸಿದ ಹಿನ್ನೆಲೆಯಲ್ಲಿ ಪ್ರತಿಭಟನೆಗೆ ತೀರ್ಮಾನಿಸಲಾಯಿತು ಎಂದು ತಿಳಿಸಿದ್ದಾರೆ. ಬೆಳಿಗ್ಗೆ 9ಕ್ಕೆ ಬಸವೇಶ್ವರ ವೃತ್ತದ ಬಳಿ ಜಮಾಯಿಸಿ ಅಲ್ಲಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ, ಮುಖ್ಯಮಂತ್ರಿಗೆ ಬರೆದ ಮನವಿ ಪತ್ರವನ್ನು ಜಿಲ್ಲಾಧಿಕಾರಿಗೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ. ಪ್ರತಿಭಟನೆಯಲ್ಲಿ ಜಿಲ್ಲೆಯ ಮಠಾಧೀಶರು, ಬಸವ ಪರ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಬಸವಾನುಯಾಯಿಗಳು ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ. ಸಭೆಯಲ್ಲಿ ಭಾರತೀಯ ಬಸವ ಬಳಗದ ರಾಜ್ಯ ಅಧ್ಯಕ್ಷ ಬಾಬುವಾಲಿ, ಜಾಗತಿಕ ಲಿಂಗಾಯತ ಮಹಾಸಭಾದ ಕೇಂದ್ರ ಸಮಿತಿಯ ಉಪಾಧ್ಯಕ್ಷ ಬಸವರಾಜ ಬುಳ್ಳಾ, ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷ ಜೈರಾಜ ಖಂಡ್ರೆ, ಮಹಾಸಭಾ ಜಿಲ್ಲಾ ಘಟಕದ ಖಜಾಂಚಿ ವೀರಭದ್ರಪ್ಪ ಬುಯ್ಯಾ, ಗೌರವ ಸಲಹೆಗಾರ ಅಣ್ಣಾರಾವ್ ಮೊಗಶೆಟ್ಟಿ, ಕಾರ್ಯಕಾರಿಣಿ ಸದಸ್ಯ ರಾಜೇಂದ್ರಕುಮಾರ ಗಂದಗೆ, ರಾಷ್ಟ್ರೀಯ ಬಸವ ದಳದ ಬೀದರ್ ತಾಲ್ಲೂಕು ಘಟಕದ ಅಧ್ಯಕ್ಷ ಸಂಜುಕುಮಾರ ಪಾಟೀಲ, ಜಿಲ್ಲಾ ಯುವ ಘಟಕದ ಅಧ್ಯಕ್ಷ ಗಣೇಶ ಬಿರಾದಾರ, ಮುಖಂಡರಾದ ವಿಶ್ವನಾಥ ಕಾಜಿ, ವಿಜಯಕುಮಾರ ಪಾಟೀಲ ಯರನಳ್ಳಿ, ಶಿವಕುಮಾರ ಕಟ್ಟೆ, ಸಿದ್ದು ಶೆಟಕಾರ್, ಉಮೇಶ ಗಾಯತೊಂಡೆ, ವೀರಶೆಟ್ಟಿ ಮರಕಲ್, ಯೋಗೇಶ ಸಿರಿಗಿರಿ, ವೀರಭದ್ರಪ್ಪ ಉಪ್ಪಿನ್, ರಾಜು ಕಮಠಾಣೆ ಮತ್ತಿತರರು ಇದ್ದರು.

# ಜೋಳ ಖರೀದಿ:ಹೆಚ್ಚುವರಿ ನೋಂದಣಿ ಮತ್ತು ಖರೀದಿ ಕೇಂದ್ರ ಆರಂಭ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.25:ಜಿಲ್ಲೆಯಲ್ಲಿ 2024-25 ನೇ ಸಾಲಿನ ಹಿಂಗಾರು ಋತುವಿನಲ್ಲಿ ಬೆಳೆದ ಜೋಳವನ್ನು ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತ-ರಿಂದ ನೇರವಾಗಿ ಖರೀದಿಸಲು ಈಗಾಗಲೇ ತೀರ್ಮಾನಿಸಲಾಗಿದ್ದು, ಪ್ರಸ್ತುತ ಇರುವ 10 ಖರೀದಿ ಕೇಂದ್ರಗಳ ಜೊತೆಗೆ 02 ಹೆಚ್ಚುವರಿ ನೋಂದಣಿ ಮತ್ತು ಖರೀದಿ ಕೇಂದ್ರ ತೆರೆಯಲಾಗಿದೆ.

ಹೆಚ್ಚುವರಿ ರೈತ ನೋಂದಣಿ ಮತ್ತು ಖರೀದಿ ಕೇಂದ್ರ:*ಸಿರುಗುಪ್ಪ ತಾಲ್ಲೂಕಿನ ಮುದ್ದಟನೂರು ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ಮತ್ತು ಅರಳಿಗನೂರು ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ.ಬೆಂಬಲ ಬೆಲೆ ಯೋಜನೆ ಬಗ್ಗೆ ರೈತರಿಗೆ ಯಾವುದೇ ಸಮಸ್ಯೆಗಳಿದ್ದರೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ಹಾಗೂ ತಾಲ್ಲೂಕಿನ ತಹಸಿಲ್ದಾರ್, ಕೃಷಿ ಅಧಿಕಾರಿ, ಎ.ಪಿ.ಎಂ.ಸಿ ಕಾರ್ಯದರ್ಶಿ, ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾ ಮಂಡಳಿ ನಿಯಮಿತದ ಸೈಯದ್ ವಸೀಮ್ ಪಾಷ (ಮೊ.9449864453) ಗೆ ಸಂಪರ್ಕಿಸಬಹುದು ಎಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಸಕೀನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಲೇರಿಯಾ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿ – ಡಾ. ಟಿ.ಲಿಂಗರಾಜು




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಮಲೇರಿಯಾ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಟಿ.ಲಿಂಗರಾಜು ಹೇಳಿದರು

ಅವರು ಶುಕ್ರವಾರ ಕೊಪ್ಪಳ ನಗರದ ಹಳೆ ಜನರ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಛೇರಿ ಸಹಯೋಗದಲ್ಲಿ ವಿಶ್ವ ಮಲೇರಿಯಾ ದಿನಾಚರಣೆ-2025ರ ಅಂಗವಾಗಿ ಕೊಪ್ಪಳ ಜಿಲ್ಲೆಯಲ್ಲಿ ಮಲೇರಿಯಾ ರೋಗದ ಹರಡುವಿಕೆ ನಿಯಂತ್ರಣ ಹಾಗೂ ತಡೆಗಟ್ಟಲು ಕೈಗೊಳ್ಳಬೇಕಾದ ಮುಂಜಾಗ್ರತ ಕ್ರಮಗಳ ಬಗ್ಗೆ ಅರಿವು ಮೂಡಿಸಲು ಹಮ್ಮಿಕೊಂಡಿದ್ದ ಜನ ಜಾಗೃತಿ ಜಾಥಕ್ಕೆ ಚಾಲನೆ ನೀಡಿ ಮಾತನಾಡಿದರು.

ಮಲೇರಿಯಾ ನಿಯಂತ್ರಣ-ಕ್ಕೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಎಲ್ಲಾ ರೀತಿ ಸೂಕ್ತ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಲಾಗಿದೆ. ಪ್ರತಿ ವರ್ಷ 'ಏಪ್ರಿಲ್ 25'ರಂದು ಪ್ರಪಂಚದಾದ್ಯಂತ 'ವಿಶ್ವ ಮಲೇರಿಯ ದಿನ'ವನ್ನಾಗಿ ಆಚರಿಸಲಾಗುತ್ತಿದೆ. ಈಗ ಮಳೆಗಾಲ ಪ್ರಾರಂಭವಾಗುತ್ತಿದ್ದು, ಅಲ್ಲಲ್ಲಿ ಮಳೆ ನೀರು ನಿಂತು ಸೊಳ್ಳೆ ಉತ್ಪತ್ತಿ ತಾಣಗಳಾಗಿ ಮಾರ್ಪಟ್ಟು ಸೊಳ್ಳೆಗಳ ಸಂತತಿ ಹೆಚ್ಚಾಗಿ ಸೊಳ್ಳೆಗಳಿಂದ ಹರಡುವ ಮಲೇರಿಯಾದಂತಹ ರೋಗಗಳ ಹೆಚ್ಚಳವಾಗುವ ಎಲ್ಲಾ ಸಾದ್ಯತೆ ಇರುತ್ತದೆ. ಸಾರ್ವಜನಿಕರು ತಮ್ಮ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ಮಲೇರಿಯಾ ರೋಗಕ್ಕೆ ನಿರ್ದಿಷ್ಟ ಚಿಕಿತ್ಸೆ ಇದ್ದು, ಜನರೂ ಭಯಪಡುವ ಅವಶ್ಯಕತೆ ಇಲ್ಲ. ಯಾವುದೇ ಜ್ವರ ಇರಲಿ ಶೀಘ್ರವೇ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ರಕ್ತ ಪರೀ-ಕ್ಷೆ ಮಾಡಿಸಿ ಉಚಿತ ಚಿಕಿತ್ಸೆ ಪಡೆಯಲು ಜನಸಮುದಾಯಕ್ಕೆ ಕರೆ ನೀಡಿದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿ ಡಾ. ಕೆ.ವೆಂಕಟೇಶ್ ಅವರು ಮಾತನಾಡಿ, ಇಡಿ ದೇಶದಾದ್ಯಂತ 2030 ರೊಳಗಾಗಿ ಮಲೇರಿಯಾ ರೋಗವನ್ನು ಸಂಪೂರ್ಣ ನಿವಾರಣೆಗೊಳಿಸಲು ಗುರಿ ನಿಗಧಿಪಡಿಸಿ ರಾಷ್ಟ್ರೀಯ ಮಲೇರಿಯಾ ನಿವಾರಣಾ ಮಾರ್ಗದರ್ಶಿ (National FrameWorkForMalaria Elimination NFME) ಯನ್ನು ಅನಾವರಣಗೊಳಿಸಲಾಗಿದೆ. ಅದರಂತೆ ಕರ್ನಾಟಕ ಸರಕಾರವು ಕೂಡ ರಾಜ್ಯದಲ್ಲಿ ಮಲೇರಿಯಾ ನಿವಾರಣಾ ಮಾರ್ಗದರ್ಶಿಯನ್ನು ಅನಾವರಣಗೊಳಿಸಿದ್ದು, ಅದರನ್ವಯ ರಾಜ್ಯದಲ್ಲಿ 2027ನೇ ಇಸ್ವಿವೇಳೆಗೆ ರಾಜ್ಯವನ್ನು ಮಲೇರಿಯಾ ಮುಕ್ತಗೊಳಿಸುವ ಗುರಿಯನ್ನು ನಿಗಧಿಪಡಿಸಲಾಗಿದೆ ಎಂದರು.

2025ನೇ ಸಾಲಿನ 'ವಿಶ್ವ ಮಲೇರಿಯ ದಿನಾಚರಣೆ'ಯ ಘೋಷಣೆಯು "ಮಲೇರಿಯಾ ನಮ್ಮೊಂದಿಗೆ ಕೊನೆಗೊಳ್ಳುತ್ತದೆ. ಮರು ಹೂಡಿಕೆ, ಮರು ಕಲ್ಪನೆ, ಮರು ಉತ್ತೇಜನ ನೀಡೋಣ" ಎಂಬುದಾಗಿರುತ್ತದೆ. ಅದರಂತೆ ಕೊಪ್ಪಳ ಜಲ್ಲೆಯನ್ನು 2027ರ ವೇಳೆಗೆ ಸಂಪೂರ್ಣ ಮಲೇರಿಯಾ ಮುಕ್ತ ಜಿಲ್ಲೆಯನ್ನಾಗಿಸಲು ಸರ್ವರ ಸಹಕಾರ ಅಗತ್ಯವಾಗಿದೆ. ಮಲೇರಿಯಾ ರೋಗವು ಒಂದು ಸಾಂಕ್ರಾಮಿಕ ರೋಗವಾಗಿದ್ದು ಇದು ಸೋಂಕಿತ ಅನಾಫಿಲಿಸ್ ಜಾತಿಯ ಸೊಳ್ಳೆಗಳ ಕಚ್ಚುವಿಕೆಯಿಂದ ಒಬ್ಬರಿಂದ ಇನ್ನೊಬ್ಬರಿಗೆ ಹರಡುತ್ತದೆ ಹಾಗೂ ಈ ಸೊಳ್ಳೆಗಳು ಬಹುತೇಕ ಸಂಜೆ ಹೊತ್ತಿನಲ್ಲಿಯೇ ಕಚ್ಚುತ್ತವೆ ಹಾಗಾಗಿ ಜನಸಮುದಾಯವು ಸ್ವಯಂ ರಕ್ಷಣ ವಿಧಾನಗಳನ್ನು ಬಳಸಿ ಸೊಳ್ಳೆಗಳ ಕಚ್ಚುವಿಕೆಯಿಂದ ದೂರವಿರಬೇಕು ಎಂದು ಹೇಳಿದರು.

ಅನಾಫಿಲಿಸ್ ಸೊಳ್ಳೆಗಳು ಸ್ವಚ್ಛವಾದ ನೀರಿನಲ್ಲಿ, ಕೆರೆ, ಬಾವಿ, ಹೊಂಡ, ಕಾಲುವೆ ಮುಂತಾದ ನಿಂತ ನೀರಿನ ತಾಣಗಳಲ್ಲಿ ಮೊಟ್ಟೆಗಳನ್ನು ಇಟ್ಟು ಸಂತಾನಭಿವೃದ್ಧಿ ಮಾಡುತ್ತವೆ. ಆದ್ದರಿಂದ ಮನೆಯ ಒಳಗೆ ಮತ್ತು ಹೊರಗೆ ನೀರು ನಿಲ್ಲದಂತೆ ಎಚ್ಚರವಹಿಸಬೇಕು ಹಾಗೂ ನೀರು ಶೇಖರಣೆ ಸಲಕರಣೆಗಳನ್ನು ಸದಕಾಲ ಮುಚ್ಚಿಡಬೇಕು. ಕೊಪ್ಪಳ ಜಿಲ್ಲೆಯಲ್ಲಿ 2005 ರಲ್ಲಿ 6634 ಮಲೇರಿಯಾ ಪ್ರಕರಣಗಳು ವರದಿಯಾಗಿದ್ದು, 2017 ರಲ್ಲಿ ಕೇವಲ 159 ಮಲೇರಿಯಾ ಪ್ರಕರಣಗಳು 2019 ರಲ್ಲಿ 15 ಪ್ರಕರಣಗಳು ವರದಿಯಾಗಿವೆ. ಆದರೇ 2020 ರಿಂದ 2024-25 ರವರೆಗೆ ಯಾವುದೇ ಸ್ಥಳೀಯ ಮಲೇರಿಯಾ ಪ್ರಕರಣಗಳು ವರದಿಯಾಗಿರುವುದಿಲ್ಲ. ಕಳೆದ ನಾಲ್ಕು ವರ್ಷಗಳಿಂದ ಶೂನ್ಯ ಮಲೇರಿಯಾ ಸ್ಥಿತಿಯನ್ನು ಕಾಪಾಡಿಕೊಂಡು ಉತ್ತರಕರ್ನಾಟಕ ಜಿಲ್ಲೆಗಳಲ್ಲಿ ಶೂನ್ಯ ಮಲೇರಿಯಾ ಸ್ಥಿತಿಯನ್ನು ಕಾಪಾಡಿಕೊಂಡಿರುವ ಉತ್ತರ ಕರ್ನಾಟಕದ ಏಕೈಕ ಜಿಲ್ಲೆಯಾಗಿದ್ದು, ಕೊಪ್ಪಳ ಜಿಲ್ಲಾಢಳಿತದ ಸಹಕಾರ ಹಾಗೂ ಆರೋಗ್ಯ ಇಲಾಖೆಯ ಪರಿಶ್ರಮ ಕಾರಣವಾಗಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ. ಪ್ರಕಾಶ್ ವಿ., ಜಿಲ್ಲಾ ಸರ್ವೇಕ್ಷಣ ಅಧಿಕಾರಿ ಡಾ. ನಂದಕುಮಾರ್, ಜಿಲ್ಲಾ ಕುಷ್ಠರೋಗ ನಿವಾರಣಾ ಅಧಿಕಾರಿ ಡಾ. ಪ್ರಕಾಶ್, ಜಿಲ್ಲಾ ಕುಷ್ಠರೋಗ ನಿವಾರಣಾ ಅಧಿಕಾರಿ ಡಾ. ಶಶಿಧರ್, ಕೊಪ್ಪಳ ತಾಲೂಕ ಆರೋಗ್ಯಾಧಿಕಾರಿ ಡಾ. ರಾಮಾಂಜನೇಯ ಸೇರಿದಂತೆ ಜಿಲ್ಲಾ ಆರೋಗ್ಯ ಇಲಾಖೆಯ ಎಲ್ಲಾ ಸಿಬ್ಬಂದಿಯವರು, ಆಶಾ ಕಾರ್ಯಕರ್ತೆಯರು, ನಗರ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳು & ಸಿಬ್ಬಂದಿಗಳು ಉಪಸ್ಥಿತರಿಸಿದ್ದರು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶಿವಾನಂದ ಅವರು ಎಲ್ಲರಿಗೂ ಸ್ವಾಗತಿಸಿ, ಕಾರ್ಯಕ್ರಮ ನಿರೂಪಿಸಿದರು. ಇದೆ ವೇಳೆ ಎಲ್ಲರೂ ಪ್ರತಿಜ್ಞಾವಿಧಿಯನ್ನು ಸ್ವೀಕರಿಸಿದರು.

ಕೊಪ್ಪಳ ನಗರದಾದ್ಯಂತ ವಿಜೃಂಭಣೆಯಿಂದ ಸಂಚರಿಸಿದ ಜನ ಜಾಗೃತಿ ಜಾಥದಲ್ಲಿ ತೆ-ರೆದ ವಾಹನದಲ್ಲಿ ಮಲೇರಿಯಾ ವಿರೋಧಿ ಜಾಗೃತಿ ಗೀತೆಗಳನ್ನು ಹಾಡುವುದರ ಮೂಲಕ ಹಾಗೂ ಜನಜಾಗೃತಿ ಕರಪತ್ರಗಳನ್ನು ಹಂಚುವುದು, ಭ್ಯಾನರ್ ಮತ್ತು ಪೋಸ್ಟರ್‌ಗಳನ್ನು ಪ್ರದರ್ಶಿಸುವುದರ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

# ಮೇ 14 ರಿಂದ ಮೂರು ದಿನಗಳ ರಾಷ್ಟ್ರೀಯ ಸಮ್ಮೇಳನ ಆಯೋಜನೆ: ಹೆಸರು ನೋಂದಣಿಗೆ ಸೂಚನೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.25- ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯು "ಆಂಟಿಮೈಕ್ರೋಬಿಯಲ್ ರೆಸಿಸ್ಟನ್ಸ್: ಸ್ಟ್ರಾಟೆಜಿಎಸ್ ಫಾರ್ ಪ್ರಿವೆನ್‌ಶನ್ ಅಂಡ್ ಆಲ್ಟರ್ನೇಟಿವ್ಸ್" (Anti-microbial Resistance: Strategies for Prevention and Alternatives" ವಿಷಯದ ಕುರಿತು ಇದೇ ಮೇ 14 ರಿಂದ 16 ರವರೆಗೆ ಮೂರು ದಿನಗಳ ಕಾಲ ಅಕಾಡೆಮಿಯ ಕಚೇರಿಯಲ್ಲಿ ರಾಷ್ಟ್ರೀಯ ಸಮ್ಮೇಳನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಕಾಡೆಮಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ. ಈ ಸಮ್ಮೇಳನದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ತಾಂತ್ರಿಕ ಉಪನ್ಯಾಸಗಳನ್ನು ನೀಡಲಿದ್ದಾರೆ.

ವಿಶ್ವ ಮಲೇರಿಯಾ ದಿನ ಜಾಗೃತಿ ಜಾಥಾ ಕಾರ್ಯಕ್ರಮ

# ಯಾವುದೇ ಜ್ವರವಿರಲಿ ರಕ್ತ ಪರಿಕ್ಷೆ ಮಾಡಿಸಿಕೊಳ್ಳಿ, ಸಂಪೂರ್ಣ ಚಿಕಿತ್ಸೆ ಪಡೆಯಿರಿ ಮಲೇರಿಯಾದಿಂದ ಮುಕ್ತರಾಗಿ




ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 25- ಮಲೇರಿಯಾ ಎಂಬ ಪರಾವಲಂಬಿ ಸೋಂಕು ಹೆಣ್ಣು (ಅನಾಫಿಲಿಸ್) ಸೊಳ್ಳೆಯಿಂದ ಹರಡುತ್ತದೆ, ನಿಂತ ನೀರು ಸೊಳ್ಳೆಗಳ ತವರು, ಲಾರ್ವಹಾರಿ ಮಿನುಗಳಿಂದ ಸೊಳ್ಳೆ ಉತ್ಪತ್ತಿ ತಡೆಗಟ್ಟಿ, ಮಲೇರಿಯಾ ನಿರ್ಮೂಲನೆ ಪ್ರತಿಯೊಬ್ಬರ ಜವಾಬ್ದಾರಿಯಾಗಿರತ್ತದೆ, ಮಲೇರಿಯಾ ರೋಗ ಹರಡದಂತೆ ಮುಂಜಾಗೃತ ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಗಳಾದ ಡಾ.ಮಹೇಶ ಬಿರಾದಾರ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿಗಳ ಕಾರ್ಯಾಲಯದ ಸಹಯೋಗದಲ್ಲಿ ವಿಶ್ವ ಮಲೇರಿಯಾ ದಿನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಲೇರಿಯಾ ಎಂಬ ಪರಾವಲಂಬಿ ಸೋಂಕು ಹೆಣ್ಣು (ಅನಾಫಿಲಿಸ್) ಸೊಳ್ಳೆಯಿಂದ ಹರಡುತ್ತದೆ ಮತ್ತು ಇದು ತೀವ್ರವಾದ, ಕೆಲವೊಮ್ಮೆ ಮಾರಕ ಕಾಯಿಲೆಗೆ ಕಾರಣವಾಗಬಹುದು. ಪ್ಲಾಸ್ಮೋಡಿಯಂ ಪರಾವಲಂಬಿಗಳು ಸಂಕೀರ್ಣ ಜೀವನ ಚಕ್ರವನ್ನು ಪಡೆದುಕೊಳ್ಳುತ್ತವೆ, ಆವರ್ತಕ ಜ್ವರಗಳಿಗೆ ಕಾರಣವಾಗುತ್ತದೆ. ಹೆಚ್ಚಿನ ರೋಗಿಗಳು ಚಿಕಿತ್ಸೆಯ ನಂತರ ಮಲೇರಿಯಾ ಲಕ್ಷಣಗಳಿಂದ ಬೇಗನೆ ಚೇತರಿಸಿಕೊಳ್ಳುತ್ತಾರೆ, ಆದರೆ ಚಿಕಿತ್ಸೆ ವಿಳಂಬವಾದರೆ ತೀವ್ರ ಮಲೇರಿಯಾ ರಕ್ತಹೀನತೆ, ಸೆರೆಬ್ರಲ್ ಮಲೇರಿಯಾ, ಕೋಮಾ ಅಥವಾ ಸಾವು ಮುಂತಾದ ತೀವ್ರ ತೊಡಕುಗಳು ಸಂಭವಿಸಬಹುದು ಎಂದು ತಿಳಿಸಿದರು.

ಯಾವುದೇ ಜ್ವರವಿರಲಿ ರಕ್ತ ಪರಿಕ್ಷೆ ಮಾಡಿಸಿಕೊಳ್ಳಿ, ಸಂಪೂರ್ಣ ಚಿಕಿತ್ಸೆ ಪಡೆಯಿರಿ ಮಲೇರಿಯಾದಿಂದ ಮುಕ್ತರಾಗಿ, ಮನೆಯ ಸುತ್ತ ಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಿ, ಸೊಳ್ಳೆ ಪರದೆ ಬಳಸಿ ಮಲೇರಿಯಾ ಓಡಿಸಿ, ಸ್ವಯಂ ರಕ್ಷಣಾ ವಿಧಾನ ಅನುಸರಿಸಿ ಮಲೇರಿಯಾದಿಂದ ಮುಕ್ತಿಹೊಂದಿ, ನೀರು ನಿಲ್ಲದಂತೆ ಸಹಕರಿಸಿ ಸೊಳ್ಳೆ ಉತ್ಪತ್ತಿ ತಡೆಗಟ್ಟಿ, ಕಡಿತ ಚಿಕ್ಕದು ಭೀತಿ ದೊಡ್ಡದು, ನಿಂತ ನೀರು ಸೊಳ್ಳೆಗಳ ತವರು, ಲಾರ್ವಹಾರಿ ಮಿನುಗಳಿಂದ ಸೊಳ್ಳೆ ಉತ್ಪತ್ತಿ ತಡೆಗಟ್ಟಿ, ಮಲೇರಿಯಾ ನಿರ್ಮೂಲನೆ ಪ್ರತಿಯೊಬ್ಬರ ಜವಾಬ್ದಾರಿಯಾಗಿರತ್ತದೆ. ಸಾರ್ವಜನಿಕರು ಮಲೇರಿಯಾ ರೋಗ ಹರಡದಂತೆ ಮುಂಜಾಗೃತ ವಹಿಸಬೇಕು ಎಂದು ಹೇಳಿದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳಾದ ಡಾ.ಮುಬಾಸ್ಸಿರ ಅಹ್ಮದ ಸಾಜೀದ ರವರು ಮಾತನಾಡಿ ವಿಶ್ವ ಮಲೇರಿಯಾ ದಿನವು ವಾರ್ಷಿಕವಾಗಿ ಏಪ್ರಿಲ್ 25 ರಂದು ಆಚರಿಸಲಾಗುವ ಜಾಗತಿಕ ಆರೋಗ್ಯ ಜಾಗೃತಿ ಕಾರ್ಯಕ್ರಮವಾಗಿದ್ದು, ಮಲೇರಿಯಾವನ್ನು ಎದುರಿಸಲು ಮತ್ತು ನಿರ್ಮೂಲನೆ ಮಾಡಲು ಅಗತ್ಯವಾದ ಕ್ರಮವನ್ನು ಉತ್ತೇಜಿಸಲು ವಿವಿಧ ಸ್ಥಳೀಯ ಮತ್ತು ಸರ್ಕಾರಿ ಆರೋಗ್ಯ ಅಧಿಕಾರಿಗಳು ಮತ್ತು ನೀತಿ ನಿರೂಪಕರಿಗೆ ಜಾಗತಿಕ ಕರೆ-ಯಾಗಿದೆ. ಜನರ ಅಮೂಲ್ಯ ಜೀವನ ಕಾಪಾಡುವುದು ನಮ್ಮ

# ಕಾಶ್ಮೀರದಲ್ಲಿ ಉಗ್ರರ ಹಟ್ಟಹಾಸ: ಮೃತರಿಗೆ ಶ್ರದ್ಧಾಂಜಲಿ ಸಲ್ಲಿಕೆ.



ಮಲ್ಲಮ್ಮ ನುಡಿ ವಾರ್ತೆ

ಹುಣಸಗಿ: ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಭಯೋತ್ಪಾದಕರ ದಾಳಿಯನ್ನು ಭಾರತದ ಪ್ರತಿಯೊಬ್ಬ ಪ್ರಜೆಗಳು ಖಂಡಿಸುತ್ತೇವೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಚಂದ್ರಶೇಖರ ದಂಡಿನ್ ಹೇಳಿದರು.

ಪಟ್ಟಣದ ಕಿತ್ತೂರ ರಾಣಿ ಚೆನ್ನಮ್ಮ ವೃತ್ತದಲ್ಲಿ ನೂರಾರು ಜನರು ಉಗ್ರರ ಗುಂಡಿಗೆ ಬಲಿಯಾದವರಿಗೆ ಶ್ರದ್ಧಾಂಜಲಿ ಸಲ್ಲಿಕೆ ಸಭೆಯಲ್ಲಿ ಮಾತನಾಡಿದ ಅವರು, ಜಮ್ಮು ಕಾಶ್ಮೀರದ ಪಹಲ್ಗಾಮನಲ್ಲಿ ಪ್ರವಾಸಿಗರ ಮೇಲೆ ನಡೆದಿರುವ ಉಗ್ರರ ಹೇಡಿತನದ ಗುಂಡಿನ ದಾಳಿ ಕೃತ್ಯವನ್ನು ಈ ಘಟನೆಯನ್ನು ಪಕ್ಷಾತೀತವಾಗಿ ಖಂಡಿಸುತ್ತೇವೆ. ಜಾತಿ, ಊರು ಯಾವುದನ್ನು ಕೇಳದೆ ಧರ್ಮ ಹಿಂದು ಎಂದಿದ್ದಕೆ ಗುಂಡು ಹಾರಿಸಿ ಕೊಲ್ಲುವ ಮನಸ್ಥಿತಿಯ ಉಗ್ರರನ್ನು ಸದೆಬಡಯಬೇಕಾಗಿದೆ.

ಜಮ್ಮು ಮತ್ತು ಕಾಶ್ಮೀರ ಭಾರತದ ಅವಿಭಾಜ್ಯ ಅಂಗವೆಂಬುದು ಸಾರ್ವಕಾಲಿಕ ಸತ್ಯ, ಅಲ್ಲಿನ ಪ್ರತ್ಯೇಕವಾದದ ಮನಸ್ಥಿತಿಯನ್ನು ಬದಲಾಯಿಸಲು ಹಾಗೂ ಜನ-ಜೀವನ ಸ್ಥಿತಿಗತಿಗಳನ್ನು ಸ್ಥಿರಗೊಳಿಸಿ ಶಾಂತಿಯುತ ಕಾಶ್ಮೀರವೆಂಬುದನ್ನು ಖಚಿತಪಡಿಸಿಕೊಳ್ಳಲು ಕೇಂದ್ರ ಸರ್ಕಾರ ಈಗಾಗಲೇ ಸಾಕಷ್ಟು ಕ್ರಮಗಳನ್ನು ತೆಗೆದುಕೊಂಡಿದೆ. ಈ ಘಟನೆಯಲ್ಲಿ ಬಾಗಿಯಾದ ಉಗ್ರರನ್ನು ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರಕಾರ ಅವರನ್ನು ಸಾರ್ವಜನಿಕವಾಗಿ ಗುಂಡಿಟ್ಟು ಕೊಲ್ಲಬೇಕು ಎಂದು ಒತ್ತಾಯಿಸಿದರು.

ನಂತರ ಸಾಮಾಜಿಕ ಕಾರ್ಯಕರ್ತ ಬಸವರಾಜ ಮೇಲಿನಮನಿ ಹಾಗೂ ಆನಂದ ಬಾರಿಗಿಡದ ಮಾತನಾಡಿ, ಉಗ್ರರರ ಸಂಹಾರಕ್ಕಾಗಿ ಪಕ್ಷಾತೀತವಾಗಿ ಒಗ್ಗೂಡಬೇಕು. ಉಗ್ರರನ್ನ ಮಟ್ಟಹಾಕಲು ಪ್ರಧಾನಿ ಮೋದಿ ಗೃಹ ಸಚಿವ ಅಮಿತ್ ಶಾ ಅಗತ್ಯ ಕ್ರಮ ಕೈಗೊಳ್ಳುತ್ತಾರೆ ಎಂಬ ನಂಬಿಕೆ ಇದೆ. ಹಿಂದುಗಳನ್ನೇ ಗುರಿಯಾಗಿಟ್ಟು ದಾಳಿ ಮಾಡಿರುವುದು ಖಂಡನೀಯ. ಉಗ್ರರನ್ನ ಗುಂಡಿಕ್ಕಿಕೊಲ್ಲಲು ನಮ್ಮ ಸೈನಿಕರಿಗೆ ಭಗವಂತ ಶಕ್ತಿ ನೀಡಲಿ. ಈಗಾಗಲೇ ಇಬ್ಬರು ಉಗ್ರರನ್ನ ಸದೆ ಬಡಿದ್ದಾರೆ. ಈ ಘಟನೆಯನ್ನ ಇಡೀ ಪ್ರಪಂಚವೇ ಖಂಡಿಸುತ್ತದೆ. ಎಲ್ಲರನ್ನ ಮಟ್ಟಹಾಕುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಕ್ರಮ ಕೈಗೊಳ್ಳಲಿ ಎಂದು ಅವರು ಹೇಳಿದರು.

ಡಾ ಯುಸುಫ್ ಡೆಕ್ಕನ್ ಮಾತನಾಡಿ, ಉಗ್ರರಿಗೆ ಸಹಕಾರ ನೀಡುತ್ತಿರುವ ಸ್ಥಳೀಯ ದೇಶದ್ರೋಹಿಗಳನ್ನು ಮೊದಲು ಮಟ್ಟಹಾಕಬೇಕಾಗಿದೆ. ಉಗ್ರರಿಗೆ ಕಠಿಣವಾದ ಶಿಕ್ಷೆ ನಮ್ಮ ಸೈನಿಕರಿಂದ ಆಗಲಿ ಎಂದು ಹೇಳಿದರು. ನಂತರ ಘಟನೆಯಲ್ಲಿ ಮೃತಪಟ್ಟವರಿಗೆ ಒಂದು ನಿಮಿಷದ ಮೌನಾಚರಣೆ ಮಾಡುವುದರ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ನಂದುಲಾಲ ಠವಾಣಿ, ಬಸವರಾಜ ಸಜ್ಜನ್, ಸಂಗಮೇಶ ಸಜ್ಜನ್, ಮಲ್ಲಯ್ಯ ನಂದಿಕೋಲ, ಗುಂಡು ಅಂಗಡಿ, ರೇಣುಕಾ ಪೌಜದಾರ, ಲಕ್ಷ್ಮಿ ಮೇದಾ, ಪಾರ್ವತಿ ಯಾಳವಾರ, ಆನಂದ ಬಾರಿಗಿಡದ, ವೆಂಕಟೇಶ ಅರಳಿಗಿಡದ, ರಮೇಶ ಮಿರಜ-ಕರ್, ಮಹೇಶ ಸ್ಥಾವರಮಠ, ಶರಣಗೌಡ ಗೆಣ್ಣೂರು, ದೇವು ಬೈಚಬಾಳ, ರಮೇಶ ವಾಲಿ, ಸೇರಿದಂತೆ ಪಟ್ಟಣದ ಮುಖಂಡರು ಯುವಕರು ಪಾಲ್ಗೊಂಡಿದ್ದರು

ಅಪಾಯ ತಡೆಗಟ್ಟಲು ಕೈಗೊಳ್ಳಬೇಕಾದ ಮುಂಜಾಗೃತ

# ಕ್ರಮಗಳ ಬಗ್ಗೆ ಅರಿವು, ಅಣಕು ಪ್ರದರ್ಶನ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಏಪ್ರಿಲ್ 25,- : ಆಕಸ್ಮಿಕವಾಗಿ ಆಸ್ಪತ್ರೆಯಲ್ಲಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಬೆಂಕಿ ಅವಗಡ ಸಂಭವಿಸಿದಾಗ ಆಗುವ ದುರ್ಘಟನೆ ಹಾಗೂ ಅಪಾಯ ತಡೆಗಟ್ಟಲು ಕೈಗೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ ಅರಿವು ಹಾಗೂ ಅಣಕು ಪ್ರದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಡಾ.ಮಹೇಶ ಬಿರದಾರ ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಆಸ್ಪತ್ರೆ (ಯಿಮ್ಸ), ಜಿಲ್ಲಾ ಮಲೇರಿಯಾ ಅಧಿಕಾರಿಗಳ ಕಾರ್ಯಾಲಯದ ಸಹಯೋಗದಲ್ಲಿ ಯಾದಗಿರಿ ಜಿಲ್ಲಾ ಸಾರ್ವಜನಿಕ ಆಸ್ಪತ್ರೆಯ ಆವರಣದಲ್ಲಿ ಅಗ್ನಿಶಾಮಕ ಸೇವಾ ಸಪ್ತಾಹದ ಅರಿವು ಅಣಕು ಪ್ರದರ್ಶನ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಅಗ್ನಿ ಸುರಕ್ಷತಾ ಕ್ರಮಗಳನ್ನು ಎಲ್ಲರೂ ಅಳವಡಿಸಿಕೊಂಡು ಅಮೂಲ್ಯವಾದ ಜೀವವನ್ನು, ಸಸ್ಯ ಸಂಪತ್ತನ್ನು ಬೆಂಕಿಯಿಂದ ರಕ್ಷಿಸಿಕೊಳ್ಳಬೇಕು ಹಾಗೂ ಅಗ್ನಿ ಅವಘಡ ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕೆಂದು, ಆಕಸ್ಮಿಕವಾಗಿ ಆಸ್ಪತ್ರೆಯಲ್ಲಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಬೆಂಕಿ ಅವಗಡ ಸಂಭವಿಸಿದಾಗ ಆಗುವ ದುರ್ಘಟನೆ ಹಾಗೂ ಅಪಾಯ ತಡೆಗಟ್ಟಲು ಕೈಗೊಳ್ಳಬೇಕಾದ ಮುಂಜಾಗೃತ ಕ್ರಮಗಳ ಬಗ್ಗೆ ತಿಳಿಸಿದರು. ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿಗಳಾದ ಡಾ.ಸಾಜೇದ್ ಅವರು ಮಾತನಾಡಿ, ಏ.14 ರಿಂದ ಏ.20 ರ ವರೆಗೆ, ಸುರಕ್ಷಿತ ಭಾರತವನ್ನು ಹುಟ್ಟು ಹಾಕಲು ಒಂದಾಗೋಣ, ಎಂಬ ಘೋಷ ವಾಕ್ಯದೊಂದಿಗೆ ಅರಿವು ಸಪ್ತಾಹ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದ್ದು, ಅಗ್ನಿಶಾಮಕ ಸಿಬ್ಬಂದಿ ಹಾಗೂ ಅಧಿಕಾರಿಗಳು ಆಕಸ್ಮಿಕ ಬೆಂಕಿ ಸಂಭವಿಸಿದ ಕಡೆ ಹಾಗೂ ತುರ್ತು ಸಂದರ್ಭಗಳಲ್ಲಿ ತಕ್ಷಣ ಧಾವಿಸಿ ತಮ್ಮ ಜೀವದ ಹಂಗು ತೊರೆದು ರಕ್ಷಣಾ ಕಾರ್ಯದಲ್ಲಿ ತೊಡಗಿಸಿಕೊಳ್ಳುತ್ತಿರುವುದು ಶ್ಲಾಘನಿಯ ಈ ಕಾರ್ಯಕ್ರಮದ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳಾದ ಶ್ರೀ ವಿರೇಶ್ ಅವರು ಮಾತನಾಡಿ, ಅಗ್ನಿ ಅವಘಡಗಳ ಸಂದರ್ಭದಲ್ಲಿ ಅಗ್ನಿ ಶಾಮಕ ಇಲಾಖೆಯಿಂದ ಕೈಗೊಳ್ಳುವ ಕ್ರಮಗಳು ಹಾಗೂ ಇಲಾಖೆ ಬಳಸುವ ಉಪಕರಣಗಳ ಬಗ್ಗೆ ಮಾಹಿತಿ ಜೊತೆಗೆ ಸಾರ್ವಜನಿಕರು ಕೈಗೊಳ್ಳಬೇಕಾದ ಮುಂಜಾಗೃತ ಕ್ರಮಗಳ ಕುರಿತು ತಿಳಿಸಿದರು. ನಂತರ ಅಗ್ನಿ ಶಾಮಕ ದಳದ ಸಿಬ್ಬಂದಿಗಳು ಅಣುಕು ಪ್ರದರ್ಶನ ತೊರಿಸುವುದರ ಮೂಲಕ ವೈದ್ಯರಿಗೆ ಹಾಗೂ ಅಧಿಕಾರಿ ಸಿಬ್ಬಂದಿಗಳಿಗೆ ಹಾಗೂ ನೆರೆದಿದ್ದ ಸಾರ್ವಜನಿಕರಿಗೆ ಅರಿವು ಮೂಡಿಸಿದರು.

ಈ ಸಂದರ್ಭದಲ್ಲಿ ವೈದ್ಯಕೀಯ ಅಧೀಕ್ಷಕಾರಾದ ಡಾ.ಸಂತೋಶ್, ಜಿಲ್ಲಾ ವಿಬಿಡಿ ಸಲಹೆಗಾರರಾದ ಶ್ರೀ ಬಸವರಾಜ್ ಕಾಂತ, ಹಿರಿಯ ಆರೋಗ್ಯ ನಿರಕ್ಷಾಣಾದಿಕಾರಿಗಳಾದ ಶ್ರೀ ಹಿರಾಲಾಲ್ ಚೌವ್ಹಾಣ, ಆರೋಗ್ಯ ನಿರಕ್ಷಣಾಧಿಕಾರಿಗಳಾದ ಶ್ರೀ ಖುರ್ಶೀದ್, ಶ್ರೀ ಉಮೇಶ್, ಶ್ರೀ ಕಾಳಪ್ಪ ಪತ್ತಾರ, ಸಂತೋಶ್ ಜಾದವ್, ಎಮ್‌ಟಿಎಸ್‌ಗಳಾದ ಶ್ರೀ ವಿ.ಎಮ್.ಪಾಟಿಲ್, ಶ್ರೀ ಖಲಿಮುದ್ದಿನ್, ಹಾಗೂ ಆಸ್ಪತ್ರೆಯ ವೈದ್ಯರು, ಸಿಬ್ಬಂದಿಗಳು, ಆರೋಗ್ಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳು, ಅಗ್ನಿಶಾಮಕ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಇನ್ನಿತರರು ಉಪಸ್ಥಿತರಿದ್ದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ತುಳಸಿರಾಮ ಚವ್ಹಾಣ ಸ್ವಾಗತ ಹಾಗೂ ವಂದನಾರ್ಪಣೆ ವಂದಿಸಿದರು.

# ಡಾ.ಅನಿಲಕುಮಾರಗೆ ರಾಜ್ಯ ಶಿಕ್ಷಣ ರತ್ನ ಸಿರಿ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಶ್ರೀ ವಿರಕ್ತೇಶ್ವರ ಭರತನಾಟ್ಯ ಸಂಸ್ಥೆ ತಾಳಿಕೋಟಿ ತನ್ನ 6ನೇ ವಾರ್ಷಿಕೋತ್ಸವದ ಅಂಗವಾಗಿ ಕನ್ನಡ ನಾಡಿನ ನೆಲ,ಜಲ, ಭಾಷೆ,ಸಾಹಿತ್ಯ,ಸಂಗೀತ,ನೃತ್ಯ, ಶಿಕ್ಷಣ,ವಾದ್ಯಮ,ಚಿತ್ರಕಲೆ, ಸಮಾಜ ಸೇವೆ, ರಂಗಭೂಮಿ, ಕ್ರೀಡೆ,ವೈದ್ಯಕೀಯ ಸೇವೆ,ಜನಪದ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಸಾಧನೆಗೈಯುತ್ತಿರುವ ಸಾಧಕರಿಗೆ ರಾಜ್ಯ ಪ್ರಶಸ್ತಿ ನೀಡಿ ಗೌರವಿಸುತ್ತಿದೆ. 2025 ನೇ ಸಾಲಿನ ಪ್ರಶಸ್ತಿಗೆ ಸ್ಥಳೀಯ ಎಸ್.ಕೆ.ಪದವಿ ಪೂರ್ವ ಕಾಲೇಜು ಪ್ರೌಢಶಾಲಾ ವಿಭಾಗದ ಶಿಕ್ಷಕ ಡಾ.ಅನಿಲಕುಮಾರ ಇರಾಜ ಅವರು

ರಾಜ್ಯ ಶಿಕ್ಷಣ ರತ್ನ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಅವರಿಗೆ ಮೇ 3 ರಂದು ಶನಿವಾರ ಪಟ್ಟಣದ ಶ್ರೀ ವಿಠ್ಠಲ ಮಂದಿರದಲ್ಲಿ ನಡೆಯುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವದು ಎಂದು ವಿರಕ್ತೇಶ್ವರ ಭರತನಾಟ್ಯ ಸಂಸ್ಥೆಯ ಪ್ರಕಟಿಸಿದೆ.

ಡಾ. ಇರಾಜ ಅವರು ಕಳೆದ 32 ವರ್ಷಗಳಿಂದ ವೀರಶೈವ ವಿದ್ಯಾವರ್ಧಕ ಸಂಘದ ಪ್ರೌಢಶಾಲೆಗಳಲ್ಲಿ ಹಿಂದಿ ವಿಷಯ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ವಿಷಯ ಸಂಪನ್ಮೂಲ ವ್ಯಕ್ತಿಯಾಗಿ ನಾಡಿನ ಹಲವಾರು ಕಡೆ ಮಕ್ಕಳಿಗೆ ಬೋಧಿಸಿದ್ದಾರೆ , ಲೇಖ-ಕರಾಗಿ , ಭಾಷಣಕಾರರಾಗಿ, ನಿರೂಪಕರಾಗಿ ಗುರುತಿಸಲ್ಪಡುವ ಇವರು ಅಸಂಖ್ಯ ಶಿಷ್ಯಂದಿರ ಪ್ರೀತಿಯ ಗುರುಗಳಾಗಿದ್ದಾರೆ.

ಇವರಿಗೆ ಬಂದ ಪ್ರಶಸ್ತಿಗಾಗಿ ವೀ.ವಿ.ಸಂಘದ ಅಧ್ಯಕ್ಷ ವ್ಹಿ.ಸಿ.ಹಿರೇಮಠ, ಕಾರ್ಯದರ್ಶಿ ಎಮ್.ಎಸ್.ಸರಶೆಟ್ಟಿ, ಸಹಕಾರ್ಯದರ್ಶಿ ಕೆ.ಎಸ್.ಮುರಾಳ, ಪ್ರೌಢಶಾಲಾ ಚೇರಮನ್ ರಾದ ಎಮ.ಎಮ್. ವಾಲಿ, ಆಯ್.ಬಿ.ಬಿಳೆಭಾವಿ ಪ್ರಾಚಾರ್ಯ ಡಾ.ಡಿ.ಬಿ.ಮೂಗಡ್ಲಿಮಠ, ಕೆ.ಕಿಶೋರಕುಮಾರ ,ಜೆ.ಎಸ್. ಕಟ್ಟಿಮನಿ ಹಾಗೂ ಶಿಕ್ಷಕರು ಅಭಿನಂದಿಸಿದ್ದಾರೆ.

# ಬುದ್ಧಿಮಾಂದ್ಯ ಮಕ್ಕಳಿಗೆ ಫೀಜಿಯೋತೆರಫಿಗೆ ಒಳಪಡಿಸಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ.25-ಕಲಬುರಗಿ ಮಹಾನಗರಪಾಲಿಕೆಯಿಂದ ಎಸ್.ಎಫ್.ಸಿ. ಕ್ರೇಯಾ ಯೋಜನೆಗಳ ಯೋಜನೆಯಡಿ ವಿಕಲಚೇತನರಿಗೆ ಕೆಳಕಂಡ ಕಲ್ಯಾಣ ಕಾರ್ಯಕ್ರಮಗಳಡಿ ಶೇ. 5ರ ಶಾಖೆಯ ಯೋಜನೆಯಾದ 2019-20ನೇ ಸಾಲಿನ ಬುದ್ಧಿ ಮಾಂದ್ಯ ಮಕ್ಕಳಿಗೆ ಫೀಜಿಯೋತೆರಫಿಗೆ ಒಳಪಡಿಸಲು ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ. ಅಭ್ಯರ್ಥಿಗಳು ವಿಕಲಚೇತನರರಾಗಿರಬೇಕು. ಕಲಬುರಗಿ ನಗರದ ನಿವಾಸಿಯಾಗಿರಬೇಕು. ವಾರ್ಷಿಕ ಆದಾಯ 2.50 ಲಕ್ಷ ರೂ. ಮೀರಿರಬಾರದು.

ವಿಕಲಚೇತನರ ಪ್ರಮಾಣ ಪತ್ರ ಯುಡಿಐಡಿ ಕಾರ್ಡ ಲಗತ್ತಿಸಬೇಕು.

## ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಿಂದ ಸೈಬರ್ ಅಪರಾಧಗಳ ತಡೆಗೆ ಸೂಕ್ತ ಕ್ರಮ

# ಸಹಾಯವಾಣಿ-1930 ಹಾಗೂ ವೆಬ್ ಬಾಟ್ ಉನ್ನತೀಕರಣ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.25-ಪ್ರಸ್ತುತದೇಶದಲ್ಲಿ ಹೆಚ್ಚುತ್ತಿರುವಆನ್‌ಲೈನ್ ಹಣಕಾಸು ವಂಚನೆಗಳನ್ನು ತಡೆಯಲು ರಾಜ್ಯದಲ್ಲಿ ಸೈಬರ್ ಅಪರಾಧ ಸಹಾಯವಾಣಿ-1930 ಜೊತೆಗೆ ವೆಬ್ ಬಾಟ್ ಉನ್ನತೀಕರಣ ಮಾಡಲಾಗಿದೆ ಎಂದು ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನೀರಿಕ್ಷಕರಾದ ಅಲೋಕ್ ಮೋಹನ್ ತಿಳಿಸಿದರು.

ಮಂಗಳವಾರ ಬೆಂಗಳೂರಿನ ಮಹಾತ್ಮಗಾಂಧಿ ರಸ್ತೆಯಲ್ಲಿರುವ ಎಡಿಜಿಪಿ ಸಿಎಲ್&ಎಮ್ ಕಾರ್ನರ್ ಹೌಸ್ ಕಚೇರಿಯಲ್ಲಿ ಉನ್ನತೀಕರಿಸಲಾದ ಸೈಬರ್ ಅಪರಾಧ ಸಹಾಯವಾಣಿ-1930 ವೆಬ್ ಬಾಟ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ಕರ್ನಾಟಕ ರಾಜ್ಯದಲ್ಲಿ 1930 ಸಹಾಯವಾಣಿಯಲ್ಲಿ ಸ್ವೀಕರಿಸಿದ ಕರೆಗಳ ಸಂಖ್ಯೆ 2022 ರಲ್ಲಿ 1.30 ಲಕ್ಷ ಇದ್ದು, ನಂತರ 2024 ರಲ್ಲಿ 8.26 ಲಕ್ಷಕ್ಕೆ ಮತ್ತು 2025 ರ ಮೊದಲ ತ್ರೈಮಾಸಿಕದಲ್ಲಿ (ಜನವರಿ-ಮಾರ್ಚ್) 4.34 ಲಕ್ಷಕ್ಕೆ ಏರಿಕೆಯಾಗಿದೆ ಎಂದು ಹೇಳಿದರು.

ಪ್ರಸ್ತುತ ರಾಜ್ಯದಲ್ಲಿ ಸಾರ್ವಜನಿಕರು ಪ್ರತಿನಿತ್ಯ ಆನ್‌ಲೈನ್ ಹಣಕಾಸು ವಂಚನೆಗಳಿಗೆ ಒಳಗಾಗುತ್ತಿರುವ ಪ್ರಕರಣಗಳು ಹೆಚ್ಚುತ್ತಿರುವ ಹಿನ್ನಲೆಯಲ್ಲಿ ತಕ್ಷಣ ಸಾರ್ವಜನಿಕರು ದೂರು ದಾಖಲಿಸಲು ಅನುವಾಗುವಂತೆ ಸೈಬರ್ ಅಪರಾಧ ಸಹಾಯವಾಣಿ-1930 ಹಾಗೂ ವೆಬ್ ಬಾಟ್‌ನ್ನು ಉನ್ನತೀಕರಿಸಲಾಗಿದೆ. ಕರ್ನಾಟಕ ರಾಜ್ಯದಲ್ಲಿ ತುರ್ತು ಸ್ಪಂದನಾ ವ್ಯವಸ್ಥೆಯ (Emergency Response Support System) ಸಾರ್ವಜನಿಕ ಸುರಕ್ಷತಾ ಪ್ರತ್ಯುತ್ತರ ಕೇಂದ್ರವನ್ನು (Public Safety Answering Point) ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು, ಸಂಪರ್ಕ, ಸಾರಿಗೆ ಮತ್ತು ಆಧುನೀಕರಣರವರ ಕಛೇರಿ ಆವರಣದಲ್ಲಿ ಸ್ಥಾಪಿಸಲಾಗಿದ್ದು, ಸದರಿ 1930 ಸಹಾಯವಾಣಿ ಕೇಂದ್ರದಲ್ಲಿ ಆನ್‌ಲೈನ್ ಹಣಕಾಸು ವಂಚನೆ ಅಪರಾಧಗಳಿಗೆ ಸಂಬಂಧಿಸಿದ ದೂರುಗಳನ್ನು National Cyber crime Reporting Portal (NCRP) ಮೂಲಕ ದಾಖಲಿಸಲಾಗುತ್ತಿದೆ.

ಈ ರೀತಿಯಲ್ಲಿ ದೂರುದಾರರ ಕರೆಗಳ ಸಂಖ್ಯೆಯು ಏರಿಕೆಯಾಗುತ್ತಿರುವುದರಿಂದ, ಹೆಚ್ಚು ಸಂಖ್ಯೆಯ ಕರೆಗಳು ಕಡಿತಗೊಂಡಿರುವುದು (Call Drops) ಕಂಡುಬಂದಿರುತ್ತದೆ. ಇದರಲ್ಲಿ ಹೆಚ್ಚಿನ ಪ್ರಮಾಣದ ಕರೆಗಳು ತಮ್ಮ ದೂರಿನ ಸ್ಥಿತಿ ವಿಚಾರಣೆ (Status enquiry) ಮತ್ತು ಸೈಬರ್ ಅಪರಾಧದ ಕುಂದುಕೊರತೆಗಳಿಗೆ ಸಂಬಂಧಿಸಿದ ಕರೆಗಳಾಗಿದ್ದು, ಎಲ್ಲಾ ಕರೆ ಸ್ವೀಕರಿಸುವ ಸಿಬ್ಬಂದಿಗಳು ಕಾರ್ಯನಿರತರಾಗಿರುತ್ತಿದ್ದ ಕಾರಣ 1930-ಸಹಾಯವಾಣಿಗೆ ಹೊಸ ದೂರುಗಳನ್ನು ದಾಖಲಿಸುವವರು ಶೀಘ್ರವಾಗಿ ಸಂಪರ್ಕಿಸಲು ಸಾಧ್ಯವಾಗುತ್ತಿರಲಿಲ್ಲ. ಇದರಿಂದಾಗಿ ದೂರುದಾರರಿಗೆ 1930-ಸಹಾಯವಾಣಿಯು ಸಂಪರ್ಕ ಸಿಗದೆ ಗೋಲ್ಡನ್ ಅವರ್ ನಲ್ಲಿ ದೂರು ದಾಖಲಿಸಲು ಕಷ್ಟಕರವಾಗುತ್ತಿತ್ತು. ಈ ದೂರುದಾರರಲ್ಲಿ ಹಿರಿಯ ನಾಗರೀಕರು ಸಹ ಕರೆ ಮಾಡುತ್ತಿದ್ದು 1930 ಸಹಾಯವಾಣಿಗೆ ಕರೆ ಮಾಡಿದ ಸಮಯದಲ್ಲಿ ಸಂಪರ್ಕ ಸಿಗದೇ ಅಸಹಾಯಕರಾಗಿದ್ದರು.

ಈ ಸಮಸ್ಯೆಯಿಂದ ಹಣಕಾಸು ವಂಚನೆಗೊಳಗಾದ ದೂರುದಾರರ ಹಣವನ್ನು ಗೋಲ್ಡನ್ ಅವರ್ ನಲ್ಲಿ ಸಂಬಂಧಿಸಿದ ಬ್ಯಾಂಕ್‌ಗಳಲ್ಲಿ ತಡೆಹಿಡಿಯುವ ಪ್ರಕ್ರಿಯೆಯಲ್ಲಿ ವಿಳಂಬವಾಗುತ್ತಿತ್ತು. ಇದರಿಂದಾಗಿ ಸದರಿ ಹಣ ವಂಚಕರ ಖಾತೆಗೆ ವರ್ಗಾವಣೆಯಾಗಲು ಸುಲಭವಾಗುತ್ತಿತ್ತು.

ಈ ಎಲ್ಲಾ ಸಮಸ್ಯೆಗಳನ್ನು ಮನಗಂಡ ಇಲಾಖೆಯು, ಸಮಸ್ಯೆಯನ್ನು ಪರಿಹರಿಸಲು ದೂರುದಾರರ ಕರೆಗಳನ್ನು ಹಣಕಾಸು ಸಂಬಂಧಿತ ದೂರುಗಳು, ಹಣಕಾಸೇತರ ಸಂಬಂಧಿತ ದೂರುಗಳು (ಉದಾ.: WhatsApp/Facebook ಖಾತೆಯ ಹ್ಯಾಕ್‌ಗಳು ಅಥವಾ Impersonation), ದೂರಿನ ಸ್ಥಿತಿ ವಿಚಾರಣೆಗಳು ಮತ್ತು ಸೈಬರ್ ಅಪರಾಧ ಸಂಬಂಧಿತ ಕುಂದುಕೊರತೆ ಕರೆಗಳಾಗಿ ಐವಿಆರ್ ವ್ಯವಸ್ಥೆಯ ಮೂಲಕ ವರ್ಗೀಕರಿಸಲಾಗಿದೆ.

ಇದರಿಂದಾಗಿ ಹೊಸ ದೂರನ್ನು ಸಕಾಲದಲ್ಲಿ ದಾಖಲಿಸುವವರಿಗೆ ಆದ್ಯತೆ ನೀಡಲಾಗಿದೆ ಮತ್ತು Voice Guided WebBOT ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದ್ದು, ದೂರುದಾರರು ವೆಬ್‌ಬಾಟ್ ಮೂಲಕ ಮಾಹಿತಿ ಸಲ್ಲಿಸಲು ಇಚ್ಛಿಸಿದ್ದಲ್ಲಿ ಎಸ್‌ಎಂಎಸ್ ಮೂಲಕ ವೆಬ್‌ಬಾಟ್ ಲಿಂಕ್ ಅನ್ನು ಕಳುಹಿಸಲಾಗುವುದು.

ನಂತರ ಈ ಸಹಾಯವಾಣಿಯ ಸಿಬ್ಬಂದಿಯ ಮೂಲಕ ಸದರಿ ಮಾಹಿತಿಯನ್ನು ಎನ್.ಸಿ.ಆರ್.ಪಿ ಯಲ್ಲಿ ದಾಖಲಿಸಲಾಗುವುದು. ಇದು ಸಾರ್ವಜನಿಕರಿಗೆ 1930 ಸಹಾಯವಾಣಿಯಲ್ಲಿ ದೂರು ಸಲ್ಲಿಸಲು ಹಾಗೂ ಕಾಲ್ ಡ್ರಾಪ್‌ಗಳನ್ನು ಸಹ ತಡೆಯಲು ಸಹಾಯವಾಗುತ್ತದೆ.

1930 ಸಹಾಯವಾಣಿಯ ಎಲ್ಲಾ ಸಿಬ್ಬಂದಿಗಳು ಕಾರ್ಯನಿರತವಾಗಿದ್ದ ಸಮಯದಲ್ಲಿ ದೂರುದಾರರು ಸ್ವಯಿಚ್ಛೆಯಿಂದ ಕರೆ ಕಡಿತಗೊಳಿಸಿದ ಸಮಯದಲ್ಲೂ ಸಹ ಎಸ್‌ಎಂಎಸ್ ಮುಖಾಂತರ ಈ ವೆಬ್‌ಬಾಟ್ ಲಿಂಕ್ ಅನ್ನು ಸದರಿ ದೂರುದಾರರಿಗೆ ಕಳುಹಿಸಲಾಗುವುದು.

2022 ರಲ್ಲಿ 20,894 ದೂರುಗಳನ್ನು ಸೈಬರ್ ಕ್ರೈಂ ಸಹಾಯವಾಣಿ-1930 ಮೂಲಕ National Cyber Crime Reporting Portal (NCRP) ನಲ್ಲಿ ದಾಖಲಿಸಲಾಗಿದ್ದು, 2024 ರಲ್ಲಿ 97,929 ದೂರುಗಳನ್ನು ದಾಖಲಿಸಲಾಗಿತ್ತು. 2022ನೇ ಇಸವಿಯಲ್ಲಿ ವರದಿಯಾದ ಒಟ್ಟು ವಂಚನೆಯ ಮೊತ್ತವು ರೂ.113 ಕೋಟಿ ರೂಪಾಯಿಗಳಾಗಿದ್ದು, ನಂತರ 2024 ರಲ್ಲಿ ರೂ.2,396 ಕೋಟಿಗಳಿಗೆ ಏರಿಕೆಯಾಗಿರುತ್ತದೆ.

ಈ ಸಂಬಂಧ ಸೈಬರ್ ಕ್ರೈಂ ಸಹಾಯವಾಣಿ-1930 ರ ಮೂಲಕ ಬ್ಯಾಂಕ್‌ಗಳಲ್ಲಿ ತಡೆಹಿಡಿಯಲಾದ ಮೊತ್ತವು 2022 ರಲ್ಲಿ 8 ಕೋಟಿಗಳಾಗಿದ್ದು, ನಂತರ 2024 ರಲ್ಲಿ ರೂ.226 ಕೋಟಿ ವಂಚನೆಯ ಹಣವನ್ನು ತಡೆಹಿಡಿಯಲಾಗಿದೆ. ಸದರಿ ಮೊತ್ತವು ವಂಚನೆಯ ಮೊತ್ತದ ಶೇಕಡಾ 9 ರಷ್ಟು ಆಗಿರುತ್ತದೆ. ಈ ಹೊಸ ವ್ಯವಸ್ಥೆಯ ಪರಿಣಾಮದಿಂದಾಗಿ 2025 ರ ಮೊದಲ ತ್ರೈಮಾಸಿಕದಲ್ಲಿ 38,000 ಪ್ರಕರಣಗಳನ್ನು ಸೈಬರ್ ಕ್ರೈಂ ಸಹಾಯವಾಣಿ-1930 ಮೂಲಕ ದಾಖಲಿಸಲಾಗಿರುತ್ತದೆ.

ಪ್ರಸ್ತುತ ವರ್ಷದಲ್ಲಿ ಮಾರ್ಚ್ 2025ರ ಅಂತ್ಯಕ್ಕೆ ವಂಚನೆ ಹಣದ ಶೇಕಡಾ 16 ರಷ್ಟು ಮೊತ್ತವನ್ನು ಬ್ಯಾಂಕ್‌ಗಳಲ್ಲಿಯೇ ತಡೆಯುವಲ್ಲಿ ಶ್ರಮವಹಿಸಿರುತ್ತೇವೆ ಎಂದು ಹೇಳಿದರು.

ವೆಬ್‌ಬಾಟ್ ವ್ಯವಸ್ಥೆ ಜೊತೆಗೆ ಹೊಸ ಸೌಲಭ್ಯಗಳ ವಿವರ: *1930 ಸಹಾಯವಾಣಿಯಲ್ಲಿ ಈ ಹಿಂದಿನ ದೂರವಾಣಿ ಮೂಲಸೌಕರ್ಯವನ್ನು ಬದಲಾಯಿಸಿ SIP ಲೈನ್‌ಗಳಿಗೆ ಉನ್ನತೀಕರಿಸಲಾಗಿದೆ. ಇದು ಹೆಚ್ಚುತ್ತಿರುವ ದೂರು ಕರೆಗಳ ಪ್ರಮಾಣವನ್ನು ನಿರ್ವಹಿಸಲು ಸಹಾಯ ಮಾಡುತ್ತದೆ.

*ಭಾಷಾ ಆಯ್ಕೆ IVR (Interactive Voice Response) ವ್ಯವಸ್ಥೆಯನ್ನು ಪರಿಚಯಿಸಲಾಗಿದ್ದು, ಈ ವ್ಯವಸ್ಥೆಯು ವಂಚನೆಗೊಳಗಾದ ದೂರುದಾರರ ಸಂವಹನಕ್ಕಾಗಿ ಕನ್ನಡ, ಇಂಗ್ಲೀಷ್ ಅಥವಾ ಹಿಂದಿ ಭಾಷೆಯನ್ನು ಆಯ್ಕೆ ಮಾಡಲು ಅನುವು ಮಾಡಿಕೊಡುತ್ತದೆ.

*ವಂಚನೆಗೊಳಗಾದ ದೂರುದಾರರು 1930 ಸಹಾಯವಾಣಿಗೆ ಕರೆ ಮಾಡಿದಾಗ, ಕರೆ ಸ್ವೀಕರಿಸುವ ಎಲ್ಲಾ ಸಿಬ್ಬಂದಿಗಳು ಕಾರ್ಯನಿರತರಾಗಿದ್ದರೆ, ಈ ಸಮಯದಲ್ಲಿ ಐವಿಆರ್ ಮೂಲಕ ದೂರುದಾರರ Queue Position ಬಗ್ಗೆ ಮಾಹಿತಿ ಒದಗಿಸಲಾಗುತ್ತದೆ.

*ಹಣಕಾಸೇತರ ಸಂಬಂಧಿತ ದೂರುಗಳಲ್ಲಿ (ಉದಾ.: WhatsApp/Facebook ಖಾತೆಯ ಹ್ಯಾಕ್‌ಗಳು ಅಥವಾ Impersonation) ಸಮಸ್ಯೆಯನ್ನು ಬಗೆಹರಿಸುವ ಬಗೆಗಿನ ಮಾಹಿತಿಯ ಲಿಂಕ್ ಅನ್ನು ಎಸ್‌ಎಂಎಸ್ ಮುಖಾಂತರ ದೂರುದಾರರಿಗೆ ನೀಡಲಾಗುವುದು.

*ವಂಚನೆಗೊಳಗಾದವರು ಮತ್ತು ವಂಚಕರ ಬಗೆಗಿನ ಮಾಹಿತಿಯನ್ನು ಸಹ ಸಂಗ್ರಹಿಸಿ, ಶೇಖರಿಸುವ ವ್ಯವಸ್ಥೆ ಕಲ್ಪಿಸಲಾಗಿದ್ದು, ಈ ಮಾಹಿತಿಯಿಂದ ತನಿಖಾಧಿಕಾರಿಗಳು ಆರೋಪಿಯ ಬಗ್ಗೆ ಹಾಗೂ ವಂಚನೆಗಳ ಬಗ್ಗೆ ವಿಶ್ಲೇಷಿತ ಮಾಹಿತಿಯನ್ನು ಪಡೆಯಬಹುದಾಗಿರುತ್ತದೆ.

*ಸೈಬರ್ ಕ್ರೈಂ ಸಹಾಯವಾಣಿ-1930 ವನ್ನು ಮಾನ್ಯ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರಾದ ಎಸ್. ಮುರುಗನ್ ಐಪಿಎಸ್ ರವರ ಮಾರ್ಗದರ್ಶನದಲ್ಲಿ ಸುಧಾರಿತ ಸಾಂಫ್ಟವೇರ್ ಹಾಗೂ ಮೂಲ ಸೌಕರ್ಯದೊಂದಿಗೆ ಅಂದಾಜು ವೆಚ್ಚ 01 ಕೋಟಿ ರೂಗಳಲ್ಲಿ ಉನ್ನತೀಕರಿಸಲಾಗಿದ್ದು, ಇದರಿಂದ ಹಣಕಾಸು ವಂಚನೆಗೊಳಗಾದ ಸಾರ್ವಜನಿಕರಿಗೆ ಉತ್ತಮ ಸೇವೆಯನ್ನು ಒದಗಿಸುವುದಾಗಿದೆ.

*1930 ಸಹಾಯವಾಣಿಯು ಸೈಬರ್ ಅಪರಾಧಗಳಿಗೆ ಒಳಗಾದ ನಾಗರೀಕರಿಗೆ ದಿನದ 24 ಗಂಟೆಗಳ ಕಾಲವೂ ಉತ್ತಮ ಸೇವೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ.

ಕಾರ್ಯಕ್ರಮದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ಎಡಿಜಿಪಿ ಹಿತೇಂದ್ರ, ಆಡಳಿತ ವಿಭಾಗದ ಎಡಿಜಿಪಿ ಸೌಮೆಂದು ಮುಖರ್ಜಿ, ಕರ್ನಾಟಕ ರಾಜ್ಯ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕರು ಹಾಗೂ ಹೆಚ್ಚುವರಿ ಮಹಾ ನಿರ್ದೇಶಕರಾದ ನಂಜುಂಡಸ್ವಾಮಿ ಹಾಗೂ ಡಿಜಿಪಿ ಶ್ರೀಮತಿ ಮಾಲಿನಿ ಕೃಷ್ಣಮೂರ್ತಿ ಸೇರಿದಂತೆ ಅನೇಕ ಹಿರಿಯ

## ಬಳ್ಳಾರಿ: ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ

# 'ಶುದ್ಧೀಕರಿಸಿದ' ನೀರು ಪೂರೈಕೆಗೆ ಆದ್ಯತೆಯಾಗಲಿ: ಡಾ.ಕೆ.ವಿ.ತ್ರಿಲೋಕ ಚಂದ್ರ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.25-ಬೇಸಿಗೆಯಲ್ಲಿ ಜಿಲ್ಲೆಯ ಎಲ್ಲಾ ಗ್ರಾಪಂ ವ್ಯಾಪ್ತಿಯ ಹಳ್ಳಿಗಳಲ್ಲಿ ಸಮರ್ಪಕವಾಗಿ ಕ್ಲೋರಿನೇಷನ್‌ನೊಂದಿಗೆ ಶುದ್ಧೀಕರಣಗೊಳಿಸಿದ ನೀರು ಪೂರೈಕೆಗೆ ಆದ್ಯತೆ ನೀಡಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಡಾ.ಕೆ.ವಿ.ತ್ರಿಲೋಕಚಂದ್ರ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದ (20 ಅಂಶ ಸೇರಿದಂತೆ) ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

*ನೀರಿನ ಮೂಲಗಳ ಪರಿಶೀಲನೆ ನಡೆಸಿ, ಓಹೆಚ್ ಟಿ ಸ್ವಚ್ಛಗೊಳಿಸಿ:*

ಬೇಸಿಗೆಯಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರಿಗೆ ವ್ಯತ್ಯವಾಗಬಾರದು. ಯಾವುದೇ ಕಾರಣಕ್ಕೂ ಕಲುಷಿತ ನೀರು ಪೂರೈಕೆಯಾಗಬಾರದು. ಇದರ ಬಗ್ಗೆ ಎಚ್ಚರ ವಹಿಸಬೇಕು. ನಿರಂತರವಾಗಿ ನೀರಿನ ಮೂಲಗಳನ್ನು ಪರಿಶೀಲನೆ ನಡೆಸುತ್ತಿರಬೇಕು. ನೀರಿನ ಸಂಗ್ರಹಾಗಾರಗಳನ್ನು ಶುಚಿಗೊಳಿಸುತ್ತಿರಬೇಕು. ನೀರಿನ ಮಾದರಿಗಳನ್ನು ಪರೀಕ್ಷೆಗೆ ಒಳಪಡಿಸಿದ ನಂತರವೇ ಸರಬರಾಜು ಮಾಡಬೇಕು ಮತ್ತು ಓವರ್ ಹೆಡ್ ಟ್ಯಾಂಕ್ ಗಳ ಮುಚ್ಚಳ ಮುಚ್ಚಲಾಗುತ್ತಿದೆಯೇ ಎಂಬುದನ್ನು ಖಾತ್ರಿಪಡಿಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಜಿಲ್ಲೆಯಲ್ಲಿ ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗಬಹುದಾದಂತಹ 82 ಹಳ್ಳಿಗಳನ್ನು ಗುರುತಿಸಿದ್ದು, ಈಗಾಗಲೇ ಕುಡಿಯುವ ನೀರು ಪೂರೈಕೆಗೆ ಟ್ಯಾಂಕರ್ ಗಳನ್ನು ಸಿದ್ಧತೆಯಲ್ಲಿಟ್ಟುಕೊಳ್ಳಲಾಗಿದೆ ಎಂದು ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಇಂಜಿನಿಯರ್ ಇಂದುಧರ್ ಸಭೆಗೆ ತಿಳಿಸಿದರು.

ಶುದ್ಧ ಕುಡಿಯುವ ನೀರು ಸೇವನೆ ಕುರಿತು ಸಾರ್ವಜನಿಕರಿಗೆ ಜನಸಂದಣಿ ಇರುವ ಸ್ಥಳ, ಜಾತ್ರಾ ಸಂದರ್ಭಗಳಲ್ಲಿ ಅರಿವು ಮೂಡಿಸುವ ಕಾರ್ಯ ಕೈಗೊಳ್ಳಬೇಕು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಸೂಚಿಸಿದ ಅವರು, ಗ್ರಾಮಗಳಲ್ಲಿ ತುರ್ತು ಆರೋಗ್ಯ ಸೇವೆಗಳಿಗಾಗಿ ಬರುವ ರೋಗಿಗಳನ್ನು ಪ್ರತಿ ಬಾರಿಯೂ ಜಿಲ್ಲಾ ಕೇಂದ್ರಗಳಿಗೆ ತೆರಳುವಂತೆ ಶಿಫಾರಸ್ಸು ಮಾಡುವುದು ಸಮಂಜಸವಲ್ಲ; ತಪಾಸಣೆ ಕೈಗೊಳ್ಳಬೇಕು. ಸಾರ್ವಜನಿಕರಿಗೆ ತಾವಿರುವಲ್ಲಿಯೇ ಆರೋಗ್ಯ ಸೇವೆ ನೀಡಬೇಕು. ಇದಕ್ಕೆ ಸಾಕಷ್ಟು ಮಾನವ ಸಂಪನ್ಮೂಲಗಳನ್ನು ಒದಗಿಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲೆಯಲ್ಲಿ ಗರ್ಭಿಣಿ ಮಹಿಳೆಯರಲ್ಲಿ ಅಧಿಕ ರಕ್ತದೊತ್ತಡ, ಅನೀಮಿಯಾ ತಡೆಗಟ್ಟಲು ಸೂಕ್ತ ಕಾರ್ಯಯೋಜನೆ ರೂಪಿಸಬೇಕು. ಗರ್ಭಿಣಿ ಮಹಿಳೆಯರಿಗೆ ಸೇವಿಸಲು ಆರೋಗ್ಯ ಇಲಾಖೆಯಿಂದ ನೀಡಲಾಗುವ ಕಬ್ಬಿಣಾಂಶ ಮಾತ್ರೆಗಳ ಸೇವನೆ ಕುರಿತು ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಮನೆ ಭೇಟಿ ನಡೆಸಿ ಖಚಿತಪಡಿಸಿಕೊಳ್ಳಬೇಕು. ಇದರಿಂದ ಸುಲಭ ಮತ್ತು ಸಾಮಾನ್ಯ ಹೆರಿಗೆಗೆ ಸಹಾಯಕವಾಗಲಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಕಳಪೆ ಗುಣಮಟ್ಟದ ಬಿತ್ತನೆ ಬೀಜ ವಿತರಣೆಯಾಗಿರುವ ಬಗ್ಗೆ ಹಾಗೂ ರೈತರ ಫಸಲಿನಲ್ಲಿ ಇಳುವರಿ ಬಾರದೇ ಇರುವ ಬಗ್ಗೆ ದೂರುಗಳು ಕೇಳಿಬರುತ್ತಿದೆ. ಈ ಕುರಿತು ಕೃಷಿ ಅಧಿಕಾರಿಗಳು ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳ ಪೂರೈಕೆ ಮಾಡುತ್ತಿರುವ ಅನಧಿಕೃತ ರಸಗೊಬ್ಬರದ ಅಂಗಡಿಗಳ ಮೇಲೆ ದಾಳಿ ನಡೆಸಿ ಕಾನೂನಿನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕು. ಈ ಕುರಿತು ರೈತರಿಗೆ ಗುಣಮಟ್ಟದ ಬೀಜ ಮತ್ತು ರಸಗೊಬ್ಬರಗಳ ಕುರಿತು ಅರಿವು ಮೂಡಿಸಬೇಕು ಎಂದು ತಿಳಿಸಿದರು. ಜಿಲ್ಲೆಯಲ್ಲಿ ಜಾನುವಾರುಗಳಿಗೆ ಮೇವಿನ ಕೊರತೆಯಾಗಬಾರದು. ಈಗಾಗಲೇ ಇರುವ ಮೇವಿನ ಬ್ಯಾಂಕ್ ಗಳಲ್ಲಿ ಮೇವು ದಾಸ್ತಾನು ಇಟ್ಟುಕೊಳ್ಳಬೇಕು ಎಂದು ಸೂಚಿಸಿದ ಅವರು, ಪಶು ವೈದ್ಯಾಧಿಕಾರಿಗಳಿಂದ ಜಿಲ್ಲೆಯಲ್ಲಿ ಮೇವಿನ ಲಭ್ಯತೆ ಕುರಿತು ಮಾಹಿತಿ ಪಡೆದುಕೊಂಡರು.

ಸಂಡೂರು ತಾಲ್ಲೂಕು ವ್ಯಾಪ್ತಿಯಲ್ಲಿ ಕಳೆದ ವಾರ ಅಕಾಲಿಕ ಗಾಳಿ-ಮಳೆಯಿಂದಾಗಿ ಬಾಳೆ ಬೆಳೆಯು ನೆಲಕ್ಕುರುಳಿರುವ ಕುರಿತು ವರದಿಯಾಗಿದೆ. ಈ ಕುರಿತು ತೋಟಗಾರಿಕೆ ಅಧಿಕಾರಿಗಳಿಗೆ ಪ್ರಶ್ನಿಸಿದರು, ಈ ಕುರಿತು ನಿಯಮಾನುಸಾರ ಬೆಳೆ ಪರಿಹಾರ ಒದಗಿಸಲು ಕ್ರಮ ವಹಿಸುವಂತೆ ತಾಲ್ಲೂಕು ತಹಶೀಲ್ದಾರರಿಗೆ ನಿರ್ದೇಶನ ನೀಡಲಾಗಿದೆ ಎಂದು ತೋಟಗಾರಿಕೆ ಉಪನಿರ್ದೇಶಕರು ಸಭೆಗೆ ತಿಳಿಸಿದರು.

ಜಿಲ್ಲೆಯಲ್ಲಿ ಹೈನುಗಾರಿಕೆಗೆ ಉತ್ತೇಜನ ನೀಡಬೇಕು. ಸಾಮಾಜಿಕ ಅರಣ್ಯ ಬೆಳವಣಿಗೆಗೆ ಆದ್ಯತೆ ನೀಡಬೇಕು. ಜಿಲ್ಲೆಯಲ್ಲಿ ರಸ್ತೆಗಳು ನಿರ್ಮಾಣ ಕಾಮಗಾರಿಗಳು ಗುಣಮಟ್ಟದ್ದಾಗಿರಬೇಕು. ರಾಷ್ಟ್ರೀಯ ಹೆದ್ದಾರಿ ರಸ್ತೆ ಕಾಮಗಾರಿಗಳಿಗೆ ಚುರುಕು ನೀಡಿ, ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲೆಯಲ್ಲಿನ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಬರುವ ವಸತಿ ನಿಲಯಗಳ ಕಟ್ಟಡ, ನಿರ್ವಹಣೆ, ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಮತ್ತು ಇತರೆ ವ್ಯವಸ್ಥೆಗಳ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು, ಸೂಕ್ತ ಸಲಹೆ-ಸೂಚನೆ ನೀಡಿದರು. ಸಭೆಯಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹ್ಯಾರಿಸ್ ಸುಮೈರ್, ಸಹಾಯಕ ಆಯುಕ್ತ ಪಿ.ಪ್ರಮೋದ್, ಜಿಲ್ಲಾ ಖನಿಜ ಪ್ರತಿಷ್ಠಾನದ ವಿಶೇಷ ಅಧಿಕಾರಿ ಪಿ.ಎಸ್.ಮಂಜುನಾಥ, ಜಿಪಂ ಉಪಕಾರ್ಯದರ್ಶಿ ಗಿರಿಜಾ ಶಂಕರ್ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಂಡೂರು ಪುರಸಭೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.25-ಸಂಡೂರು ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರಡಿ ಐಇಸಿ ಚಟುವಟಿಕೆ ಕೈಗೊಳ್ಳಲು ಸ್ವಸಹಾಯ ಗುಂಪು ಸದಸ್ಯರ ನೇಮಕಾತಿಗಾಗಿ ಆಸಕ್ತಿಯುಳ್ಳ ಸದಸ್ಯರಿಂದ ಅರ್ಜಿ ಆಹ್ವಾನಿಸಲಾಗಿದೆ.

ಸಂಡೂರು ಪುರಸಭೆ ವ್ಯಾಪ್ತಿಯಲ್ಲಿ 03 ವರ್ಷಗಳವರೆಗೆ ಪೂರ್ಣಾವಧಿಗೆ ಐಇಸಿ ಚಟುವಟಿಕೆ ಕೈಗೊಳ್ಳಲು ಆಸಕ್ತಿ ಹೊಂದಿರುವ ನಲ್ಮ್ ಡೇ ಅಥವಾ ಎನ್‌ಆರ್‌ಎಲ್‌ಎಂ ಅಡಿ ನೋಂದಾಯಿತ ಸ್ವ-ಸಹಾಯ ಗುಂಪು ಸದಸ್ಯರು ನಿಗಧಿತ ದಾಖಲಾತಿಗಳೊಂದಿಗೆ ಸಂಡೂರು ಪುರಸಭೆ ಕಚೇರಿಗೆ ಮೇ 03 ರೊಳಗೆ ಅರ್ಜಿ ಸಲ್ಲಿಸಬಹುದು.

ಸ್ವಚ್ಛ ಭಾರತ್ ಮಿಷನ್ ನ ಅರಿವು ಮೂಡಿಸುವ ಕಾರ್ಯಕ್ರಮಗಳಲ್ಲಿರುವ ಆಸಕ್ತಿ, ಜ್ಞಾನಕೌಶಲ್ಯ, ಕಂಪ್ಯೂಟರ ಜ್ಞಾನ ಮತ್ತು ಮಾಹಿತಿಯ ಕುರಿತು ನಿರ್ಣಯಿಸಲು ಜಿಲ್ಲಾ ಮಟ್ಟದಲ್ಲಿ ಸಂದರ್ಶನವನ್ನು ಆಯೋಜಿಸಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಆಯ್ಕೆ ಪ್ರಕ್ರಿಯೆ ಮತ್ತು ಗೌರವಧನಕ್ಕೆ ಸಂಬಂಧಿಸಿದ ಇತರೆ ವಿವರಗಳಿಗಾಗಿ ಸಂಡೂರು ಪುರಸಭೆಯ ಪರಿಸರ ಅಭಿಯಂತರ ಕಚೇರಿ ಅಥವಾ ದೂ.08395-260275 ಗೆ ಸಂಪರ್ಕಿಸಬಹುದು ಎಂದು ಸಂಡೂರು ಪುರಸಭೆಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾರ್ತಾ ಇಲಾಖೆಯಿಂದ ಡಿಜಿಟಲ್ ಜಾಹೀರಾತಿಗೆ ಮಾಧ್ಯಮ, ಏಜೆನ್ಸಿಗಳ ನೋಂದಣಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.25-ಸರ್ಕಾರದ ನೀತಿ ಮತ್ತು ಯೋಜನೆಗಳನ್ನು ಅಂತರ್ಜಾಲ ಬಳಸುವ ಜನರಿಗೆ ಡಿಜಿಟಲ್ ಜಾಹೀರಾತುಗಳ ಮೂಲಕ ತಲುಪಿಸಲು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿ-2024 ಅನ್ನು ಜಾರಿಗೆ ತಂದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರವು ಡಿಜಿಟಲ್ ಜಾಹೀರಾತಿಗಾಗಿ ಡಿಜಿಟಲ್ ಜಾಹೀರಾತು ಏಜೆನ್ಸಿ ಮತ್ತು ಡಿಜಿಟಲ್ ಮಾಧ್ಯಮಗಳನ್ನು ಎಂಪ್ಯಾನಲ್‌ಮೆಂಟ್ ಮಾಡಿಕೊಳ್ಳುತ್ತಿದೆ. ದೇಶದಲ್ಲಿಯೇ ಮೊದಲ ಬಾರಿಗೆ ಡಿಜಿಟಲ್ ಏಜೆನ್ಸಿ ಮತ್ತು ಮಾಧ್ಯಮಗಳನ್ನು ನೋಂದಾಯಿಸಿಕೊಳ್ಳಲಾಗುತ್ತಿದೆ ಎಂದು ಮುಖ್ಯಮಂತ್ರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೆಲವು ವರ್ಷಗಳಿಂದ ಮಾಧ್ಯಮದ ವ್ಯಾಪ್ತಿ ಮತ್ತು ಸ್ವರೂಪ ಬದಲಾಗಿದೆ. ಅಂತರ್ಜಾಲ, ಖಾಸಗಿ ಕಂಪ್ಯೂಟರ್, ಸ್ಮಾರ್ಟ್ ಟಿವಿ ಹಾಗೂ ಸ್ಮಾರ್ಟ್ ಫೋನ್, ಸಾಮಾಜಿಕ ಜಾಲತಾಣಗಳ ಬಳಕೆ ಹೆಚ್ಚಾಗಿದೆ. ಸಾಂಪ್ರದಾಯಿಕ ಜಾಹೀರಾತುಗಳಿಗಿಂತ ಡಿಜಿಟಲ್ ಜಾಹೀರಾತು ಹೆಚ್ಚು ಪ್ರಭಾವಶಾಲಿಯಾಗಿದೆ. ಜೊತೆಗೆ, ಹೆಚ್ಚು ವ್ಯಾಪ್ತಿ ಮತ್ತು ನಿರ್ದಿಷ್ಟ ಜನರನ್ನು ತಲುಪುತ್ತಿದೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಕಾರ್ಯಕ್ರಮಗಳು ಮತ್ತು ನೀತಿಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸಲು ಹಾಗೂ ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಮಾದರಿಯಲ್ಲಿ ಡಿಜಿಟಲ್ ಜಾಹೀರಾತು ನೀಡಲು ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿಯನ್ನು ಸರ್ಕಾರ ಹೊರತಂದಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದ್ದಾರೆ.

ಹೊಸ ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿ ಅನ್ವಯ ಎಲ್ಲಾ ಇಲಾಖೆಗಳು, ನಿಗಮಗಳು, ಪ್ರಾಧಿಕಾರಗಳು, ಮಂಡಳಿಗಳು, ಸ್ಥಳೀಯಾಡಳಿತಗಳು, ಪುರಸಭೆಗಳು, ನಗರ ಪಾಲಿಕೆಗಳು ಮೊದಲಾದವುಗಳಲ್ಲಿ ಡಿಜಿಟಲ್ ಜಾಹೀರಾತುಗಳನ್ನು ಕಡ್ಡಾಯವಾಗಿ ಈ ಮಾರ್ಗಸೂಚಿಗೆ ಅನುಸಾರವಾಗಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮೂಲಕ ಬಿಡುಗಡೆ / ಪೂರೈಸಬೇಕಾಗಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದ್ದಾರೆ.

ಕರ್ನಾಟಕ ಡಿಜಿಟಲ್ ಜಾಹೀರಾತು ಮಾರ್ಗಸೂಚಿ ಅನ್ವಯ ವೀಡಿಯೊ ಸ್ಟ್ರೀಮಿಂಗ್ ಪ್ಲಾಟ್‌ಫಾರ್ಮ್‌ಗಳಾದ ಗೂಗಲ್ (ಯೂಟ್ಯೂಬ್), ಮೆಟಾ (ಫೇಸ್‌ಬುಕ್, ಇನ್‌ಸ್ಟಾಗ್ರಾಂ, ವಾಟ್ಸಾಪ್ ಬಿಸಿನೆಸ್, ವಾಟ್ಸಾಪ್ ಚಾನಲ್), ಸರ್ಚ್ ಇಂಜಿನ್‌ಗಳಾದ ಗೂಗಲ್, ಬಿಂಗ್, ಸಾಮಾಜಿಕ ಜಾಲತಾಣಗಳಾದ ಎಕ್ಸ್ (ಈ ಹಿಂದೆ ಟ್ವಿಟರ್), ಫೇಸ್‌ಬುಕ್, ಇನ್‌ಸ್ಟಾಗ್ರಾಂ, ಲಿಂಕ್‌ಡ್‌ಇನ್, ವಾಟ್ಸಾಪ್, ಸ್ನಾಪ್‌ಚಾಟ್, ಟೆಲಿಗ್ರಾಂ, ಒಟಿಟಿ ಪ್ಲಾಟ್‌ಫಾರ್ಮ್‌ಗಳಾದ ನೆಟ್‌ಫ್ಲಿಕ್ಸ್, ಅಮೇಜಾನ್ ಪ್ರೈಮ್, ಡಿಸ್ನಿ ಹಾಟ್‌ಸ್ಟಾರ್ ಸೋನಿಲೈವ್, ಜಿಯೋ ಸಿನಿಮಾ, ಜೀ 5, ವೂಟ್, ಸನ್ ನೆಕ್ಸ್ಟ್ ಮತ್ತು ಟಾಕೀಸ್, ಫಿನ್‌ಟೆಕ್ ಪ್ಲಾಟ್‌ಫಾರ್ಮ್‌ಗಳಾದ ಪೇಟಿಎಂ, ಫೋನ್‌ಪೇ ಮತ್ತು ಜಿಪೇ ಸೇರಿದಂತೆ ಇನ್ನಿತರ ಡಿಜಿಟಲ್ ವೇದಿಕೆಗಳಡಿ ಜಾಹೀರಾತು ಅರ್ಹ ಏಜೆನ್ಸಿಗಳ ಮೂಲಕ ನೀಡಲು ಅವುಗಳನ್ನು ಎಂಪ್ಯಾನಲ್ ಮಾಡಿಕೊಳ್ಳಲು ವಾರ್ತಾ ಇಲಾಖೆಯು ಉದ್ದೇಶಿಸಿದೆ. ಹಾಗೆಯೇ, ಅಪ್ಲಿಕೇಶನ್ ಡೌನ್‌ಲೋಡ್ ಪ್ಲಾಟ್‌ಫಾರ್ಮ್ ಅಡಿಯಲ್ಲಿ ಬರುವ ವೀಡಿಯೊ, ಡಿಸ್‌ಪ್ಲೇ ಮತ್ತು ಸರ್ಚ್ ಸೇರಿದಂತೆ ವಿವಿಧ ವೇದಿಕೆಗಳಡಿ ಜಾಹೀರಾತು ನೀಡಿಕೆ, ಗೂಗಲ್ ಪ್ಲೇ ಸ್ಟೋರ್ ಅಥವಾ ಆಪಲ್ ಆಪ್ ಸ್ಟೋರ್‌ನಲ್ಲಿ ಕನಿಷ್ಠ 1 ಲಕ್ಷ ಡೌನ್‌ಲೋಡ್ ಹೊಂದಿರುವ ಯಾವುದೇ ಆಪ್ ಮತ್ತು ಸುದ್ದಿಗಳನ್ನು ಪ್ರಸಾರ ಮಾಡುವ ಯಾವುದೇ ಡಿಜಿಟಲ್ ಘಟಕ-ವೆಬ್ ಅಪ್ಲಿಕೇಶನ್ ಅಥವಾ ಮೊಬೈಲ್ ಅಪ್ಲಿಕೇಶನ್ ಸೇರಿದಂತೆ ವಿವಿಧ ಮೂಲಗಳಿಂದ ಸುದ್ದಿಗಳನ್ನು ಸಂಗ್ರಹಿಸಿ ಜನರಿಗೆ ನೀಡುವ ವೇದಿಕೆಗಳು. ಇನ್‌ಶಾರ್ಟ್ ಮತ್ತು ಹೆಚ್ಚಿನ ಸಂಖ್ಯೆಯಲ್ಲಿ ಫಾಲೋವರ್‌ಗಳನ್ನು ಹೊಂದಿರುವ ಇನ್‌ಫ್ಲುಯೆನ್ಸರ್‌ಗಳು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ನೋಂದಾಯಿಸಿಕೊಂಡು ಜಾಹೀರಾತು ಪಡೆಯಲು ಅರ್ಹತೆ ಹೊಂದುತ್ತವೆ. ಡಿಜಿಟಲ್ ಜಾಹೀರಾತಿಗಾಗಿ ಕರ್ನಾಟಕ ಸರ್ಕಾರದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೊಂದಿಗೆ ಸಹಯೋಗ ಹೊಂದಲು ಬಯಸುವ ಏಜೆನ್ಸಿಗಳು ಭಾರತ ಸರ್ಕಾರದ ರಿಜಿಸ್ಟ್ರಾರ್ ಆಫ್ ಕಂಪನೀಸ್ ನಲ್ಲಿ ನೋಂದಣಿಯಾದ ಪ್ರೈವೇಟ್ ಲಿಮಿಟೆಡ್ ಕಂಪನಿ, ಪಬ್ಲಿಕ್ ಲಿಮಿಟೆಡ್ ಕಂಪನಿ, ಪಾಲುದಾರಿಕೆ, ಲಿಮಿಟೆಡ್ ಲಯಬಿಲಿಟಿ ಪಾಲುದಾರಿಕೆ ಹೊಂದಿರಬೇಕು. ಎಂಪ್ಯಾನೆಲಿಂಗ್ ಸಮಯದಲ್ಲಿ ಕನಿಷ್ಠ ಎರಡು ವರ್ಷಗಳಾಗಿರಬೇಕು. ಜಿಎಸ್‌ಟಿ ನೋಂದಣಿ ಇರಬೇಕು. ಕರ್ನಾಟಕದಲ್ಲಿ ಕಾರ್ಯನಿರ್ವಹಿಸುತ್ತಿರಬೇಕು ಅಥವಾ ಕರ್ನಾಟಕದಲ್ಲಿ ಪೂರ್ಣ ಪ್ರಮಾಣದ ಕಚೇರಿ ಇರಬೇಕು. ಕನ್ನಡ ಮತ್ತು ಇಂಗ್ಲೀಷ್ ನಲ್ಲಿ ಪ್ರಾವೀಣ್ಯತೆ ಇರಬೇಕು.

ಡಿಜಿಟಲ್ ಜಾಹೀರಾತು ಮತ್ತು ಸಾಮಾಜಿಕ ಜಾಲತಾಣದ ಬಗ್ಗೆ ಆಳವಾದ ಜ್ಞಾನವಿರಬೇಕು. ಸರ್ಕಾರಗಳಿಗೆ ಪ್ಲಾಟ್‌ಫಾರ್ಮ್‌ಗಳಲ್ಲಿ ಡಿಜಿಟಲ್ ಜಾಹೀರಾತು ನೀಡಲು ಗೂಗಲ್ ಅಥವಾ ಮೆಟಾ ಜೊತೆಗೆ ಮಾನ್ಯವಾದ ಒಪ್ಪಂದ/ಒಡಂಬಡಿಕೆ ಹೊಂದಿರಬೇಕು. ತಮ್ಮ ಪ್ಲಾಟ್‌ಫಾರ್ಮ್‌ಗಳಲ್ಲಿ ಸರ್ಕಾರದ ಜಾಹೀರಾತು ನೀಡಲು ಗೂಗಲ್ ಅಥವಾ ಮೆಟಾದಿಂದ ಅನುಮತಿ ಪಡೆದುಕೊಂಡಿರಬೇಕು ಎಂದು ಷರತ್ತುಗಳನ್ನು ನಿಗದಿ ಪಡಿಸಿದೆ. ಡಿಜಿಟಲ್ ಮಾಧ್ಯಮ ಘಟಕಕ್ಕೆ ಅರ್ಹತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯೊಂದಿಗೆ ಡಿಜಿಟಲ್ ಜಾಹೀರಾತು ನೀಡಲು ಎಂಪ್ಯಾನೆಲ್‌ಮೆಂಟ್‌ಗಾಗಿ ಡಿಜಿಟಲ್ ಮಾಧ್ಯಮ ಘಟಕವು ಭಾರತದ ಸರ್ಕಾರದ ರಿಜಿಸ್ಟ್ರಾರ್ ಆಫ್ ಕಂಪನೀಸ್‌ನಲ್ಲಿ ನೋಂದಣಿಯಾದ ಕಾನೂನುಬದ್ಧ ಸಂಘಟಿತ ಘಟಕವಾಗಿರಬೇಕು.

ಕನಿಷ್ಠ ಒಂದು ವರ್ಷ ಕಾಲ ಯಾವುದೇ ಸಮಯದ ಅಂತರವಿಲ್ಲದೆ ನಿರಂತರವಾಗಿ ಕಂಟೆಂಟ್ ಪ್ರಕಟಿಸಿರಬೇಕು. ಜಿಎಸ್‌ಟಿ ನೋಂದಣಿ ಇರಬೇಕು. ರಾಜ್ಯ ಅಥವಾ ಕೇಂದ್ರ ಸರ್ಕಾರ ಅಥವಾ ಅದರ ಏಜೆನ್ಸಿಗಳ ಎಲ್ಲ ಶಾಸನಬದ್ಧ ಅವಶ್ಯಕತೆಗಳನ್ನು ಅನುಸರಿಸಲು ವಿಫಲವಾದರೆ ಎಂಪ್ಯಾನೆಲ್ಮೆಂಟ್ ರದ್ದುಗೊಳಿಸಲಾಗುತ್ತದೆ. ಭಾರತದ ಕಾನೂನನ್ನು ಉಲ್ಲಂಘಿಸುವ ಪದ, ದೃಶ್ಯಗಳು, ಆಡಿಯೋ ಅಥವಾ ಅಂತಹ ಯಾವುದೇ ವಿಷಯವನ್ನು ಪ್ರಕಟಿಸಿರಬಾರದು ಎಂಬ ಷರತ್ತುಗಳನ್ನು ವಿಧಿಸಲಾಗಿದೆ.

ಮೇಲ್ಕಂಡ ಅರ್ಹತೆಗಳನ್ನು ಹೊಂದಿರುವ ಡಿಜಿಟಲ್ ಮಾಧ್ಯಮ ಘಟಕಗಳು ಮತ್ತು ಡಿಜಿಟಲ್ ಜಾಹೀರಾತು ಏಜೆನ್ಸಿಗಳು sevasindhu.karnataka.gov.in ಗೆ ಭೇಟಿ ನೀಡಿ, ನಿಗದಿಪಡಿಸಿರುವ ದಾಖಲಾತಿಗಳೊಂದಿಗೆ ಶುಲ್ಕ ಪಾವತಿಸಿ, ಮೇ 15ರ ಒಳಗೆ ಅರ್ಜಿ ಸಲ್ಲಿಸಲು ಕೋರಿದೆ.

# ಧ್ಯಾನದ ಬಲದಿಂದ ಸುಜ್ಞಾನ: ಎಚ್.ಜಿ.ಮಿರ್ಜಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.25-ಅಭಿಮನ್ಯು ತಾಯಿ ಗರ್ಭದಲ್ಲಿರುವಾಗಲೇ ಚಕ್ರವ್ಯೂಹ ಭೇದಿಸುವುದನ್ನು ಕಲಿತಿದ್ದನಂತೆ. ಶಿಕ್ಷಣ ಎಂಬುದು ಗರ್ಭಕೋಶದಿಂದ ಶುರುವಾಗಿ ವಿಶ್ವಕೋಶದವರೆಗೆ ಇರುತ್ತದೆ. ಧ್ಯಾನ, ಯೋಗದ ಬಲದಿಂದ ಅದನ್ನು ಸಿದ್ಧಿಸಿಕೊಳ್ಳಬಹುದಾಗಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಪ್ರಭಾರಿ ಉಪನಿರ್ದೇಶಕ ಎಚ್.ಜಿ.ಮಿರ್ಜಿ ಹೇಳಿದರು.

ವಿದ್ಯಾಗಿರಿಯ ಶ್ರೀಸಾಯಿ ಮಂದಿರದ ಆವರಣದಲ್ಲಿ ಪಿರಾಮಿಡ್ ಸ್ಪಿರಿಚುವಲ್ ಸೊಸೈಟಿ ಆಫ್ ಇಂಡಿಯಾ, ಶ್ರೀಕುಮಾರೇಶ್ವರ ವಿಶ್ವಧರ್ಮ ಶಾಂತಾಶ್ರಮ, ವರದಾನೇಶ್ವರಿ ಮಹಿಳಾ ಸಂಘ ಹಾಗೂ ವಿದ್ಯಾಗಿರಿ ಸಮಾನ ವಯಸ್ಕರ ಹಿರಿಯ ನಾಗರಿಕ ವೇದಿಕೆ ವತಿಯಿಂದ ಹಮ್ಮಿಕೊಂಡಿದ್ದ 21 ದಿನಗಳ ಉಚಿತ ಆನಪಾನಸತಿ ಧ್ಯಾನ ದಾಸೋಹ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಮಕ್ಕಳಿಗೆ 6ನೇ ವಯಸ್ಸಿನಿಂದ ಶಿಕ್ಷಣ ಶುರುವಾಗೋದಿಲ್ಲ. ಗರ್ಭಕೋಶದಲ್ಲಿರುವಾಗಲೇ ಅವುಗಳಿಗೆ ಶಿಕ್ಷಣ ನೀಡಲಾಗುತ್ತದೆ. ಅದು ಪುರಾತನ ಕಾಲದಿಂದಲೂ ಇತ್ತು. ಮುಂದುವರಿದ ಆಧುನಿಕ ದೇಶಗಳಲ್ಲೂ ಅಂಥದೊಂದು ಶಿಕ್ಷಣ ಜಾರಿಗೆ ಬರುತ್ತಿದೆ. ಭಾರತೀಯರಾದ ನಮಗೆ ಯೋಗ, ಧ್ಯಾನದಂಥ ಅಪೂರ್ವ ಶಕ್ತಿ ಲಭಿಸಿವೆ. ಅವುಗಳನ್ನು ಬಳಸಿಕೊಂಡು ಮಕ್ಕಳನ್ನು ಸಶಕ್ತರನ್ನಾಗಿಸಬೇಕೆಂದರು.

ಪಿರಾಮಿಡ್ ಸ್ಪಿರಿಚುವಲ್ ಸೊಸೈಟಿ ಜಿಲ್ಲಾ ಸಂಚಾಲಕ ರಾಜಶೇಖರ ಅಡಿಕೇನವರ ಮಾತನಾಡಿ, 2021ರಲ್ಲಿ ಬಾಗಲಕೋಟೆಗೆ ಬ್ರಹ್ಮರ್ಷಿ ಸುಭಾಷ್ ಪತ್ರಿಜಿ ಅವರು ಭೇಟಿ ನೀಡಿದಾಗ ಬಾಗಲಕೋಟೆಯ ಭಾಗ್ಯದ ಕೋಟೆ, ಧ್ಯಾನದ ಕೋಟೆ ತೆರೆದಿದೆ ಎಂದಿದ್ದರು. ಅದರಂತೆ ನಾವೆಲ್ಲ ಸೇರಿ ಬಾಗಲಕೋಟೆಯಲ್ಲಿ ಧ್ಯಾನಾಸಕ್ತರ ಬಳಗವನ್ನು ಹೆಚ್ಚಿಸಿದ್ದೇವೆ. ಇದು ಇನ್ನೂ ಹೆಚ್ಚಾಗಬೇಕು ಅದಕ್ಕೆಲ್ಲರೂ ಕೈಜೋಡಿಸಬೇಕೆಂದು ಮನವಿ ಮಾಡಿದರು. ಧ್ಯಾನಾಸಕ್ತರ ಕೋರಿಕೆಯಂತೆ ಶ್ರೀಸಾಯಿ ಮಂದಿರದ ಬಯಲು ರಂಗಮಂದಿರದ ಮೇಲ್ಛಾವಣಿಯಲ್ಲಿ ಪಿರಮಿಡ್ ನಿರ್ಮಿಸಲು ಶ್ರೀಕುಮಾರೇಶ್ವರ ವಿಶ್ವಧರ್ಮ ಶಾಂತಾಶ್ರಮದ ಪದಾಧಿಕಾರಿಗಳು ಒಪ್ಪಿಕೊಂಡಿದ್ದಾರೆ. ಎಲ್ಲರೂ ಸೇರಿ ಅದರ ನಿರ್ಮಾಣ ಕಾರ್ಯದಲ್ಲಿ ಕೈಜೋಡಿಸೋಣ ಎಂದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ನಿಕಟಪೂರ್ವ ಜಿಲ್ಲಾ ಸಂಘಚಾಲಕ ಡಾ.ಸಿ.ಎಸ್.ಪಾಟೀಲ, ಶ್ರೀಕುಮಾರೇಶ್ವರ ವಿಶ್ವಧರ್ಮ ಶಾಂತಾಶ್ರಮದ ಕಾರ್ಯಾಧ್ಯಕ್ಷ ಶ್ರೀಶೈಲ ಕರಿಶಂಕರಿ, ನಿವೃತ್ತ ಬಿಇಒ ಎನ್.ಬಿ.ಗೊರವರ, ಹಿರಿಯ ನಾಗರಿಕರ ವೇದಿಕೆಯ ಬಸವರಾಜ ಇಂಡಿ, ಅನ್ನಪೂರ್ಣ ಹುಲ್ಯಾಳ, ಬಸವರಾಜ ಮಿಟ್ಟಲಕೋಡ, ಸತೀಶ ಕಲಬುರಗಿ, ತಿಪಶೆಟ್ಟಿ, ಮಹಾಬಳೇಶ್ವರ ಗುಂಡಗುಂಟಿ, ನಾರಾಯಣ ಸೋನಾರ, ಸಿದ್ದಪ್ಪ ಯಂಡಿಗೇರಿ, ಜಯಶ್ರೀ ಭದ್ರಶೆಟ್ಟಿ ಮತ್ತಿತರರು ಇದ್ದರು.

# ಗದ್ದನಕೇರಿ ಕ್ರಾಸ್ ಅಭಿವೃದ್ಧಿಗೆ ಆದ್ಯತೆ : ಶಾಸಕ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.25-ಜಿಲ್ಲಾಕೇಂದ್ರ ಬಾಗಲಕೋಟೆಗೆ ಹತ್ತಿರವಿರುವ ಗದ್ದನಕೇರಿ ಕ್ರಾಸ್ ವಲಯ ದಿನೇ ದಿನೇ ಬೆಳೆಯುತ್ತಿದ್ದು ಅದರ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಬೀಳಗಿ ಶಾಸಕ ಹಾಗೂ ಹಟ್ಟಿ ಚಿನ್ನದ ಗಣಿ ಕಂಪನಿ ನಿಯಮಿತದ ಅಧ್ಯಕ್ಷ. ಜೆ.ಟಿ.ಪಾಟೀಲ ಹೇಳಿದರು.

ಗುರುವಾರ ಗದ್ದನಕೇರಿ ಕ್ರಾಸ್‌ನಲ್ಲಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ವತಿಯಿಂದ ಅಲ್ಪಸಂಖ್ಯಾತರ ಕಾಲೋನಿಗಳ ಸಮಗ್ರ ಅಭಿವೃದ್ಧಿ ಹಾಗೂ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕಾಮಗಾರಿಗಳಲ್ಲಿ ಸಿಸಿ ರಸ್ತೆಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಬೀಳಗಿ ಮತಕ್ಷೇತ್ರದ ಅರಕೇರಿ, ಕೊಪ್ಪ, ಚಿಕ್ಕಾಲಗುಂಡಿ, ಸೋರಕೊಪ್ಪ, ಬನ್ನಿದಿನ್ನಿ, ಗದ್ದನಕೇರಿ ಕ್ರಾಸ್ ಹಾಗೂ ಮೂರನಾಳದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು.

ತಮ್ಮ ಗ್ರಾಮಗಳಿಗೆ ನೀಡಿರುವ ಕಾಮಗಾರಿಗಳನ್ನು ತಾವೇ ಉಸ್ತುವಾರಿ ವಹಿಸಿಕೊಂಡು ಉತ್ತಮ ಗುಣಮಟ್ಟದ ಕಾರ್ಯವನ್ನು ನಿರ್ವಹಿಸಿಕೊಳ್ಳಬೇಕು ಎಂದು ಹೇಳಿದ ಜೆ.ಟಿ.ಪಾಟೀಲ, ಗದ್ದನಕೇರಿ ಕ್ರಾಸಿಗೆ ಬಸ್ ನಿಲ್ದಾಣ, ಆರೋಗ್ಯ ಕೇಂದ್ರ, ಮಾರುಕಟ್ಟೆ, ಪೊಲೀಸ್ ಠಾಣೆ ಸೇರಿದಂತೆ ಅನೇಕ ಕಾರ್ಯಗಳು ಆಗಬೇಕಿವೆ ಎಂದು ಹೇಳಿದರು.

ಗದ್ದನಕೇರಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಮಾಲಾ ಸಂಗಪ್ಪ ನಾಲತ್ತವಾಡ, ಸದಸ್ಯರಾದ ಚಂದ್ರಶೇಖರ್ ಸಾಲಗುಂದಿ, ಸಂಭಾಜಿ ಕೊಕಾಟೆ, ಸಂಗಣ್ಣ ನಾಲತ್ತವಾಡ, ಅಹ್ಮದ್ ಕಿರಸೂರ, ಜಾವೇದ್ ಮುಜಾವರ, ಶೌಕತ್ತಲಿ ಪಗಡಿ, ಹುಸೇನ್ ಬಂದ್ಕೇರಿ, ಸಿದ್ದಣ್ಣ ಛಬ್ಬಿ, ಶಿವು ರಾಥೋಡ ಹಾಗೂ ಜಿಲ್ಲಾ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಶಿವಾನಂದ ಪಟ್ಟಣಶೆಟ್ಟಿ ಇದ್ದರು.

# ನಾಳೆ ಡಾ.ಅಂಬೇಡ್ಕರ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,25-ಛಲವಾದಿ ಮಹಾಸಭಾ ಜಿಲ್ಲಾ ಸಮಿತಿ ವತಿಯಿಂದ ಏ.27 ರಂದು ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ್ ಅಂಬೇಡ್ಕರ ಅವರ 134ನೇ ಜಯಂತ್ಯೋತ್ಸವ ಆಚರಿಸಲಾಗುತ್ತಿದೆ.

ಅಂದು ಮುಂಜಾನೆ 10.30 ಗಂಟೆಗೆ ನವನಗರದ ಅಂಬೇಡ್ಕರ್ ಭವನದಲ್ಲಿ ನಡೆಯುವ ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಚಿತ್ರದುರ್ಗದ ಛಲವಾದಿ ಗುರುಪೀಠದ ಜಗದ್ಗುರು ಪೂಜ್ಯಶ್ರೀ ಬಸವನಾಗಿದೇವ ಶರಣರು, ಎಪಿಎಂಸಿ ಹತ್ತಿರದ ಬುದ್ಧ ವಿಹಾರದ ಪೂಜ್ಯ ಆಯುಷ್ಮಾನ ದಮ್ಮಪಾಲ ಬಂತೇಜಿ ವಹಿಸಲಿದ್ದಾರೆ. ನೇತೃತ್ವವನ್ನು ಸುಕ್ಷೇತ್ರ ಕೋಡ್ಲಾದ ಶ್ರೀಉರಿಲಿಂಗ ಪೆದ್ದೇಶ್ವರ ಮಹಾಸಂಸ್ಥಾನಮಠದ ಪೂಜ್ಯಶ್ರೀ ಜ್ಞಾನಪ್ರಕಾಶ ಸ್ವಾಮೀಜಿಗಳು ವಹಿಸಲಿದ್ದು, ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ಉದ್ಘಾಟನೆ ನೆರವೇರಿಸಲಿದ್ದಾರೆ. ಅಧ್ಯಕ್ಷತೆಯನ್ನು ಛಲವಾದಿ ಮಹಾಸಭಾ ರಾಜ್ಯಾಧ್ಯಕ್ಷರಾದ ವಾಣಿ ಕೆ.ಶಿವರಾಮು ವಹಿಸಲಿದ್ದಾರೆ. ಅತಿಥಿಗಳಾಗಿ ತೋಟಗಾರಿಕೆ ವಿಶ್ವವಿದ್ಯಾಲಯದ ಕುಲಪತಿ ಡಾ.ವಿಷ್ಣುವರ್ಧನ್ ಭಾಗವಹಿಸಲಿದ್ದಾರೆ.

ಭಾವಚಿತ್ರದ ಮೆರವಣಿಗೆ: ಮುಂಜಾನೆ 8.30 ಗಂಟೆಗೆ ಸೆಕ್ಟರ್ ನಂ.45ರಲ್ಲಿರುವ ಬುದ್ಧ ಉದ್ಯಾನದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಗೆ ಬುದ್ಧವಂದನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿ ಮೆರವಣಿಗೆಗೆ ಚಾಲನೆ ನೀಡಲಾಗುವುದು.

ಕೋರ್ಟ ರಸ್ತೆ ಮೂಲಕ ಜಿಲ್ಲಾಡಳಿತ ಭವನ ರಸ್ತೆ, ನವನಗರ ಬಸ್ ನಿಲ್ದಾಣ ರಸ್ತೆ, ಎಲ್‌ಐಸಿ ವೃತ್ತದ ಮೂಲಕ ಮೆರವಣಿಗೆ ಹೊರಟು ಅಂಬೇಡ್ಕರ ಭವನಕ್ಕೆ ತಲುಪಲಿದೆ ಎಂದು ಜಿಲ್ಲಾ ಛಲವಾದಿ ಮಹಾಸಭಾ ಅಧ್ಯಕ್ಷ ವಿವೇಕಾನಂದ ಗರಸಂಗಿ ತಿಳಿಸಿದ್ದಾರೆ..

# ಡಾ.ಕಸ್ತೂರಿರಂಗನ್ ಅವರ ನಿಧನಕ್ಕೆ ಸಂತಾಪ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ25-ಇಸ್ರೋ ಸಂಸ್ಥೆಯ ಮಾಜಿ ಅಧ್ಯಕ್ಷ, ಪದ್ಮವಿಭೂಷಣ ಡಾ.ಕೆ.ಕಸ್ತೂರಿ ರಂಗನ್ ಅವರ ನಿಧನಕ್ಕೆ ಬವಿವ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಕಂಬನಿ ಮಿಡಿದಿದ್ದಾರೆ.

2022ರ ನವೆಂಬರ್ ತಿಂಗಳಿನಲ್ಲಿ ಬಾಗಲಕೋಟೆಯ ಬವಿವ ಸಂಘಕ್ಕೆ ಅವರು ಭೇಟಿ ನೀಡಿದ ನೆನಪುಗಳನ್ನು ಮೆಲಕು ಹಾಕಿರುವ ಅವರು, ಬಸವೇಶ್ವರ ಕಲಾ, ವಿಜ್ಞಾನ, ವಾಣಿಜ್ಯ ಮಹಾವಿದ್ಯಾಲಯಗಳ ಅಮೃತ ಮಹೋತ್ಸವದಲ್ಲಿ ಕಸ್ತೂರಿ ರಂಗನ್ ಅವರು ಪಾಲ್ಗೊಂಡಿದ್ದರು. ಸಂಘ ಬೆಳೆದು ಬಂದ ಹಾದಿಯನ್ನು ಅವರು ಮುಕ್ತಕಂಠದಿಂದ ಶ್ಲಾಘಿಸಿದ್ದರು. ಬವಿವ ಸಂಘಕ್ಕೆ ಅಂಥ ಮಹನೀಯರು ಭೇಟಿ ನೀಡಿರುವುದು ನಮ್ಮ ಪಾಲಿನ ಸೌಭಾಗ್ಯ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಸ್ತೂರಿ ರಂಗನ್ ಅವರ ನಿಧನಕ್ಕೆ ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ವೈದ್ಯಕೀಯ ಕಾಲೇಜು ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಅಶೋಕ ಸಜ್ಜನ(ಬೇವೂರ), ಕಾಲೇಜುಗಳ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಗುರುಬಸವ ಸೂಳಿಭಾವಿ, ಸಂಘದ ಆಡಳಿತಾಧಿಕಾರಿ ಡಾ.ವಿಜಯಕುಮಾರ ಕಟಗಿಹಳ್ಳಿಮಠ, ಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಎಸ್.ಆರ್.ಮೂಗನೂರಮಠ ಸಂತಾಪ ಸೂಚಿಸಿದ್ದಾರೆ.

# ಗ್ರಾಮಮಟ್ಟದ ಪ್ರಚಾರವೇ ಗ್ಯಾರಂಟಿಗಳ ಯಶಸ್ಸಿಗೆ ಮಾರ್ಗ: ತೆಕ್ಕೆನ್ನವರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಏ.25-ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಹಾಗೂ ಯಶಸ್ವಿಗೊಳಿಸಲು ಮುಖ್ಯ ಮಾರ್ಗವೆಂದರೆ ಗ್ರಾಮಮಟ್ಟದಲ್ಲಿ ಯೋಜನೆಗಳ ಕುರಿತು ಪ್ರಚಾರ ಮಾಡುವುದಾಗಿದೆ ಎಂದು ಬಾಗಲಕೋಟೆ ಜಿಲ್ಲಾ ಗ್ಯಾರಂಟಿ ಯೋಜನೆ ಸಮಿತಿಯ ಅಧ್ಯಕ್ಷ ಎಸ್.ಎಚ್.ತೆಕ್ಕೆನ್ನವರ ಹೇಳಿದರು.

ಜಿಲ್ಲಾ ಪಂಚಾಯತ ಹಳೆಯ ಸಭಾಭವನದಲ್ಲಿ ಶುಕ್ರವಾರ ಜರುಗಿದ ಪಂಚ ಗ್ಯಾರಂಟಿ ಯೋಜನೆ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು. ಗ್ಯಾರಂಟಿ ಯೋಜನೆಯ ಫಲಾನುಭವಿಗಳನ್ನು ಒಟ್ಟುಗೂಡಿಸಿ ಅವರ ಮೂಲಕ ಯೋಜನೆಯ ಉಪಯೋಗ ಹಾಗೂ ದುರುಪಯೋಗಗಳನ್ನು ಕಂಡುಹಿಡಿಯಬಹುದು ಎಂದರು.

ಯುವ ನಿಧಿ ಹಾಗೂ ಗ್ರಹಲಕ್ಷ್ಮಿ ಯೋಜನೆಯ ಫಲಾನುಭವಿಗಳನ್ನು ಗುರುತಿಸಲು ಎಲ್ಲಾ ತಾಲೂಕು ಮಟ್ಟದ ಅಧಿಕಾರಿಗಳಿಂದ ಮಾಹಿತಿಯನ್ನು ಪಡೆದು ಸಮಿತಿಯ ಎಲ್ಲಾ ಸದಸ್ಯರಿಗೆ ನೀಡಲಾಗುವುದು. ಇದರಿಂದ ಫಲಾನುಭವಿಗಳ ಸಂಖ್ಯೆಯನ್ನು ಸುಲಭವಾಗಿ ಗುರುತಿಸಬಹುದಾಗಿದೆ. ಜೊತೆಗೆ ಈ ಯೋಜನೆಯಿಂದ ದೊರೆಯುವ ಅನುಕೂಲ ಹಾಗೂ ಅನಾನುಕೂಲಗಳನ್ನು ತಿಳಿದುಕೊಳ್ಳಲು ಸಹಾಯವಾಗುತ್ತದೆ. ಪರಿಣಾಮವಾಗಿ ಯೋಜನೆಯ ಉತ್ತಮ ಅನುಷ್ಠಾನಕ್ಕೆ ಅವಕಾಶ ಕಲ್ಪಿಸಬಹುದು ಎಂದು ಅವರು ಹೇಳಿದರು.

ಸಮಿತಿಯ ಎಲ್ಲಾ ಸದಸ್ಯರು ಗ್ರಾಮಮಟ್ಟದಲ್ಲಿ ಗ್ಯಾರಂಟಿ ಯೋಜನೆಗಳ ಕುರಿತು ಕಾರ್ಯಕ್ರಮಗಳನ್ನು ರೂಪಿಸಿ ಜನಸಾಮಾನ್ಯರಲ್ಲಿ ಪ್ರಚಾರ ಮಾಡಬೇಕು. ಜನರ ಸಮಸ್ಯೆಗಳನ್ನು ಅರಿತುಕೊಳ್ಳುವುದು ಹಾಗೂ ಅವರ ಅನುಭವಗಳನ್ನು ಸಂಗ್ರಹಿಸುವುದು ಅಗತ್ಯ, ಎಂದು ಅವರು ಸಲಹೆ ನೀಡಿದರು.

ತಾಲೂಕು ಮಟ್ಟದ ಕಾರ್ಯಕ್ರಮಗಳಲ್ಲಿ ತಾಲೂಕು ಅಧಿಕಾರಿಗಳು ಮತ್ತು ಜಿಲ್ಲಾಮಟ್ಟದ ಕಾರ್ಯಕ್ರಮಗಳಲ್ಲಿ ಸಮಿತಿಯ ಅಧ್ಯಕ್ಷರು ಹಾಗೂ ಅಧಿಕಾರಿಗಳು ಭಾಗವಹಿಸಿ ಯೋಜನೆಯ ಬಗ್ಗೆ ಪ್ರಚಾರ ಮಾಡಬೇಕು ಎಂದು ಸಮಿತಿಯ ಸದಸ್ಯರು ಈ ಸಂದರ್ಭದಲ್ಲಿ ಮನವಿ ಮಾಡಿದರಲ್ಲದೇ, ಯೋಜನೆಯ ಫಲಾನುಭವಿಗಳನ್ನು ಗುರುತಿಸಲು ನಮಗೆ ಐದು ಯೋಜನೆಗಳ ಸಂಪೂರ್ಣ ಮಾಹಿತಿಯ ಅಗತ್ಯವಿದೆ. ಆದ್ದರಿಂದ ಮಾಹಿತಿ ಶೀಘ್ರದಲ್ಲಿ ನೀಡಬೇಕು ಎಂದರು.

ಕಾರ್ಯಕ್ರಮದಲ್ಲಿ ಸಮಿತಿಯ ಎಲ್ಲಾ ಸದಸ್ಯರು, ತಾಲೂಕು ಅಧ್ಯಕ್ಷರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಕೊಪ್ಪಳ ಮತ್ತು ಕುಷ್ಟಗಿ ವಸತಿ ಶಾಲೆಗಳ ಪ್ರವೇಶ ಪರೀಕ್ಷೆ : ಹಾಜರಾಗಲು ಸೂಚನೆ

ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ: ಜಿಲ್ಲೆಯ ಕೊಪ್ಪಳ ಮತ್ತು ಕುಷ್ಟಗಿ ತಾಲೂಕಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಎ.ಪಿ.ಜೆ.ಅಬ್ದುಲ್ ಕಲಾಂ ವಸತಿ ಶಾಲೆಗಳಿಗೆ 2025-26ನೇ ಸಾಲಿನ 6ನೇ ತರಗತಿಯ ಪ್ರವೇಶ ಪರೀಕ್ಷೆಗೆ ಹಾಜರಾಗುವಂತೆ ಕೊಪ್ಪಳ ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿ ರವಿ ಪೂಜಾರ ಅವರು ತಿಳಿಸಿದ್ದಾರೆ.

ಈ ಪ್ರವೇಶ ಪರೀಕ್ಷೆಯು ಏಪ್ರಿಲ್ 27 ರಂದು ಜಿಲ್ಲೆಯ ಕೊಪ್ಪಳ ಮತ್ತು ಕುಷ್ಟಗಿ ತಾಲ್ಲೂಕುಗಳಲ್ಲಿ ನಡೆಯಲಿದ್ದು, ಈಗಾಗಲೇ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಪ್ರವೇಶ ಪತ್ರ ವೆಬ್‌ಸೈಟ್‌ಞಣಣಠಿ://ಜಠಟರಠಇ.ಾಟಿ/ಂಜಟ್ಚುಠಟಿ/ಖಣಣಜಜಟ-ಣಉೂಚಟಟಣಬಥಿಇಜಣ ನಲ್ಲಿ ಡೌನ್‌ಲೋಡ್ ಮಾಡಿಕೊಂಡು ಪರೀಕ್ಷಾ ಕೇಂದ್ರಕ್ಕೆ ನಿಗದಿತ ಸಮಯಕ್ಕೆ ಹಾಜರಾಗಬೇಕು.

ಪರೀಕ್ಷಾ ಕೇಂದ್ರಗಳ ವಿವರ: ಕೊಪ್ಪಳದ ಒಟ್ಟು 5 ಪರೀಕ್ಷಾ ಕೇಂದ್ರಗಳಿದ್ದು, ಮೌಲಾನಾ ಅಜಾದ್ ಮಾದರಿ ಶಾಲೆ ದಿಡ್ಡಿಕೇರಿ ಕೊಪ್ಪಳ. ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ತಾಲ್ಲೂಕು ಕ್ರೀಡಾಂಗಣ ಕೊಪ್ಪಳ. ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಟಣಕನಕಲ್ (ಕೊಪ್ಪಳ). ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ತಾಲ್ಲೂಕು ಕ್ರೀಡಾಂಗಣ ಕೊಪ್ಪಳ (ಶಾಲಾ ವಿಭಾಗ). ಲಯನ್ಸ್ ಸ್ವಾಮಿ ವಿವೇಕಾನಂದ ಆಂಗ್ಲ ಮಾಧ್ಯಮ ಶಾಲೆ ಕೊಪ್ಪಳ.

ಕುಷ್ಟಗಿಯ ಒಟ್ಟು 6 ಪರೀಕ್ಷಾ ಕೇಂದ್ರಗಳಿದ್ದು, ಸರ್ಕಾರಿ ಬಾಲಕಿಯರ ಪ್ರೌಢ ಶಾಲೆ ರೇಣುಕಾಚಾರ್ಯ ಕಲ್ಯಾಣ ಮಂಟಪ ಹತ್ತೀರ ಕೊಪ್ಪಳ ರಸ್ತೆ ಕುಷ್ಟಗಿ. ಬುತ್ತಿ ಬಸವೇಶ್ವರ ಪದವಿ ಪೂರ್ವ ಕಾಲೇಜು ಹನಮಸಾಗರ ರಸ್ತೆ ಕುಷ್ಟಗಿ. ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜು ಹನಮಸಾಗರ ರಸ್ತೆ ಕುಷ್ಟಗಿ. ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಬಿ.ಇ.ಓ ಕಛೇರಿ ಹತ್ತೀರ ಕುಷ್ಟಗಿ. ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜು ರೇಣುಕಾಚಾರ್ಯ ಕಲ್ಯಾಣ ಮಂಟಪ ಹತ್ತೀರ ಕೊಪ್ಪಳ ರಸ್ತೆ ಕುಷ್ಟಗಿ. ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಿರೇಬನ್ನಿಗೋಳ ಕುಷ್ಟಗಿ.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಾಗೂ ಕೊಪ್ಪಳ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಕೊಪ್ಪಳ, ಮೌಲಾನಾ ಆಜಾದ್ ಭವನ ಹೊಸಪೇಟೆ ರಸ್ತೆ ಕೊಪ್ಪಳ-583231 ದೂರವಾಣಿ ಸಂಖ್ಯೆ: 8088894549 ಮತ್ತು ಕುಷ್ಟಗಿ ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ದೂರವಾಣಿ ಸಂಖ್ಯೆ: 8861610578 ಗೆ ಸಂಪರ್ಕಿಸಲು ಅಥವಾ ಹತ್ತೀರ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗೆ ಭೇಟಿ ನೀಡಿ, ಮಾಹಿತಿ ಪಡೆಯಬೇಕು ಎಂದು ಕೊಪ್ಪಳ ತಾಲೂಕು ಅಲ್ಪಸಂಖ್ಯಾತರ ಇಲಾಖೆಯ ಅಧಿಕಾರಿ ರವಿ ಪೂಜಾರ ಅವರು ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 14 ಪ್ರವಾಸಿಗರು ಸುರಕ್ಷಿತ ವಾಪಸ್



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಕಾಶ್ಮೀರ ಪ್ರವಾಸಕ್ಕೆ ತೆರಳಿದ್ದ ಗಡಿ ಜಿಲ್ಲೆಯ ಬೀದರ್ ಮತ್ತು ಕಲಬುರಗಿ ಜಿಲ್ಲೆಯ ಪ್ರವಾಸಿಗರು ಸುರಕ್ಷಿತವಾಗಿ ತವರಿಗೆ ಮರಳಿದ್ದಾರೆ.

ತಾಲೂಕಿನ ಭಾತಂಬ್ರಾ ಗ್ರಾಮದ ನಿವಾಸಿಗಳಾದ ಅಶೋಕ ಬಿರಾದಾರ್, ಸಾಧನಾ ಅಶೋಕ ಬಿರಾದಾರ್ ಸೇರಿದಂತೆ ಬೀದರ್ ನ ನಾಲ್ವರು ಮತ್ತು ಕಲಬುರಗಿ ಜಿಲ್ಲೆಯ 10 ಜನರು ಸೇರಿ ಏ.21 ರಂದು ಕಾಶ್ಮೀರ ಪ್ರವಾಸ ಕೈಗೊಂಡಿದ್ದರು.

ಏ.22ರಂದು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಭಯೋತ್ಪಾದಕರು ಪ್ರವಾಸಿಗರ ಮೇಲೆ ದಾಳಿ ನಡೆಸಿದ್ದರು.

ಘಟನೆ ಸಂದರ್ಭದಲ್ಲಿ ಶ್ರೀನಗರದಲ್ಲಿದ್ದ ಈ ಎಲ್ಲ ಪ್ರವಾಸಿಗರು ಆತಂಕಕ್ಕೊಳಗಾಗಿದರು. ತಕ್ಷಣಕ್ಕೆ ತಮ್ಮ ಪ್ರವಾಸ ಸ್ಥಗಿತಗೊಳಿಸಿ ತವರಿಗೆ ಮರಳುವ ನಿರ್ಧಾರ ಕೈಗೊಂಡಿದ್ದರು.

ಪ್ರವಾಸದಲ್ಲಿದ್ದ ತಾಲೂಕಿನ ಅಶೋಕ ಬಿರಾದಾರ್ ಅವರು ತಮ್ಮ ಸ್ನೇಹತರ ಜತೆಗೆ ಮಾತನಾಡಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರನ್ನು ಸಂಪರ್ಕಿಸಿ ತಮ್ಮನ್ನು ಸುರಕ್ಷಿತ ವಾಗಿ ತವರಿಗೆ ಕರೆಸಿಕೊಳ್ಳುವಂತೆ ಮನವಿ ಮಾಡಿದ್ದರು.

ಸಚಿವ ಈಶ್ವರ ಖಂಡ್ರೆ ಅವರು ರಾಜ್ಯದ ಪ್ರತಿನಿಧಿ ಸಚಿವ ಸಂತೋಷ ಲಾಡ್ ಅವರ ಜತೆಗೆ ನಿರಂತರ ಸಂಪರ್ಕದಲ್ಲಿದ್ದು ವಿಶೇಷ ವಿಮಾನದ ಮೂಲಕ ಎಲ್ಲ ಪ್ರವಾಸಿಗರನ್ನು ರಾಜ್ಯಕ್ಕೆ ಸುರಕ್ಷಿತವಾಗಿ ಕರೆಸಿಕೊಂಡಿದ್ದಾರೆ.

ಪ್ರವಾಸಿಗರು ವಿಶೇಷ ವಿಮಾನದ ಮೂಲಕ ಗುರುವಾರ ಬೆಂಗಳೂರಿಗೆ ಸೇಫ್ ಆಗಿ ತಲುಪಿದ್ದಾರೆ.

**ಸಚಿವ ಖಂಡ್ರೆಗೆ ಕೃತಜ್ಞತೆ :**

ರಾಜ್ಯಕ್ಕೆ ವಿಶೇಷ ವಿಮಾನದ ಮೂಲಕ ಸುರಕ್ಷಿತವಾಗಿ ಕರೆಸಿಕೊಳ್ಳಲು ಸಹಕರಿಸಿದ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರನ್ನು ಪ್ರವಾಸಿಗರು ಕೃತಜ್ಞತೆ ಸಲ್ಲಿಸಿದ್ದಾರೆ. ತಾಲೂಕಿನ ಭಾತಂಬ್ರಾ ಗ್ರಾಮದ ಅಶೋಕ ಬಿರಾದಾರ್, ಸಾಧನಾ ಅಶೋಕ ಬಿರಾದಾರ್, ಬೀದರ್‌ನ ರವೀಂದ್ರಕುಮಾರ, ಮಲ್ಲಿಕಾ ಮತ್ತು ಕಲಬುರಗಿ ಜಿಲ್ಲೆಯ ವಿಜಯಕುಮಾರ, ಗುರಣ್ಣ, ಶರಣಮ್ಮ, ಬಸವರಾಜ, ಅನಂತಮ್ಮ, ಸುರೇಶ್, ಅನುರಾಧಾ, ಸಿದ್ರಾಮ, ಭಾರತಿ ಮತ್ತು ಬಿ.ವಿ.ಕುಲಕರ್ಣಿ ಪ್ರವಾಸಕ್ಕೆ ತೆರಳಿದ್ದರು.

ಕಾಶ್ಮೀರಕ್ಕೆ ಸಂಬಂಧಿಕರು, ಸ್ನೇಹಿತರೊಂದಿಗೆ ಪ್ರವಾಸಕ್ಕೆ ತೆರಳಿದ ನಮ್ಮನ್ನು ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಸಂಪರ್ಕಿಸಿ ಸುರಕ್ಷಿತವಾಗಿ ರಾಜ್ಯಕ್ಕೆ ಕರೆಸಿಕೊಂಡಿದ್ದಾರೆ ಅವರನ್ನು ಕೃತಜ್ಞತೆ ಸಲ್ಲಿಸುತ್ತೇವೆ.

**- ಅಶೋಕ ಬಿರಾದಾರ್ ಭಾತಂಬ್ರಾ**

## ಡೆಂಗ್ಯು ಜ್ವರ: ಚಿಕ್ಕ ಮಕ್ಕಳು, ಗರ್ಭಿಣಿಯರು, ವಯೋವೃದ್ಧರು ಕಾಳಜಿ ವಹಿಸಿ: ಡಾ.ಆರ್.ಅಬ್ದುಲ್ಲಾ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಏ.25-ಕೆಲವು ದಿನಗಳಿಂದ ಜಿಲ್ಲೆಯಾದ್ಯಂತ ಸುರಿದ ಅಕಾಲಿಕ ಮಳೆಯಿಂದ ತಗ್ಗು ಗುಂಡಿಗಳು ಸ್ಥಿರಿದಂತೆ ಅಲ್ಲಲ್ಲಿ ನೀರು ನಿಲ್ಲುವ್ಯದರಿಂದ ಡೆಂಗ್ಯು ಹರಡುವ ಈಡಿಸ್ ಇಜಿಪ್ಟ್ ಸೊಳ್ಳೆಯ ಸಚಿತತಿ ಹೆಚ್ಚಾಗುವ್ಯದರಿಂದ ಡೆಂಗ್ಯು ಪ್ರಕರಣಗಳು ಕಂಡು ಬರುವ ಸಾಧ್ಯತೆಗಳಿದ್ದು, ಚಿಕ್ಕ ಮಕ್ಕಳು, ಗರ್ಭಿಣಿಯರು ಹಾಗೂ ವಯೋವೃದ್ಧರು ನಿರ್ಲಕ್ಷ ವಹಿಸದೆ ವೈದ್ಯರಿಂದ ಪರೀಕ್ಷಿಸಿಕೊಳ್ಳಿ ಎಚಿದು ಜಿಲ್ಲಾ ರೋಗ ವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ ಅವರು ಸಾರ್ವಜನಿಕರಲ್ಲಿ ವಿನಚಿತಿಸಿದರು.

ನೀರು ನಿಲ್ಲದಂತೆ ಮಾಡುವ ಜೊತೆಗೆ ಬಳಕೆಗಾಗಿ ನೀರು ತುಂಬುವ ಪರಿಕರಣಗಳನ್ನು ವಾರಕ್ಕೊಮ್ಮೆ ಸ್ವಚ್ಚಗೊಳಿಸಿ ಮತ್ತು ಯಾರಿಗಾದರೂ ಒಚಿದೇ ದಿನ ಜ್ವರ ಕಂಡು ಬಂದರೂ ಸಹ ವೈದ್ಯರ ಬಳಿ ಪರೀಕ್ಷಿಸಿ ಅಗತ್ಯ ಚಿಕಿತ್ಸೆ ಪಡೆಯಿರಿ ಎಚಿದು ತಿಳಿಸಿದರು.

ನಗರದ ಕೌಲ್‌ಬಜಾರ್‌ನ ಕವಾಡಿ ಗಲ್ಲಿಯಲ್ಲಿ ವೈದ್ಯಕೀಯ ತಂಡದೊಂದಿಗೆ ಗುರುವಾರ ಮನೆ ಭೇಟಿ ನಡೆಸಿ ಮಾತನಾಡಿದ ಅವರು, ಸಾಮಾನ್ಯವಾಗಿ ಜ್ವರವನ್ನು ನಾವು ನಿರ್ಲ್ಯಕ್ಷಿಸುತ್ತೇವೆ, ಇಚಿತಹ ಸಚಿದರ್ಭದಲ್ಲಿ ಡೆಂಗ್ಯೂ ಸಂಬಂಧಿತ ಜ್ವರವಾಗಿದ್ದರೆ ರೋಗಿಯ ಪ್ಲೇಟ್‌ಲೆಟ್ಸ್‌ಳ ಶೀಘ್ರ ಕುಸಿಯುವಿಕೆಯಿಚಿದ ಆರೋಗ್ಯ ಸಮಸ್ಯೆ ಎದುರಾಗಿ ರಕ್ತಸ್ರಾವದಂತಹ ಗಂಭಿರ ಸಮಸ್ಯೆ ಎದುರಿಸಬೇಕಾಗಬಹುದು. ಹಾಗಾಗಿ ಯಾರಿಗಾದರೂ 3 ದಿನಗಳ ಕಡಿಮೆಯಾಗದ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗದಲ್ಲಿ ನೋವು, ಮಾಂಸಖಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು ಕಾಣಿಸಿಕೊಂಡಲ್ಲಿ ನಿರ್ಲಕ್ಷಿಸಿದೇ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಗತ್ಯ ಪರೀಕ್ಷೆ ಮಾಡಿಸಿ ವೈದ್ಯರ ಸಲಹೆಯಂತೆ ಲಕ್ಷ್ಮಣಗಳ ಆಧಾರದ ಮೇರೆಗೆ ಚಿಕಿತ್ಸೆ ಪಡೆಯಲು ಕೋರಿದರು.

ಆಶ್ರಯ ಕಾಲೋನಿ ವೈದ್ಯಾಧಿಕಾರಿ ಡಾ.ಕಾಶೀಪ್ರಸಾದ್ ಅವರು ಮಾತನಾಡಿ, ಈಗಾಗಲೇ ಮನೆಗಳಿಗೆ ಭೇಟಿ ನೀಡುವಾಗ ಬಾಟಲ್‌ನಲ್ಲಿ ಲಾರ್ವಾ (ಸೊಳ್ಳೆಯ ಮರಿ) ಸಂಗ್ರಹಿಸಿಕೊಂಡು ಜನತೆಗೆ ಪ್ರಾತ್ಯಕ್ಷಿಕೆಯನ್ನು ನೀಡಿ, ಡ್ರಮ್, ಬ್ಯಾರಲ್, ನೀರಿನ ತೊಟ್ಟಿ, ಕಲ್ಲಿನ ಡೋಣಿ, ಹೂವಿನ ಕುಂಡಲ ಮುಂತಾದ ಪರಿಕರಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಲು ಹಾಗೂ ಮುಚ್ಚಳ ಮುಚ್ಚಿ ಬಟ್ಟೆ ಕಟ್ಟಲು ವಿನಚಿತಿಸಿ, ಬಳಕೆ ಮಾಡದ ನೀರು ಸಂಗ್ರಹಕಗಳಿಗೆ ಕೊಬ್ಬರಿ ಎಣ್ಣೆಯನ್ನು ಹಾಕುವ ಮೂಲಕ ಸೊಳ್ಳೆ ಉತ್ಪತ್ತಿ ತಡೆಯಲು ವಿನಚಿತಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಜಿಲ್ಲಾ ಎನ್‌ವಿಬಿಡಿಸಿಪಿ ಸಲಹೆಗಾರ ಪ್ರತಾಪ್, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ದಾನಕುಮಾರಿ, ಆರೋಗ್ಯ ನಿರೀಕ್ಷಣಾಧಿಕಾರಿ ಮಹಾಲಿಂಗ, ಪ್ರಶಾಂತ್, ಆಶಾ ಕಾರ್ಯಕರ್ತೆ ಸಾವಿತ್ರಿ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

# ಸುಪೋಷಿತ್ ಅಭಿಯಾನ: ಕಿನ್ನಾಳದಲ್ಲಿ ಬೀದಿ ನಾಟಕ ಪ್ರದರ್ಶನ

ಮಲ್ಲಮ್ಮ ನುಡಿ ವಾರ್ತೆ



ಕೊಪ್ಪಳ : ಕೇಂದ್ರ ಸರಕಾರ ಜಾರಿಗೆ ತಂದಿರುವ ಸುಪೋಷಿತ್ ಅಭಿಯಾನ ಕುರಿತು ಜನಸಾಮಾನ್ಯರಿಗೆ ಅರಿವು ಮೂಡಿಸುವ ಬೀದಿ ನಾಟಕ ಪ್ರದರ್ಶನವನ್ನು ಕೇಂದ್ರ ಸಂವಹನ ಇಲಾಖೆ ಬೆಂಗಳೂರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಕೊಪ್ಪಳ ಇವರ ಆಶ್ರಯದಲ್ಲಿ ಕುಷ್ಟಗಿಯ ಜನ ಜಾಗೃತಿ ಕಲಾ ರಂಗ ಸಂಸ್ಥೆ ರಿ ಇವರಿಂದ ಕಿನ್ನಾಳ ಗ್ರಾಮದಲ್ಲಿ ನಡೆಸಲಾಯಿತು.

ಕಾರ್ಯಕ್ರಮವನ್ನು ತಮಟೆ ಬಾರಿಸುವ ಮೂಲಕ ಮಹಿಳಾ ಮೇಲ್ವಿಚಾರಕಿಯರಾದ ಲಕ್ಷ್ಮಿದೇವಿ ರೆಡ್ಡಿ ಅವರು ಚಾಲನೆ ನೀಡಿದರು. ನಂತರ ಮಾತನಾಡಿದ ಅವರು, ಭಾರತ ಸರ್ಕಾರದ ಪ್ರಧಾನ ಮಂತ್ರಿಯವರು ಘೋಷಣೆ ಮಾಡಿದ ಸುಪೋಷಿತ್ ಗ್ರಾಮ ಪಂಚಾಯತ್ ಅಭಿಯಾನ ಯೋಜನೆಯು ಮುಖ್ಯವಾಗಿ ಆ ಪೌಷ್ಟಿಕತೆಯಿಂದ ಬಳಲುತ್ತಿರುವ ಗರ್ಭಿಣಿಯರು ಮಕ್ಕಳು ಬಾಣಂತಿಯರು ಅವರ ಆರೋಗ್ಯ ಸುಧಾರಣೆಗಾಗಿ ಜಾರಿಗೆ ತಂದಿರುವ ಮಹತ್ವವಾದ ಯೋಜನೆ ಆಗಿದೆ ಎಲ್ಲರೂ ಮಾಹಿತಿ ತಿಳಿದು ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಾದ ಮಂಜುನಾಥ ಹುದ್ದಾರ್ ಮತ್ತು ಸಂತೋಷಿ ಮಾತಾ, ರೇಣುಕಾ ಜಾಲಿಹಾಳ್, ಭಾರತಿ ವಾಲ್ಮೀಕಿ, ಗೀತಾ, ಲಕ್ಷ್ಮಿ, ರೇಣುಕಾ ಬಂಡಿ ಇತರೆ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸ್ತ್ರೀ ಶಕ್ತಿ ಗುಂಪಿನ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

ಜಾಗೃತಿ: ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಶರಣಪ್ಪ ವಡಿಗೇರಿ ಅವರ ನೇತೃತ್ವದಲ್ಲಿ ಯೋಜನೆಯ ಕುರಿತು ವಿವಿಧ ಸನ್ನಿವೇಶಗಳು, ಜಾಗೃತಿ ಗೀತೆಗಳು ಮೂಲಕ ಪ್ರದರ್ಶನ ನೀಡಿದ ಬೀದಿ ನಾಟಕವು ಜನಮನ ರಂಜನೆಯೊಂದಿಗೆ ಅರಿವು ಮೂಡಿಸಿ ಪ್ರದರ್ಶನ ನೀಡಿದರು. ಕೊನೆಯಲ್ಲಿ ಗೀತಾ ಹಾದಿಮನಿ ಅವರು ಸರ್ವರಿಗೂ ವಂದಿಸಿದರು.

# ಕೇರಳದ ಬಸವರತ್ನ ಪುರಸ್ಕಾರಕ್ಕೆ ಶತಾಯುಷಿ ಭೀಮಣ್ಣ ಖಂಡ್ರೆ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ/ಭಾಲ್ಕಿ. ಏ. 25 : ಕೇರಳ ರಾಜ್ಯದ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಕೊಡಮಾಡುವ ಅತ್ಯುನ್ನತ ಗೌರವ ಬಸವರತ್ನ ಪುರಸ್ಕಾರಕ್ಕೆ ಮಾಜಿ ಸಾರಿಗೆ ಸಚಿವ, ಲೋಕನಾಯಕ ಶತಾಯುಷಿ ಡಾ. ಭೀಮಣ್ಣ ಖಂಡ್ರೆ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ.



ಕೇರಳದ ತಿರುವನಂತಪುರಂ ಜಿಲ್ಲೆಯ ವಟ್ಟಾಪ್ಪುರದಲ್ಲಿರುವ ವೀರಶೈವ ಭವನದಲ್ಲಿ ಮೇ 4ರಂದು ನಡೆಯಲಿರುವ ಬಸವ ಜಯತಿ ಕಾರ್ಯಕ್ರಮದ ವೇಳೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದ್ದು, ಭೀಮಣ್ಣ ಖಂಡ್ರೆ ಅವರ ಬದಲಿಗೆ ಅವರ ಪುತ್ರ ಅರಣ್ಯ ಸಚಿವ ಈಶ್ವರ ಖಂಡ್ರೆ ಸ್ವೀಕರಿಸಲಿದ್ದಾರೆ ಎಂದು ಕೇರಳ ಮಹಾಸಭಾದ ರಾಜ್ಯ ಘಟಕದ ಅಧ್ಯಕ್ಷ ಭೀನು ಕೆ ಶಂಕರ್ ತಿಳಿಸಿದ್ದಾರೆ.

ಶತಾಯುಷಿ ಭೀಮಣ್ಣ ಖಂಡ್ರೆ ಅವರು ಮಹಾಸಭಾದ ಹಿರಿಯ ನಾಯಕರಷ್ಟೇ ಅಲ್ಲ, ಬದ್ಧತೆಯ ಸಮಾಜ ಸೇವಕರಾಗಿದ್ದಾರೆ ಜೊತೆಗೆ ಮುತ್ಸದ್ದಿ ರಾಜಕಾರಣಿಯಾದ ಅವರು, ಬಸವ ತತ್ವಅನುಯಾಯಿಯಾಗಿದ್ದಾರೆ. ಭೀಮಣ್ಣ ಖಂಡ್ರೆ ಅವರ ಬದುಕು ಮತ್ತು ಕೃತಿ ಮುಂದಿನ ಪೀಳಿಗೆಗೂ ಸ್ಫೂರ್ತಿಯಾಗಿದೆ. ಇಂತಹ ಮಹಾನ್ ನಾಯಕರಿಗೆ ಕೇರಳ ರಾಜ್ಯ ಘಟಕದ ಪರಮೋಚ್ಛ ಪುರಸ್ಕಾರ ಪ್ರದಾನ ಮಾಡಲು ನಿರ್ಧರಿಸಲಾಗಿದೆ ಎಂದೂ ಅವರು ಹೇಳಿದ್ದಾರೆ.

# ಕಲಬುರಗಿ ದಕ್ಷಿಣ ಮತಕ್ಷೇತ್ರದಲ್ಲಿ 34 ಕೋಟಿ ರು ವೆಚ್ಚದಲ್ಲಿ 39 ಕಿಮೀ ಗ್ರಾಮೀಣ ರಸ್ತೆ ನಿರ್ಮಾಣ: ಶಾಸಕ ಅಲ್ಲಂಪ್ರಭು ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ.

ಗ್ರಾಮೀಣ ಭಾಗದ ರಸ್ತೆಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ರೂಪಿಸಿರುವ ಕಲ್ಯಾಣ ಪಥ ಯೋಜನೆಯಡಿಯಲ್ಲಿ ಕಲಬುರಗಿ ದಕ್ಷಿಣ ಮತಕ್ಷೇತ್ರದಲ್ಲಿ ಬರುವ ಹಳ್ಳಿಗಳ ಸಂಪರ್ಕ ರಸ್ತೆ ಅಭಿವೃದ್ಧಿಗೆ ಬದ್ಧ ಎಂದಿರುವ ಶಾಸಕ ಅಲ್ಲಂಪ್ರಭು ಪಾಟೀಲ್ ನಿನ್ನೆ ಏ. 24 ರ ಗುರುವಾರ, ಏ. 25 ರ ಶುಕ್ರವಾರ ನಿರಂತರ ರಸ್ತೆ ನಿರ್ಮಾಣದ 6 ಕಾಮಗರಿಗಳಿಗೆ ಚಾಲನೆ ನೀಡಿದ್ದಾರೆ.

ಕಲ್ಯಾಣ ಪಥ ಯೋಜನೆ ಗ್ರಾಮೀಣ ರಸ್ತೆಗಳ ಸುಧಾರಣೆಗೆ ವರದಾನವಾಗಿದೆ. ಕಲಬುರಗಿ ದಕ್ಷಿಣದಲ್ಲಿ 34 ಕೋಟಿ ರು ವೆಚ್ಚದಲ್ಲಿ 39 ಕಿಮಿ ರಸ್ತೆ ನಿರ್ಮಾಣಕ್ಕೆ ಯೋಜನೆ ರೂಪಿಸಿ ಜಾರಿಗೆ ತರಲಾಗುತ್ತಿದೆ. ಹಳ್ಳಿ ಜನ ಶೀಘ್ರದಲ್ಲೇ ಉತ್ತಮ ಹಾಗೂ ಸುಗಮ ರಸ್ತೆ ಸಂಪರ್ಕ ಹೊಂದಲಿದ್ದಾರೆಂದು ಶಾಸಕ ಅಲ್ಲಂಪ್ರಭು ಹೇಳಿದ್ದಾರೆ.



ಶುಕ್ರವಾರ ತಾಜಸುಲ್ತಾನಪೂರ, ಹುಣಸಿ ಹಡಗೀಲ್ ಹಾಗೂ ಪಟ್ಟಮ ಬಳಿ ರಸ್ತೆ ಕಾಮಗರಿಗಳಿಗೆ ಚಾಲನೆ ನೀಡಿ ಬಹಿರಂಗ ಸಭೆಗಳಲ್ಲಿ ಅವರು ಮಾತನಾಡಿದರು. ತಮ್ಮ ಸರ್ಕಾರ ಪಂಚ ಗ್ಯಾರಂಟಿಗಳ ಜತೆಗೇ ಅಭಿವೃದ್ಧಿಗೂ ಬದ್ಧ ಎಂಬುದಕ್ಕೆ ಕಲ್ಯಣ ಪಥ ಕನ್ನಡಿ ಎಂದರು.


ಇಂದು ಶುಕ್ರವಾರ ಶಾಸಕ ಅಲ್ಲಮಪ್ರಭು ಪಾಟೀಲ್ ರವರು ಇಂದು ಹುಣಸಿಹಡಗಿಲ್ ಗ್ರಾಮದಲ್ಲಿ ಕಲ್ಯಾಣ ಪಥ ಯೋಜನೆಯ ಅಡಿಯಲ್ಲಿ ರೂ. 940.ಲಕ್ಷಗಳ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಹುಣಸಿಹಡಗಿಲ್–ಗೊಬ್ಬುರ ಕೆ. (ವ್ಹಾಯ: ಮೇಳಕುಂದ ಬಿ ಕ್ರಾಸ್, ಮಳನಿ) ರಸ್ತೆ ನಿರ್ಮಾಣ ಕಾಮಗಾರಿಗೆ ಗುದ್ದಲಿ ಪೂಜೆ ನೆರವೇರಿಸಿದರು.

ಅದೇ ರೀತಿಯಲ್ಲಿ ತಾಜಸುಲ್ತಾನಪೂರ ಗ್ರಾಮದಲ್ಲಿ ಕಲ್ಯಾಣ ಪಥ ಯೋಜನೆ ಅಡಿಯಲ್ಲಿ ರೂ.100.ಲಕ್ಷಗಳ ವೆಚ್ಚದಲ್ಲಿ ನಿರ್ಮಾಣವಾಗಲಿರುವ ತಾಜಸುಲ್ತಾನಪೂರ–ಸೈಯದ ಚಿಂಚೋಳಿ ರಸ್ತೆ ನಿರ್ಮಾಣ ಕಾಮಗಾರಿಗೂ ಗುದ್ದಲಿ ಪೂಜೆ ನೆರವೇರಿಸಿದರು.

ಇನ್ನು ರಾಜ್ಯ ಹೆದ್ದಾರಿ ಎಸ್ ಎಚ್–10 ರಿಂದ ಪಟ್ಟಣ ಗ್ರಾಮದ ವರೆಗಿನ 1. 65 ಕೋಟಿ ರು ಮೊತ್ತದಲ್ಲಿ 1. 95 ಕಿಮೀ ರಸ್ತೆ ಕಾಮಗಾರಿಗೆ ಪೂಜೆ ನೆರವೇರಿಸಿದರು.

ಇವೆಲ್ಲ ಸಮರಂಭಗಳಲ್ಲಿ ಹಉಸಿಹಡಗೀಲ್ ಗುಂಡೂರಾವ ಮುತ್ಯಾ, ಬ್ಲಾಕ್ ಕಂಗ್ರೆಸ್ ಅಧ್ಯಕ್ಷ ಲಿಂಗರಾಜ ಕಣ್ಣಿ, ಭೀಮರಾವ ಪಾಟೀಲ್, ಚಂದ್ರಗೌಡ, ವೀರಣ್ಣ ದಬಕಿ, ಅಪ್ಪಾರಾವ ಪಟ್ಟಣ, ಪಿಎಂಜಿಎಸ್‌ವೈ ಇಂಜಿನಿಯರ್ ಖಾದ್ರಿ, ಪ್ರಭು, ಶಾಂತರಾಜ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

# ಮದುವೆ ಆಮಂತ್ರಣ ಪತ್ರಿಕೆಯಲ್ಲಿ ಕನ್ನಡ ಮೆರೆದ ಶಿಕ್ಷಕ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಏ.25: ತಾಲೂಕಿನ ವಡ್ಡರಹಟ್ಟಿ ಗ್ರಾಮದ ಯುವಕನಾಗಿರುವ ಶರಣು ಹನುಮಪ್ಪ ಗೌಡ್ರು ಇವರು ತಮ್ಮ ಮದುವೆ ಆಮಂತ್ರಣ ಪತ್ರಿಕೆಯಲ್ಲಿ ಕನ್ನಡವನ್ನು ಮೆರೆದಿದ್ದಾರೆ ಮೂಲತಃ ವಡ್ರಟ್ಟಿ ಗ್ರಾಮದವರಾಗಿರುವ ಶರಣಪ್ಪ ಶಿಕ್ಷಕ ಕಡುಬಡತನದಲ್ಲಿ ಬೆಳೆದ ವ್ಯಕ್ತಿ ಕೃಷಿ ಕುಟುಂಬದಲ್ಲಿ ಜನಿಸಿರುವ ಇವರು ಕಷ್ಟಪಟ್ಟು ಬಿಎ ಪದವಿಯನ್ನು ಇರ್ಕಲ್ಗಡ ಗ್ರಾಮದಲ್ಲಿ ಮುಗಿಸಿ ಬಿ ಎಡ್ ಪದವಿಯನ್ನು ಪಡೆದು 2020 ರಲ್ಲಿ ಸಿರುಗುಪ್ಪ ತಾಲೂಕಿನ ಬಲಕುಂದಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಆಯ್ಕೆಯಾಗಿರುತ್ತಾರೆ ಬಲಕುಂದಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳ ಅಚ್ಚುಮೆಚ್ಚಿನ ಶಿಕ್ಷಕನಾಗಿ ನಾಲ್ಕು ವರ್ಷ ಸೇವೆ ಸಲ್ಲಿಸಿ ಗಂಗಾವತಿ ತಾಲೂಕಿನ ಹಣವಾಳ ಗ್ರಾಮ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ವರ್ಗಾವಣೆಗೊಂಡಿರುತ್ತಾರೆ ಅಪ್ಪಟ ಕನ್ನಡ ಅಭಿಮಾನಿಯಾಗಿರುವ ಶರಣು ಶಿಕ್ಷಕ ತಮ್ಮ ಮದುವೆ ಆಮಂತ್ರಣದ ಪತ್ರದಲ್ಲಿ ಸರ್ಕಾರಿ ಶಾಲೆಗಳೆಂದರೆ ತಾತ್ಸಾರವೇಕೆ ಖಾಸಗಿ ಶಾಲೆಗಳ ಮೇಲೆ ವ್ಯಾಮೋಹ ಬೇಕೆ ಎಂಬ ಬರಹದಿಂದ ಬನ್ನಿ ಸರಕಾರಿ ಶಾಲೆಗೆ ಸೇರಿಸೋಣ ಇದು ನಮ್ಮ ಶಾಲೆ ನಮ್ಮೆಲ್ಲರ ಶಾಲೆ ಎಂದು ಸರ್ಕಾರಿ ಶಾಲೆಗಳ ಮೇಲೆ ಇರುವ ಗೌರವವನ್ನು ಮೇಲೆತ್ತರಕ್ಕೆ ಬೆಳೆಸುತ್ತಿರುವ ಶಿಕ್ಷಕ ಎಂದು ಜನರ ಬಾಯಲ್ಲಿ ಮಾತನಾಡಿಕೊಳ್ಳುತ್ತಿದ್ದಾರೆ ಸಿರಿಗನ್ನಡಂ ಗೆಲ್ಗೆ ಸಿರಿಗನ್ನಡಂ ಬಾಳ್ಗೆ ಎಂಬ ನಾಣ್ನುಡಿಯಿಂದ ಮದುವೆ ಆಮಂತ್ರಣ ಪತ್ರಿಕೆ ರೆಡಿಯಾಗಿದೆ ಈಗಿನ ಕಾಲದಲ್ಲಿ ರಾಜಕಾರಣಿಗಳ ಹೆಸರು ಉದ್ಯಮಿಗಳ ಹೆಸರು ಹಾಕಿಸಿ ಮದುವೆ ಆಮಂತ್ರಣ ಪತ್ರಿಕೆಯನ್ನು ಮುದ್ರಿಸುವುದನ್ನು ಕಂಡಿದ್ದೇವೆ ಶಿಕ್ಷಕರು ತಮ್ಮ ಮದುವೆ ಆಮಂತ್ರಣ ಪತ್ರವನ್ನು ಅಪ್ಪಟ ಕನ್ನಡದಲ್ಲಿ ಮತ್ತು ಕರ್ನಾಟಕದ ನಕ್ಷೆ ಮತ್ತು ಕುವೆಂಪುರವರ ನುಡಿಗಳನ್ನು ಹಾಕಿ ಕುವೆಂಪುರವರ ಭಾವಚಿತ್ರವನ್ನು ಹಾಕಿ ಕನ್ನಡದ ಮೇಲಿರುವ ಅಭಿಮಾನವನ್ನು ಎತ್ತಿ ಹಿಡಿದಿರುವ ಶರಣಪ್ಪ ಶಿಕ್ಷಕರಿಗೆ ಅಭಿನಂದನೆಗಳ ಮಹಾಪೂರವೇ ಹರಿದು ಬರುತ್ತಿದೆ.

# ಜಮೀನು ಮಾರಾಟ ಪ್ರಕರಣ ನಕಲಿ ದಾಖಲೆ ಸೃಷ್ಟಿಸಿ ವಂಚನೆ : ವಂಚಕರ ವಿರುದ್ಧ ಪ್ರಕರಣ ದಾಖಲು

ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ (ಗ್ರಾ):ಏ.25: ತಾಲೂಕಿನ ಕುಮಾರ್ ಚಿಂಚೋಳಿ ಗ್ರಾಮದ ಜಾವೀದ್ ಸೈಲಾನಿಮಿಯಾ ಮತ್ತು ಅವರ ಸೊಹೋದರ ಶಾಕೀರಮಿಯಾ ಸೈಲಾನಿಮಿಯಾ ಇವರುಗಳು ಮುಂಬಯಿ ಮೂಲದ ಕಿಶೋರ್ ಬಿಕುಭಾಯಿ ದಲಾಲ ಅವರಿಗೆ ಜಮೀನು ಮಾರಾಟ ಮಾಡಿ, ಮತ್ತೆ ಅದೇ ಜಮೀನು ತಮ್ಮ ಹೆಸರಿನ ಮೇಲೆ ನೋಂದಣಿ ಮಾಡಿಕೊಂಡ ಘಟನೆ ಜರುಗಿದೆ.

ತಾಲೂಕಿನ ಕುಮಾರ್ ಚಿಂಚೋಳಿ ಗ್ರಾಮದಲ್ಲಿ 1998ರಲ್ಲಿ ಕಿಶೋರ್ ಎಂಬುವರು ಗ್ರಾಮದ ಸರ್ವೇ ನಂಬರ್ 129 3 ಎಕರೆ 31 ಗುಂಟೆ ಜಮೀನು ಖರೀದಿ ಮಾಡಿದ್ದರು. ಹುಮನಾಬಾದ ನೋಂದಣಿ ಕಚೇರಿಯಲ್ಲಿ ಹೆಸರು ನೊಂದಣಿ ಮಾಡಲಾಯಿತ್ತು. 2022ರಲ್ಲಿ ಶಾಕೀರಮಿಯಾ ಸೈಲಾನಿಮಿಯಾ ಇವರು ನಕಲಿ ದಾಖಲಾತಿಗಳನ್ನು ಸೃಷ್ಟಿಸಿ ತನ್ನ ಹೆಸರಿಗೆ ಶಾಕೀರಾಮಿಯಾ ಹಕ್ಕು ಬದಲಾವಣೆ ಮಾಡಿಕೊಂಡಿದ್ದ ಈ ಸಂಬಂಧ ಕಿಶೋರ್ ರವರು ಹುಮನಾಬಾದ ತಹಸೀಲ್ ಕಚೇರಿಯಲ್ಲಿ ದೂರು ಸಲ್ಲಿಸಿದ್ದರು. ಬಸವಕಲ್ಯಾಣ ಸಹಾಯಕ ಆಯುಕ್ತರು ಈ ಜಮೀನನ್ನು ತನ್ನ ಹೆಸರಿನ ಮೇಲೆ ಮಾಡಿದ್ದಾರೆ. 16–03–2024ರಲ್ಲಿ ಮತ್ತೆ ಸೈಯದ್ ಜಾಕೀರಅಲಿ ಸೈಯದ್ ಲಿಯಾಕತ ಅಲಿ ಅವರಿಗೆ ಮಾರಾಟ ಮಾಡಿದ್ದೇನೆ. ಉಪ ನೊಂದಣಿ ಕಚೇರಿಯಲ್ಲಿ ನೊಂದಣಿ ಮಾಡಿದ್ದೇನೆ. ಸೈಯದ್ ಜಾಕೀರ್ ಅಲಿ ಪಹಣಿ ಆದ ಮೇಲೆ ಪಹಣಿ ಮೇಲೆ ಖಟಕಚಿಂಚೋಳಿ ಎಸ್.ಬಿ.ಐ. ಬ್ಯಾಂಕಿನಿಂದ 7ಲಕ್ಷ ರೂ. ಹಂದಿಕೇರಾ ಪಿಕೆಪಿಎಸ್ ಬ್ಯಾಂಕಿನಿಂದ 10 ಸಾವಿರ ಸಾಲ ಪಡೆದಿದ್ದು ಪಹಣಿಯಲ್ಲಿ ಬಂದಿದೆ, ಬ್ಯಾಂಕಿನಲ್ಲಿ ಈ ಬಗ್ಗೆ ವಿಚಾರಣೆ ಮಾಡಿದಾಗ ಜಾಕಿರ ಮಿಯಾ ಮೋಸ ಮಾಡುವ ಉದ್ದೇಶದಿಂದ ಅಣ್ಣನ ಭಾವಚಿತ್ರ ಅಂಟಿಸಿ ಕಿಶೋರ ಎಂದು ಸಹಿ ಮಾಡಿದ್ದಾನೆ. ಈ ಬಗ್ಗೆ 10–04–2025ರಂದು ಜಾವೀದ ಶೈಲಾನಿಮಿಯಾ ಮತ್ತು ಅವರ ತಮ್ಮ ಶಾಕೀರಮಿಯಾ ಶೈಲಾನಿಮಿಯಾ ಇವರ ವಿರುದ್ಧ ಹುಮನಾಬಾದ ಪೊಲೀಸ್ ಠಾಣೆಯಲ್ಲಿ ಕಿಶೋರ್ ದಲಾಲ್ ದೂರು ಸಲ್ಲಿಸಿದ್ದಾರೆ. ಕಲಂ 419,420,468,470 ಜೊತೆ 34 ಐಪಿಸಿ ಅಡಿಯಲ್ಲಿ ಹುಮನಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ತನಿಖೆ ಮುಂದುವರೆದಿದೆ.

# ವ್ಯವಸ್ಥಿತವಾಗಿ ರಾಜ್ಯ ಸರ್ಕಾರಿ ನೌಕರರ ದಿನಾಚರಣೆಗೆ ನಿರ್ಧಾರ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ ಏ.25 : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ರಾಜ್ಯ ಸರ್ಕಾರಿ ನೌಕರರ ಸಂಘ ಇವರ ಸಹಯೋಗದಲ್ಲಿ ನಗರದಲ್ಲಿ

ಇದೇ ಏಪ್ರಿಲ್ 29 ರಂದು ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ ಅರ್ಥಪೂರ್ಣವಾಗಿ ಹಾಗೂ ಅಚ್ಚುಕಟ್ಟಾಗಿ ಹಮ್ಮಿಕೊಳ್ಳಲು ನಿರ್ಧರಿಸಲಾಗಿದೆ.



ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ರಾಜ್ಯ ಸರ್ಕಾರಿ ನೌಕರರ ದಿನಾಚರಣೆ ಹಾಗೂ ಸರ್ವೋತ್ತಮ ಸೇವಾ ಪ್ರಶಸ್ತಿ ವಿತರಣಾ ಸಮಾರಂಭದ ಹಮ್ಮಿಕೊಳ್ಳುವ ಕುರಿತು ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಇದೇ ಏಪ್ರಿಲ್ 29 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಪದವಿ ಕಾಲೇಜು ಸಭಾಂಗಣದಲ್ಲಿ ಹಮ್ಮಿಕೊಳ್ಳಲು ನಿರ್ಧರಿಸಲಾಗಿದ್ದು, ಅವಶ್ಯಕ ಸಿದ್ಧತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಅಂದು ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ಕಾರ್ಯಕ್ರಮ ಉದ್ಘಾಟಿಸುವರು. ಅದರಂತೆ ಶಿಷ್ಟಾಚಾರದಂತೆ ಇತರ ಅತಿಥಿ ಗಣ್ಯರನ್ನು ಆಹ್ವಾನಿಸಲು, ಆಹ್ವಾನ ಪತ್ರಿಕೆ, ವೇದಿಕೆ ಸಿದ್ದತೆ. ಪ್ರಶಸ್ತಿ ಪುರಸ್ಕೃತರಿಗೆ ಸನ್ಮಾನಕ್ಕೆ ಸಿದ್ದತೆ ಮಾಡಿಕೊಳ್ಳುವಂತೆ ಹಾಗೂ ನುರಿತ ಉಪನ್ಯಾಸಕರನ್ನು ಆಹ್ವಾನಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಈ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ಕಡ್ಡಾಯವಾಗಿ ಈ ಕಾರ್ಯಕ್ರಮದಲ್ಲಿ ಹಾಜರಿರಬೇಕು. ಸೂಕ್ತ ಪೊಲೀಸ್ ಬಂದೋಬಸ್ತ್, ಕುಡಿಯುವ ನೀರಿನ ವ್ಯವಸ್ಥೆ, ಸ್ವಚ್ಛತೆ ಸೇರಿದಂತೆ ಇನ್ನಿತರ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ

ಮಾಡಲು ಅವರು ಸೂಚಿಸಿದರು. ಎಲ್ಲ ಸಿದ್ಧತೆ ವ್ಯವಸ್ಥಿತವಾಗಿ ಮಾಡಲು ವೇದಿಕೆ, ಊಟೋಪಹಾರ ಹಾಗೂ ಸನ್ಮಾನಕ್ಕೆ ವಿವಿಧ ಅಧಿಕಾರಿಗಳನ್ನು ಒಳಗೊಂಡ ಸಮಿತಿ ರಚಿಸಲು ನಿರ್ಧರಿಸಲಾಯಿತು.

ಸಭೆಯಲ್ಲಿ ಡಿವೈಎಸ್ಪಿ ಅರುಣಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವೀರಣ್ಣಗೌಡ, ರಾಜ್ಯ ಸರ್ಕಾರಿ ನೌಕರರ ಸಂಘ,ಜಿಲ್ಲಾ ಘಟಕ, ಅಧ್ಯಕ್ಷ ರಾಯಪ್ಪಜಿ.ಹುಡೆದ, ಯುವ ಜನಸೇವಾ ಹಾಗೂ ಕ್ರೀಡಾಧಿಕಾರಿ ರಾಜು ಬಾವಿಹಳ್ಳಿ, ಡಿಡಿಪಿಐ ಶ್ರೀ ಮುಧೋಳ ಸೇರಿದಂತೆ

ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಪಾಕಿಸ್ತಾನ ಧ್ವಜ ರಸ್ತೆಗೆ ಅಂಟಿಸಿದ 6 ಜನ ವಶಕ್ಕೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಏ. 25: ಪಹಲ್ಗಾಮ್ ಪೈಶಾಚಿಕ ಕೃತ್ಯ ಖಂಡಿಸಿ, ನಗರದ ಜಗತ್ ವೃತ್ತ ಸೇರಿದಂತೆ ಇತರ ಪ್ರಮುಖ ರಸ್ತೆಗಳ ಮೇಲೆ ಪಾಕಿಸ್ತಾನ್ ಧ್ವಜದ ಸ್ಟಿಕರ್‌ಗಳನ್ನು ಅಂಟಿಸಿದ 6 ಜನ ಭಜರಂಗದಳದ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿದ ಹತ್ಯಾಕಾಂಡ ಖಂಡಿಸಿ ಇಂದು ಭಜರಂಗದಳದವರು ಪ್ರತಿಭಟನೆ ಹಮ್ಮಿಕೊಂಡಿದ್ದರು.

ಘಟನಾ ಸ್ಥಳಕ್ಕೆ ಭೇಟಿ ನೀಡಿದ ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ ಅವರು ಮಾತನಾಡಿ, ಪ್ರತಿಭಟನೆ ಮಾಡುವದು ಪ್ರತಿಯೊಬ್ಬ ನಾಗರಿಕರ ಹಕ್ಕು. ಆದರೆ ಪಾಕಿಸ್ತಾನದ ಧ್ವಜ ನೆಲಕ್ಕೆ ಅಂಟಿಸುವ ಕುರಿತು ಭಜರಂಗದಳ ಸಂಘಟನೆಯವರು ಅನುಮತಿ ಪಡೆದಿರಲಿಲ್ಲ. ಅಲ್ಲದೇ ಇದರಿಂದ ಸಾರ್ವಜನಿಕ ಸಂಚಾರಿ ವ್ಯವಸ್ಥೆಗೆ ತೊಂದರೆ ಯ ಸಾಧ್ಯತೆ ಹಾಗೂ ಮುಂಜಾಗ್ರತೆ ಕ್ರಮವಾಗಿ 6 ಜನರನ್ನು ವಶಕ್ಕೆ ಪಡೆಯಲಾಗಿದೆ. ಯಾವುದೇ ಪ್ರಕರಣ ದಾಖಲಾಗಿಲ್ಲ ಎಂದು ತಿಳಿಸಿದರು.

ರಸ್ತೆ, ಸಾರ್ವಜನಿಕ ಶೌಚಾಲಯ ಗೋಡೆಗಳಿಗೆ ಅಂಟಿಸಿದ ಪಾಕ್ ಧ್ವಜದ ಸ್ಟಿಕರ್ ಗಳನ್ನು ಪೊಲೀಸರು ತೆರವುಗೊಳಿಸಿದ್ದಾರೆ.

# ಅಕ್ರಮ ನಿವಾಸಿಗಳನ್ನು ಗುರುತಿಸಿ ಗಡಿ ಪಾರು ಮಾಡಿ:ಪರಂ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಏ.25:ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಇತ್ತೀಚೆಗೆ ನಡೆದ ಭಯೋತ್ಪಾದಕ ದಾಳಿಯಲ್ಲಿ ಅಮಾಯಕ ಪ್ರವಾಸಿಗರನ್ನು ಕೊಂದ ಭಯೋತ್ಪಾದಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಗೃಹ ಸಚಿವ ಜಿ ಪರಮೇಶ್ವರ ಶುಕ್ರವಾರ ಕರೆ ನೀಡಿದ್ದು, ಅಕ್ರಮ ನಿವಾಸಿಗಳನ್ನು ಗುರುತಿಸಿ ಗಡೀಪಾರು ಮಾಡಬೇಕೆಂದು ಒತ್ತಾಯಿಸಿದ್ದಾರೆ. ಸುದ್ದಿಸಂಸ್ಥೆ ಎಎನ್‌ಐ ಜೊತೆ ಮಾತನಾಡಿದ ಅವರು, 'ಭಯೋತ್ಪಾದಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಇಲ್ಲಿ ಅಕ್ರಮವಾಗಿ ವಾಸಿಸುತ್ತಿರುವವರ ಮೇಲೆ ನಾವು ನಿಗಾ ಇಡಬೇಕು. ಅವರೆಲ್ಲರನ್ನೂ ವಾಪಸ್ ಕಳುಹಿಸಬೇಕು' ಎಂದರು.

ಕೇಂದ್ರ ಸರ್ಕಾರಕ್ಕೆ ಬೆಂಬಲ ವ್ಯಕ್ತಪಡಿಸಿದ ಪರಮೇಶ್ವರ್, 'ಕೇಂದ್ರ ಸರ್ಕಾರದ ಗುಪ್ತಚರ ಅಧಿಕಾರಿಗಳು ಈಗಾಗಲೇ ಬೆಂಗಳೂರಿನಲ್ಲಿದ್ದಾರೆ. ಯಾವುದೇ ಸ್ಲೀಪರ್ ಸೆಲ್‌ಗಳನ್ನು (ಗುಪ್ತ ಭಯೋತ್ಪಾದಕ ಗುಂಪುಗಳು) ಪತ್ತೆಹಚ್ಚಿದರೆ, ರಾಷ್ಟ್ರೀಯ ಭದ್ರತೆಯನ್ನು



ಖಾತರಿಪಡಿಸುವ ಸಲುವಾಗಿ ನಾವು ಆ ಮಾಹಿತಿಯನ್ನು ಕೇಂದ್ರ ಸರ್ಕಾರದೊಂದಿಗೆ ತಕ್ಷಣವೇ ಹಂಚಿಕೊಳ್ಳುತ್ತೇವೆ' ಎಂದು ಹೇಳಿದರು.

ಗುರುವಾರ, ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಬೆಂಗಳೂರಿನ ಮತ್ತಿಕೆರೆಯಲ್ಲಿರುವ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಬಲಿಯಾದ ಭರತ್ ಭೂಷಣ್ ಅವರ ನಿವಾಸಕ್ಕೆ ಭೇಟಿ ನೀಡಿ ಅಂತಿಮ ನಮನ ಸಲ್ಲಿಸಿದರು. ರಾಜ್ಯಪಾಲರು ದುಃಖಿತ ಕುಟುಂಬಕ್ಕೆ ಸಾಂತ್ವನ ಹೇಳಿದರು. ಕುಟುಂಬದ ಸದಸ್ಯರೊಂದಿಗೆ ಮಾತುಕತೆ ನಡೆಸಿದ ಅವರು, ನಷ್ಟದ ಸಮಯದಲ್ಲಿ ಕುಟುಂಬದೊಂದಿಗೆ ಇರುವುದಾಗಿ ತಿಳಿಸಿದರು.

ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಭಯೋತ್ಪಾದಕ ದಾಳಿಯನ್ನು ರಾಜ್ಯಪಾಲ ಗೆಹ್ಲೋಟ್ ತೀವ್ರವಾಗಿ ಖಂಡಿಸಿದರು. ಭಾರತ ಸರ್ಕಾರವು ಈ ಘಟನೆಯನ್ನು ಅತ್ಯಂತ ಗಂಭೀರವಾಗಿ ಪರಿಗಣಿಸುತ್ತಿದೆ ಎಂದು ಅವರು ಒತ್ತಿ ಹೇಳಿದರು.

# ಪೋಪ್ ಫ್ರಾನ್ಸಿಸ್ ನಿಧನದ ಗೌರವಾರ್ಥವಾಗಿ ಇಂದು ರಾಜ್ಯಾದ್ಯಂತ ಶೋಕಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಏ. 25 :ಪೋಪ್ ಫ್ರಾನ್ಸಿಸ್ ಅವರು ಏಪ್ರಿಲ್ 21 ರಂದು ನಿಧನ ಹೊಂದಿದ್ದು, ಗಣ್ಯರ ಅಂತ್ಯಕ್ರಿಯೆಯನ್ನು ಏಪ್ರಿಲ್ 26 ರಂದು ನಡೆಸಲಾಗುತ್ತಿದೆ. ದಿವಂಗತರ ಗೌರವಾರ್ಥವಾಗಿ ಏಪ್ರಿಲ್ 26 ರಂದು ರಾಜ್ಯಾದ್ಯಂತ ಶೋಕಾಚರಣೆಯನ್ನು ಆಚರಿಸಲಾಗುವುದು.

ಈ ಅವಧಿಯಲ್ಲಿ ಯಾವುದೇ ಅಧಿಕೃತ ಮನೋರಂಜನಾ ಕಾರ್ಯಕ್ರಮಗಳನ್ನು ನಿಷೇಧಿಸಲಾಗಿದೆ ಮತ್ತು ನಿಯತವಾಗಿ ಹಾರಸಲ್ಪಡುವ ಎಲ್ಲಾ ಕಟ್ಟಡಗಳ ಮೇಲೆ ರಾಷ್ಟ್ರ ಧ್ವಜವನ್ನು ಅರ್ಧ ಮಟ್ಟದಲ್ಲಿ ಹಾರಿಸಲಾಗುವುದು

ಎಂದು ರಾಜ್ಯ ಶಿಷ್ಠಾಚಾರ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ

ಇಲಾಖೆಯ ಸರ್ಕಾರದ ಉಪಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫಿಸಿಯೋಥೆರಪಿ ಕೋರ್ಸ್‌ಗಳಿಗೆ ಈಗ ನೀಟ್ ಕಡ್ಡಾಯ : ಡಾ.ಶರಣಪ್ರಕಾಶ್ ಪಾಟೀಲ್

ಬೆಂಗಳೂರು:ಏ.25:ಫಿಸಿಯೋಥೆರಪಿ ಕೋರ್ಸ್‌ಗಳಿಗೆ ಪ್ರವೇಶ ಪಡೆಯುವುದು ಈಗ ನೀಟ್ ವ್ಯಾಪ್ತಿಗೆ ಬರಲಿದೆ. ಇದು ಪ್ರಮಾಣೀಕೃತ ವೈದ್ಯಕೀಯ ಶಿಕ್ಷಣದತ್ತ ರಾಷ್ಟ್ರೀಯ ನಡೆಗೆ ಪೂರಕವಾಗಿರುತ್ತದೆ. ಸಾಮರ್ಥ್ಯ ಆಧಾರಿತ ಕಲಿಕೆ ಮತ್ತು ಹೆಚ್ಚುವರಿ ಕ್ಲಿನಿಕಲ್ ಮಾನ್ಯತೆಗಾಗಿ ಕೋರ್ಸ್ ಅವಧಿಯನ್ನು ಐದು ವರ್ಷಗಳಿಗೆ ವಿಸ್ತರಿಸಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯ ಅಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ತಿಳಿಸಿದರು. ಬೆಂಗಳೂರು ಅರಮನೆ ಮೈದಾನದಲ್ಲಿ ನಡೆದ ಫಿಸಿಯೋಥೆರಪಿಯ ಅಂತಾರಾಷ್ಟ್ರೀಯ ಸಮ್ಮೇಳನವಾದ ಕರ್ನಾಟಕ ಫಿಸಿಯೋಕಾನ್–25 ಉದ್ಘಾಟನಾ ಸಮಾರಂಭದಲ್ಲಿ ಭಾಷಣ ಮಾಡಿದ ಅವರು, ಫಿಸಿಯೋಥೆರಪಿ ಕೋರ್ಸ್‌ಗಳ ಪ್ರವೇಶವನ್ನು ನೀಟ್ ವ್ಯಾಪ್ತಿಗೆ ಸೇರಿಸಲು ರಾಜ್ಯ ಸರ್ಕಾರದ ಬೆಂಬಲವಿದೆ. ಶೈಕ್ಷಣಿಕ ಗುಣಮಟ್ಟ ಮತ್ತು ವೃತ್ತಿಪರ ಮಾನದಂಡಗಳನ್ನು ಹೆಚ್ಚಿಸುವ ನೀಟ್ ಅಡಿಯಲ್ಲಿ ಭೌತಚಿಕಿತ್ಸೆಯ ಕೋರ್ಸ್‌ಗಳ ಏಕೀಕರಣವನ್ನು ನಾವು ಸ್ವಾಗತಿಸುತ್ತೇವೆ ಎಂದು ಹೇಳಿದರು. ಹೆರಿಗೆಯಿಂದ ವೃದ್ಧರ ಆರೈಕೆಯವರೆಗೆ, ಆರೋಗ್ಯ ರಕ್ಷಣೆಯಲ್ಲಿ ಭೌತಚಿಕಿತ್ಸಕರು ಪ್ರಮುಖ ಪಾತ್ರ ವಹಿಸುತ್ತಾರೆ. ಭೌತಚಿಕಿತ್ಸಕರು ನರ ಮತ್ತು ಮೂಳೆಚಿಕಿತ್ಸೆ ಪುನರ್ ಆರೈಕೆ, ಹೃದಯ ಶ್ವಾಸಕೋಶ ಆರೈಕೆ, ಮಕ್ಕಳ ಚಿಕಿತ್ಸೆ, ಅಂಗವೈಕಲ್ಯ ಚಿಕಿತ್ಸೆ, ಫಿಟ್ನೆಸ್ ಮತ್ತು ಸಮುದಾಯ ಆಧಾರಿತ



ಆರೈಕೆಗೆ ಗಣನೀಯ ಕೊಡುಗೆ ನೀಡುತ್ತಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ತರಬೇತಿ ಪಡೆದ ವೃತ್ತಿಪರರಿಗೆ ದೇಶೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಬೇಡಿಕೆ ಇದೆ. ಇದನ್ನು ಪೂರೈಸಲು ಹೆಚ್ಚಿನ ಸರ್ಕಾರಿ ಕಾಲೇಜುಗಳಲ್ಲಿ ಭೌತಚಿಕಿತ್ಸೆಯ ಕೋರ್ಸ್‌ಗಳನ್ನು ಪರಿಚಯಿಸುವ ಚಿಂತನೆ ಇದೆ ಎಂದರು.

ಇದೇ ವೇಳೆ ರಾಷ್ಟ್ರೀಯ ಅಲೈಡ್ & ಹೆಲ್ತ್ ಪ್ರೊಫೆಷನಲ್ಸ್ ಆಯೋಗದ ಅಧ್ಯಕ್ಷ ಡಾ. ಯಜ್ಞ ಶುಕ್ಲಾ ಮಾತನಾಡಿ, ಭೌತಚಿಕಿತ್ಸೆಯ ಶಿಕ್ಷಣದಲ್ಲಿ ಒಂದು ರಾಷ್ಟ್ರ, ಒಂದು ಪಠ್ಯಕ್ರಮ ಉಪಕ್ರಮವನ್ನು ಪರಿಚಯಿಸಲು ಆಯೋಗ ಚಿಂತನೆ ನಡೆಸಿದೆ. ಪಠ್ಯಕ್ರಮ ಸುಧಾರಣೆಯ ಮೂಲಕ ವಿದ್ಯಾರ್ಥಿಗಳು ಮತ್ತು ವೈದ್ಯರಿಗೆ ವಿಶೇಷ ಪ್ರಯೋಜನಗಳೊಂದಿಗೆ ವೃತ್ತಿಯನ್ನು ಉನ್ನತೀಕರಿಸುವ ಮಾನದಂಡವನ್ನು ರೂಪಿಸಲಾಗುತ್ತಿದೆ ಎಂದು ತಿಳಿಸಿದರು.

ಸಮ್ಮೇಳನದಲ್ಲಿ ಇಸ್ರೇಲ್, ಆಸ್ಟ್ರೇಲಿಯಾ ಮತ್ತು ನೇಪಾಳದ ಭಾಷಣಕಾರರು, ಜಾಗತಿಕ ತಜ್ಞರು ಹಾಗೂ ಹತ್ತು ಸಾವಿರಕ್ಕೂ ಹೆಚ್ಚು ಮಂದಿ ಭಾಗವಹಿಸಿದ್ದರು, 50 ರಾಷ್ಟ್ರೀಯ ತಜ್ಞರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ 800ಕ್ಕೂ ಹೆಚ್ಚು ಸಂಶೋಧನಾ ಪ್ರಬಂಧಗಳನ್ನು ಮಂಡಿಸಲಾಯಿತು. ವಿಧಾನಸಭೆಯ ಸ್ಪೀಕರ್ ಯು.ಟಿ. ಖಾದರ್ ಫರೀದ್, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಕುಲಪತಿ ಡಾ. ಭಗವಾನ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಾಸೀರ್ ಅಹ್ಮದ್ ಉಪಸ್ಥಿತರಿದ್ದರು.

# ಮಾಳಿಗೆ ಮೇಲೆ ಮಲಗಿದ್ದಾಗ ಮನೆ ಕಳವು

ಕಲಬುರಗಿ,ಏ.25:ಬೇಸಿಗೆ ಕಾರಣಕ್ಕೆ ಮನೆ ಮಾಳಿಗೆ ಮೇಲೆ ಮಲಗಿದ್ದಾಗ ಕಳ್ಳರು ಮನೆ ಬೀಗ ಮುರಿದು 5.27 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ನಗರದ ಸಾಯಿ ಮಂದಿರ ಹತ್ತಿರದ ಸಂಗಮೇಶ್ವರ ಲೇಔ???ನಲ್ಲಿ ನಡೆದಿದೆ. ಚಿದಾನಂದ ಬುಳ್ಳಾ ಎಂಬುವವರ ಮನೆ ಬೀಗ ಮುರಿದು 4 ಲಕ್ಷ ನಗದು, 1 ಲಕ್ಷ ರೂ.ಮೌಲ್ಯದ 20 ಗ್ರಾಂ.ಬಂಗಾರದ ಲಾಕೆಟ್, 10 ಸಾವಿರ ರೂ.ಮೌಲ್ಯದ 2 ಗ್ರಾಂ.ಬಂಗಾರದ ಮುರು, 500 ರೂ.ಮೌಲ್ಯದ 10 ಗ್ರಾಂ.ಬೆಳ್ಳಿಯ ಕಾಲುಂಗರ, 2500 ರೂ.ಮೌಲ್ಯದ 50 ಗ್ರಾಂ.ಬೆಳ್ಳಿ ಕಾಲ ಚೈನಾ, 2500 ರೂ.ಮೌಲ್ಯದ ಕಾಲ ಚೈನಾ, 12 ಸಾವಿರ ರೂ.ಮೌಲ್ಯದ ಸ್ಯಾಮಸಂಗ್ ಗ್ಯಾಲಕ್ಸಿ ಮೊಬೈಲ್ ಸೇರಿ 5,27,500 ರೂ.ಮೌಲ್ಯದ ನಗನಾಣ್ಯ ಮತ್ತು ಮೊಬೈಲ್ ದೋಚಿಕೊಂಡು ಹೋಗಿದ್ದಾರೆ. ಬೇಸಿಗೆ ಕಾರಣಕ್ಕೆ ಇವರು ಮನೆಗೆ ಬೀಗ ಹಾಕಿಕೊಂಡು ಕುಟುಂಬದ ಸದಸ್ಯರೊಂದಿಗೆ ಮನೆ ಮಾಳಿಗೆ ಮೇಲೆ ಮಲಗಿದ್ದಾಗ ಕಳ್ಳರು ಮನೆ ಬೀಗ ಮುರಿದು ನಗನಾಣ್ಯ ಮೊಬೈಲ್ ದೋಚಿ–ಕೊಂಡು ಹೋಗಿದ್ದಾರೆ ಎಂದು ತಿಳಿದುಬಂದಿದೆ. ಈ ಸಂಬಂಧ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.